## ಒಂದನೇ ಪುಟದಿಂದ

# ಬಿಹಾರ ಚುನಾವಣೆಗೆ ಮುಹೂರ್ತ

ಈ ಬಾರಿ ಬಿಹಾರದಲ್ಲಿ ಮುಖ್ಯಮಂತ್ರಿ ನಿತೀಶ್‌ಕುಮಾರ್ ನೇತೃತ್ವದ ಎನ್‌ಡಿಎ ಮತ್ತು ಆರ್‌ಜೆಡಿ ನೇತೃತ್ವದ ಮಹಾಘಟಬಂಧನ್ ಮಧ್ಯೆ ನೇರ ಸ್ಪರ್ಧೆ ಏರ್ಪಟ್ಟಿದೆ. ಎನ್‌ಡಿಎ ಪ್ರಸ್ತುತ 131 ಸ್ಥಾನಗಳನ್ನು ಹೊಂದಿದ್ದರೆ ವಿರೋಧ ಪಕ್ಷ 111 ಸ್ಥಾನಗಳನ್ನು ಹೊಂದಿದೆ. ಇನ್ನುಳಿದಂತೆ ಬಿಜೆಪಿ 80, ಜೆಡಿ(ಯು) 45, ಎಚ್‌ಎಎಂ(ಎಸ್) 4 ಮತ್ತು ಇಬ್ಬರು ಸ್ವತಂತ್ರರು ಎನ್‌ಡಿಎಗೆ ಬಲ ನೀಡಿದರೆ ಆರ್‌ಜೆಡಿ 77, ಕಾಂಗ್ರೆಸ್ 19, ಸಿಪಿಐ(ಎಂಎಲ್) 11, ಸಿಪಿಐ(ಎಂ) 2 ಮತ್ತು ಸಿಪಿಐ 2 ಸ್ಥಾನ ಹೊಂದಿದೆ.ಕೋವಿಡ್–19 ಸಾಂಕ್ರಾಮಿಕ ರೋಗದ ನಡುವೆ ಬಿಹಾರದಲ್ಲಿ 2020ರ ವಿಧಾನಸಭಾ ಚುನಾವಣೆ ಮೂರು ಹಂತಗಳಲ್ಲಿ ನಡೆದಿತ್ತು. ಎನ್‌ಡಿಎ ಜಯಗಳಿಸಿದ ಬಳಿಕ ನಿತೀಶ್ ಕುಮಾರ್ ಮುಖ್ಯಮಂತ್ರಿಯಾಗಿದ್ದರು. ಹೀಗಿದ್ದರೂ 2022 ರಲ್ಲಿ ನಿತೀಶ್ ಕುಮಾರ್ ಎನ್‌ಡಿಎ ತೊರೆದು ಆರ್‌ಜೆಡಿ ನೇತೃತ್ವದ 'ಮಹಾಘಟಬಂಧನ್' ಜೊತೆ ಸೇರಿ ಸರ್ಕಾರ ರಚಿಸಿದ್ದರು. 2024ರಲ್ಲಿ ಮತ್ತೆ ನಿತೀಶ್ ಕುಮಾರ್ ಮಹಾಘಟಬಂಧನ್ ಜೊತೆಗಿನ ಸಂಬಂಧ ಕಡಿದುಕೊಂಡು ಎನ್‌ಡಿಎ ಜೊತೆಗೆ ಕೈಜೋಡಿಸಿ ಅಧಿಕಾರಕ್ಕೆ ಏರಿದ್ದರು.

## 710 ರೂ.ವರೆಗೆ ಹೆಚ್ಚಳ

 ಹೊಸದಾಗಿ ನೋಂದಣಿಯಾಗುವ ಖಾಸಗಿ ಅಭ್ಯರ್ಥಿಗಳ ನೋಂದಣಿ ಶುಲ್ಕ ಹಾಗೂ ಅರ್ಜಿ ಶುಲ್ಕ  236 ರೂ. ನಿಂದ 248 ರೂ.ಗೆ ಹೆಚ್ಚಳ.

 ಈಗಾಗಲೇ ಖಾಸಗಿ ಅಭ್ಯರ್ಥಿಯಾಗಿ ನೋಂದಣಿಯಾಗಿ ಪರೀಕ್ಷಾ ಶುಲ್ಕ ಪಾವತಿಸಿದ ಅಭ್ಯರ್ಥಿಗಳ ನೋಂದಣಿ ನವೀಕರಣ ಶುಲ್ಕ  69 ರೂ. ನಿಂದ 72 ರೂ.ಗೆ ಹೆಚ್ಚಳ.

ಪುನರಾವರ್ತಿತ ಶಾಲಾ/ ಖಾಸಗಿ ಅಭ್ಯರ್ಥಿಗಳ ಪರೀಕ್ಷಾ ಶುಲ್ಕ

* ಒಂದು ವಿಷಯಕ್ಕೆ– 427 ರೂ ನಿಂದ 448 ಗೆ ಹೆಚ್ಚಳ
* ಎರಡು ವಿಷಯಕ್ಕೆ –532 ರೂನಿಂದ 559 ರೂಗೆ ಹೆಚ್ಚಳ.
* ಮೂರು ಮತ್ತು ಮೂರಕ್ಕಿಂತ ಜಾಸ್ತಿ ವಿಷಯಗಳು  716 ರೂ. ನಿಂದ 752 ರೂ.ಗೆ ಹೆಚ್ಚಳ.

## ಯಾವ ಕ್ರಾಂತಿ ನಡೆಯಲ್ಲ : ಸಿಎಂ

ಇನ್ನೆರಡು ದಿನದಲ್ಲಿ ಪೂರ್ಣಗೊಳ್ಳಲಿದೆ. ಸಮೀಕ್ಷೆ ವಿರೋಧಿಸುವವರು ಸಮಾಜದ ವಿರೋಧಿಗಳಿಗೆ ಸಮ. ಯೋಜನೆ ರೂಪಿಸಲು ಅಂಕಿ ಅಂಶಗಳು ಬೇಕು. ಸಮೀಕ್ಷೆ ಬೇಡ ಎನ್ನುವ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಕೇಂದ್ರ ನಡೆಸುವ ಜಾತಿಗಣತಿ ವಿರೋಧಿಸುತ್ತಾರಾ? ಬದಲಾವಣೆ ಬೇಡದವರು ಬೇಡ ಎನ್ನುತ್ತಾರೆಂದು ಸಮರ್ಥಿಸಿಕೊಂಡರು.

ಲಿಂಗಾಯತ ಪ್ರತ್ಯೇಕ ಧರ್ಮ ವಿಚಾರದಲ್ಲಿ ನನ್ನ ನಿಲುವು ಏನು ಇಲ್ಲ. ಕೆಲ ಸ್ವಾಮೀಜಿಗಳು ಈ ಬಗ್ಗೆ ಮಾತನಾಡುತ್ತಿದ್ದಾರೆ. ಇದರಲ್ಲಿ ನಮ್ಮದೇನಿಲ್ಲ ಎಂದರು. ಈ ವೇಳೆ ಕಿವಿಯಲ್ಲಿ ಮಾಹಿತಿ ನೀಡಲು ಬಂದ ಸಚಿವ ತಂಗಡಗಿಗೆ ಸಿದ್ದು ಗದರಿದರು.

ಗ್ಯಾರಂಟಿ ಯೋಜನೆ ಕೆಲ ತಿಂಗಳು ಬಂದ್ ಆಗಿವೆ ಎಂಬ ಪ್ರಶ್ನೆಗೆ ನಿಮಗೆ ಯಾರು ಹೇಳಿದ್ದು? ಎಂದು ಗರಂ ಆದರು. ಇನ್ನೂ ಇದೇ ವೇಳೆ ಸಾವಿನ ಸಿರಪ್ ಬಗ್ಗೆ ಮಾತನಾಡಿ, ಬೇರೆ ರಾಜ್ಯದಲ್ಲಿ ಕೆಮ್ಮಿನ ಸಿರಪ್ ಸೇವಿಸಿ ಮಕ್ಕಳು ಮೃತಪಟ್ಟ ಹಿನ್ನೆಲೆ ರಾಜ್ಯದಲ್ಲಿ ಅಲರ್ಟ್ ಆಗಲು ಆರೋಗ್ಯ ಇಲಾಖೆಗೆ ಸೂಚಿಸಿರುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಭಾಗಿಯಾಗಿದ್ದರು ಮತ್ತು ಸಚಿವ ಶರಣಪ್ರಕಾಶ್ ಪಾಟೀಲ್, ಜಮೀರ್ ಅಹಮ್ಮದ್, ಶಿವರಾಜ ತಂಗಡಗಿ, ಗ್ಯಾರಂಟಿ ಸ್ಕೀಂ ಅಧ್ಯಕ್ಷ ಹೆಚ್‌ಎಂ ರೇವಣ್ಣ, ಕೆಕೆಆರ್‌ಡಿಬಿ ಅಧ್ಯಕ್ಷ ಅಜೇಯಸಿಂಗ್ ಸೇರಿ ಶಾಸಕ ರಾಘವೇಂದ್ರ ಹಿಟ್ನಾಳ್ ಸಾಥ್ ನೀಡಿದರು.

## ಶೂ ಎಸೆಯಲು ಮುಂದಾದ ವಕೀಲ

ವಕೀಲರಿಗೆ ತಮ್ಮ ವಾದಗಳನ್ನು ಮುಂದುವರಿಸುವಂತೆ ಕೇಳಿಕೊಂಡರು. ಈ ಘಟನೆಯಿಂದ ವಿಚಲಿತರಾಗಬೇಡಿ. ನಾವು ವಿಚಲಿತರಾಗುವುದಿಲ್ಲ. ಈ ವಿಷಯಗಳು ನನ್ನ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಹೇಳಿ ಕಲಾಪ ಮುಂದುವರಿಸಿದರು.ದೆಹಲಿ ಡಿಸಿಪಿ ಮತ್ತು ಸುಪ್ರೀಂ ಕೋರ್ಟ್ ಭದ್ರತಾ ಅಧಿಕಾರಿಗಳು ಕಿಶೋರ್ ರಾಕೇಶ್ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.ಮಧ್ಯಪ್ರದೇಶದ ಯುನೆಸ್ಕೋ ವ್ವಿ ಪರಂಪರೆಗೆ ಸೇರ್ಪಡೆಯಾಗಿರುವ ಖಜುರಾಹೊ ದೇವಾಲಯ ಸಂಕೀರ್ಣದ ಭಾಗವಾಗಿರುವ ಜವಾರಿ ದೇವಾಲಯದಲ್ಲಿ ಏಳು ಅಡಿ ಎತ್ತರದ ವಿಷ್ಣುವಿನ ವಿಗ್ರಹವನ್ನು ಪುನರ್ನಿರ್ಮಿಸಲು ಮತ್ತು ಮರುಸ್ಥಾಪಿಸಲು ನಿರ್ದೇಶನಗಳನ್ನು ಕೋರಿ ಸಲ್ಲಿಸಲಾದ ಅರ್ಜಿಯನ್ನು ಸಿಜೆಐ ಗವಾಯಿ ನೇತೃತ್ವದ ಪೀಠ ಸೆ.16 ರಂದು ವಜಾಗೊಳಿಸಿತ್ತು.

ಈ ಪ್ರಕರಣ ಭಾರತೀಯ ಪುರಾತತ್ವ ಸರ್ವೇಕ್ಷಣಾ ಸಮೀಕ್ಷೆಯ ವ್ಯಾಪ್ತಿಗೆ ಬರುತ್ತದೆಯೇ ಹೊರತು ನ್ಯಾಯಾಲಯದ ವ್ಯಾಪ್ತಿಗೆ ಬರುವುದಿಲ್ಲ. ಏನೇ ಮಾಡುವುದರಿದ್ದರೂ ಎಎಸ್‌ಐ ಅನುಮತಿ ನೀಡಬೇಕಾಗಿದೆ. ಕ್ಷಮಿಸಿ ಎಂದು ತಿಳಿಸಿದ್ದರು.ಸಂಪೂರ್ಣವಾಗಿ ಪ್ರಚಾರ ಹಿತಾಸಕ್ತಿಗಾಗಿ ಈ ಅರ್ಜಿಯನ್ನು ನೀವು ಸಲ್ಲಿಕೆ ಮಾಡಿದ್ದೀರಿ. ಹೋಗಿ ದೇವರಲ್ಲೇ ಏನಾದರೂ ಮಾಡುವಂತೆ ಬೇಡಿಕೊಳ್ಳಿ. ನೀವು ವಿಷ್ಣುವಿನ ಕಟ್ಟಾ ಭಕ್ತ ಎಂದು ಹೇಳುತ್ತೀರಿ. ಆದ್ದರಿಂದ ಈಗಲೇ ಹೋಗಿ ಪ್ರಾರ್ಥಿಸಿ ಮತ್ತು ಸ್ವಲ್ಪ ಧ್ಯಾನ ಮಾಡಿ ಎಂದು ಸಿಜೆಐ ಗವಾಯಿ ಹೇಳಿದ್ದರು.

ಮೊಘಲ್ ಆಕ್ರಮಣದ ಸಮಯದಲ್ಲಿ ವಿಗ್ರಹವು ವಿರೂಪಗೊಂಡಿದ್ದು, ಅದನ್ನು ಪುನಃಸ್ಥಾಪಿಸಲು ಸರ್ಕಾರಕ್ಕೆ ಪದೇ ಪದೇ ಮನವಿ ಮಾಡಿದರೂ ಅದು ಅದೇ ಸ್ಥಿತಿಯಲ್ಲಿದೆ ಎಂದು ರಾಕೇಶ್ ದಲಾಲ್ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

## ಸಾವಳಿಯಲ್ಲಿ 15 ಲಕ್ಷ ರೂ ಗಾಂಜಾ ಗಿಡ ವಶ

ಉಪಾಧೀಕ್ಷಕರು ಭಾಲ್ಕಿ,ಸಿ. ಪಿ.ಐ ಶ್ರೀಕಾಂತ ಅಲ್ಲಾಪುರೆ, ಪಿ. ಎಸ್. ಐ. ಆಶಾ, ಮತ್ತು ಸಿಪಿಐ ಕಮಲನಗರ ಪೊಲೀಸ ಠಾಣೆಯ ಸಿಬ್ಬಂದಿಯವರಾದ ಲೋಕೇಶ, ಇಮ್ರಾನ,ನವನಾಥ, ವೈಜಿನಾಥ,ನರೇಶ, ಮಲ್ಲಿಕಾರ್ಜುನ, ಸಿದ್ದಲಿಂಗ, ವಸಂತ, ನಾಗನಾಥ, ಅಂಕುಶ, ಮತ್ತು ಮಹಾದೇವ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ,ಪ್ರವೀಣ ಮನೋಹರ ಬಿರಾದಾರ, ರಮೇಶ ಶರಣಪ್ಪ ಸಂಗೊಳಗಿ (ವಿ.ಎ) ಉಪಸ್ಥಿತರಿದ್ದರು.ಸದರಿ ಪ್ರಕರಣದಲ್ಲಿ ಕರ್ತವ್ಯ ನಿರ್ವಹಿಸಿದ ಎಲ್ಲಾ ಅಧಿಕಾರಿ ಸಿಬ್ಬಂದಿಯವರಿಗೆ ಪೊಲೀಸ ಅಧೀಕ್ಷಕರು ಬೀದರ ರವರು ಪ್ರಶಂಸೆ ವ್ಯಕ್ತ ಪಡಿಸಿದ್ದಾರೆ.

# ಅಭಿಮಾನಿ ಬಳಗದಿಂದ ಮಾಜಿ ಶಾಸಕ ಖೇಣಿ ಹುಟ್ಟು ಹಬ್ಬ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 06 : ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಎಖೇಳ್ಳಿ ಹೋರವಲಯ ಇರುವ ರೇಕುಳಗಿ ಮೌಂಟ್ ನಲ್ಲಿ ಭಾನುವಾರ ಹಣ್ಣು ಹಂಪಲುಗಳನ್ನು ವಿತರಿಸಿ ಕೇಕ್ ಕತ್ತರಸುವ ಮೂಲಕ ಮಾಜಿ ಶಾಸಕ ಅಶೋಕ್ ಖೇಣಿ ಅವರ ಹುಟ್ಟು ಹಬ್ಬವನ್ನು ಪೂಜ್ಯ ಭಂತೆಜಿ ರವರ ನೇತೃತ್ವದಲ್ಲಿ ಸರಳವಾಗಿ ಆಚರಿಸಲಾಯಿತು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮೀನಾಕ್ಷಿ ಸಂಗ್ರಾಮ ಮಾತನಾಡಿ, ಅಶೋಕ್ ಖೇಣಿ ಅಪರೂಪದ ರಾಜಕಾರಣಿ,ಯಾವುದೇ ಜಾತಿ ಧರ್ಮ ಭೇದ ಎನ್ನದೆ ಎಲ್ಲರನ್ನ ಸಮನಾಗಿ ಜೊತೆಗೂಡಿಸಿ ಅಭಿವೃದ್ಧಿವೊಂದೇ ನನ್ನ ಮಂತ್ರ ಎಂಬಂತೆ ಕೆಲಸ ಮಾಡುತ್ತಾ ಬಂದಿದ್ದಾರೆ.

ಇಂತಹ ವ್ಯಕ್ತಿತ್ವ ಹೊಂದಿರುವ ಅಶೋಕ್ ಖೇಣಿ ಅವರನ್ನು ದೇವರು ಇನ್ನೂ ಹೆಚ್ಚಿನ ಆರೋಗ್ಯ ಕೊಟ್ಟು ಕಾಪಾಡಲಿ.ಹಾಗೂ ಈ ಕ್ಷೇತ್ರದಲ್ಲಿ ಮತ್ತೆ ಅಶೋಕ ಖೇಣಿ ಗೆದ್ದು ಬರಲಿ, ಅದಕ್ಕೆ ನಾವು ಕೂಡಿ ಶ್ರಮಿಸೋಣ ಎಂದು ಹೇಳಿದರು.

ಕಾಂಗ್ರೆಸ್ ಮುಖಂಡ ತನ್ವಿರ್ ಅಹ್ಮದ್ ಖಾನ್ ರವರು ಮಾತನಾಡಿ ಬೀದರ್ ಜಿಲ್ಲೆಯ ಸಣ್ಣ ಗ್ರಾಮದಲ್ಲಿ ಹುಟ್ಟಿ ಇಂದು ದೇಶ,ವಿ ದೇಶದಲ್ಲಿ ಹೆಸರು ಮಾಡಿರುವಂತಹ ಅಶೋಕ್ ಖೇಣಿಯವರು ಬೀದರ ದಕ್ಷಿಣ ಕ್ಷೇತ್ರದ ಶಾಸಕರಾಗಿದ್ದಾಗ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ.

ಸಣ್ಣ ಪುಟ್ಟ ತಪ್ಪಿನಿಂದ ಅಶೋಕ ಖೇಣಿ ಸೋಲು ಅನುಭವಿಸಬೇಕಾಯಿತು. ಬರುವ ದಿನಗಳಲ್ಲಿ ಮತ್ತೆ ಅಶೋಕ ಖೇಣಿ ಕೈ ಬಲಪಡಿಸಲು ನಾವೆಲ್ಲರೂ ಶಕ್ತಿ ಮೀರಿ ಪ್ರಯತ್ನಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬ್ಲಾಕ್ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷರಾದ ಕರೀಮ್ ಸಾಬ್ ಕಮಠಾಣ ಮುಖಂಡರಾದ ಗೌತಮ್ ಬಗದಲ್, ವೈಜಿನಾಥ ಕಟ್ಟಿಮನಿ, ಶಿವಕುಮಾರ್ ಮುತ್ತಂಗಿ, ಆಸ್ಕರ್ ಫರ್ನಾಂಡಿಸ್, ಖತುಬ್ ಬೋರಾಳ, ಜುಬೇರ ಅಮಾಲಾಪೂರ, ಇನಾಯತ್ ಅಲಿ,ಜೈ ಪ್ರಕಾಶ್ , ಬಸವರಾಜ ರಾಜಗೀರಾ, ಬಸವರಾಜ ವಡ್ಡೆ, ಮಾರ್ಟಿನ್, ಅಭಿಮಾನಿಗಳಾದ ಪ್ರಶಾಂತ ಜೈನ್, ಅಶೋಕ್ ಶೇಕಾಪೂರ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ನ.2ರಂದು ಕಲಬುರಗಿಯಲ್ಲಿ ಪೂರ್ವ ಸಿದ್ಧತಾ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.6:ಈಡಿಗ,ಬಿಲ್ಲವ ಸೇರಿದಂತೆ 26 ಪಂಗಡಗಳ ಬಹುದಿನಗಳ ಬೇಡಿಕೆಗಳನ್ನು ಈಡೇರಿಸದೆ ರಾಜ್ಯ ಸರ್ಕಾರವು ಸಮುದಾಯವನ್ನು ಕಡೆಗಣಿಸುವುದರ ವಿರುದ್ಧ ಸಮುದಾಯದವರಲ್ಲಿ ಜಾಗೃತಿ ಮೂಡಿಸಲು ಜನವರಿ 6 ರಿಂದ 42 ದಿನಗಳ ಕಾಲ ಐತಿಹಾಸಿಕ ಪಾದಯಾತ್ರೆಯನ್ನು ನಡೆಸಲು ನಿರ್ಧರಿಸಲಾಗಿದೆ ಎಂದು ಚಿತಾಪುರ ತಾಲೂಕು ಕರದಾಳು ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠದ ಪೀಠಾಧಿಪತಿಗಳಾದ ಡಾ. ಪ್ರಣವಾನಂದ ಶ್ರೀಗಳು ಘೋಷಣೆ ಮಾಡಿದ್ದಾರೆ.

ಜನವರಿ 6 ರಂದು ಶಕ್ತಿ ಪೀಠದಿಂದ ಪಾದಯಾತ್ರೆ ಪ್ರಾರಂಭಗೊಂಡು 42 ದಿನಗಳಲ್ಲಿ 700 ಕಿಲೋಮೀಟರ್ ಪಯಣಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್ ತಲುಪಲಿದೆ. ಇಷ್ಟರಲ್ಲಿ ಬೇಡಿಕೆ ಈಡೇರದಿದ್ದರೆ ಆಮರಣಾಂತ ಉಪವಾಸ ಸತ್ಯಾಗ್ರಹವನ್ನು ಮುಂದುವರಿಸಲಾಗುವುದು ಎಂದು ಅಕ್ಟೋಬರ್ ಆರರಂದು ನಡೆದ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

ಈ ಹಿಂದಿನ ಸರಕಾರವಿದ್ದಾಗ ಚಿಂಚೋಳಿಯಿಂದ ಕಲಬುರಗಿ ವರೆಗೆ ಹಾಗೂ ಮಂಗಳೂರಿಂದ ಫ್ರೀಡಂ ಪಾರ್ಕ್ ವರೆಗೆ ಪಾದಯಾತ್ರೆ ಮಾಡಿದ ಪರಿಣಾಮವಾಗಿ ಎರಡು ಪ್ರಮುಖ ಬೇಡಿಕೆಗಳಾದ ಬ್ರಹ್ಮಶ್ರೀ ನಾರಾಯಣ ಗುರು ಈಡಿಗ ನಿಗಮ ಹಾಗೂ ಕುಲಶಾಸ್ತ್ರೀಯ ಅಧ್ಯಯನಕ್ಕೆ ಬಿಜೆಪಿ ಸರಕಾರ ಘೋಷಣೆ ಮಾಡಿದ್ದು. ಆದರೆ ಈ ಬಗ್ಗೆ ಅನುದಾನ ಪ್ರಕಟಿಸದೆ ಮೂರು ಬಜೆಟ್ ಗಳ ಮಂಡನೆ ಆದರೂ ನಯಾ ಪೈಸೆ ನೀಡದೆ ಈ ಸರಕಾರ ಸಮುದಾಯದವರ ಬೇಡಿಕೆಗಳನ್ನು ಕಡೆಗಣಿಸಿತ್ತು ಪ್ರಬಲ ಒತ್ತಾಯದ ನಂತರ ಮೊನ್ನೆಯಷ್ಟೇ ಈಡಿಗ ನಿಗಮಕ್ಕೆ ಮಂಜುನಾಥ ಪೂಜಾರಿ ಅವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿದರೂ ಹತ್ತು ದಿನಗಳಾದರೂ ಆದೇಶ ಪತ್ರವನ್ನು ನೀಡಿಲ್ಲ. ಈ ಹಿಂದೆ ಬಿಜೆಪಿ ಸರಕಾರವಿದ್ದಾಗ ಸಮುದಾಯದವರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ ಸಚಿವ ಪ್ರಿಯಾಂಕ ಖರ್ಗೆ, ಡಾ. ಶರಣ ಪ್ರಕಾಶ್ ಪಾಟೀಲ್ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗವನ್ನು ಪ್ರತಿನಿಧಿಸುವ ರಾಜಕೀಯ ನಾಯಕರು ಪೂರ್ಣ ಬೆಂಬಲ ನೀಡುವುದಾಗಿ ಮತ್ತು ತಮ್ಮ ಸರಕಾರ ಬಂದರೆ ಆಶ್ವಾಸನೆಗಳನ್ನು ಈಡೇರಿಸುವುದಾಗಿ ಭರವಸೆ ಕೊಟ್ಟಿದ್ದರೂ ಸರಕಾರ ಬಂದು ಎರಡುವರೆ ವರ್ಷ ಕಳೆದರೂ ಕನಿಷ್ಠ ಮುಖ್ಯಮಂತ್ರಿಗಳ ಭೇಟಿಗೂ ಅವಕಾಶ ಮಾಡಿಕೊಡದೆ ಕಡೆಗಣಿಸಿರುವುದು ಖಂಡನೀಯ. ಸಮುದಾಯದ ನಿಗಮಕ್ಕೆ 500 ಕೋಟಿ ಅನುದಾನ, ಬೆಂಗಳೂರಿನಲ್ಲಿ ನಾರಾಯಣ ಗುರುಗಳ ಪ್ರತಿಮೆ ಪ್ರತಿಷ್ಠಾಪನೆ, ಸಮಾಜವನ್ನು ಈಗಿರುವ 2 ಎ ಯಿಂದ ಪರಿಶಿಷ್ಟ ವರ್ಗಕ್ಕೆ ಶಿಫಾರಸು, ಮದ್ಯ ಮಾರಾಟದಲ್ಲಿ ಶೇಕಡ 50ರಷ್ಟು ಸಮುದಾಯದವರಿಗೆ ಮೀಸಲಾತಿ, ಕುಲಕಸಬು ಕಳೆದುಕೊಂಡವರಿಗೆ ಪುನರ್ವಸತಿ, ನಾರಾಯಣ ಗುರುಗಳ ಅಧ್ಯಯನ ಪೀಠ ಪ್ರಾರಂಭ ಸೇರಿದಂತೆ ಒಟ್ಟು 16 ಬೇಡಿಕೆಗಳನ್ನು ಒತ್ತಾಯಿಸಿ ಕರದಾಳು ಶಕ್ತಿಪೀಠದಿಂದ ಚಿತ್ತಾಪುರ, ವಾಡಿ, ಶಹಬಾದ್, ಜೇವರ್ಗಿ, ಶಹಾಪುರ, ಲಿಂಗಸಗೂರು, ತಾವರೆಗೆರೆ, ಗಂಗಾವತಿ, ಹೊಸಪೇಟೆ, ಚಿತ್ರದುರ್ಗ ಮಾರ್ಗವಾಗಿ ಬೆಂಗಳೂರಿಗೆ ಪಾದಯಾತ್ರೆ ಕೈಗೊಳ್ಳಲಾಗುವುದು ಎಂದು ಸ್ವಾಮೀಜಿ ಹೇಳಿದರು. ಪಾದಯಾತ್ರೆಯ ಪೂರ್ವಭಾವಿ ಸಿದ್ಧತೆಗಾಗಿ ನವೆಂಬರ್ ಎರಡರಂದು ಕಲಬುರಗಿಯ ಆಮಂತ್ರಣ ಹೋಟೆಲ್ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ಸಮುದಾಯದ ಮುಖಂಡರ ಸಭೆಯನ್ನು ಕರೆಯಲಾಗಿದೆ. ರಾಷ್ಟ್ರೀಯ ಈಡಿಗ ಮಹಾಮಂಡಲವು ಪಾದಯಾತ್ರೆಗೆ ಈಗಾಗಲೇ ಬೆಂಬಲ ವ್ಯಕ್ತಪಡಿಸಿದೆ. ಸಮುದಾಯದ ರಾಷ್ಟ್ರೀಯ ನಾಯಕರಾದ ಬಿ.ಕೆ ಹರಿಪ್ರಸಾದ್, ತೆಲಂಗಾಣ ಮಾಜಿ ಸಚಿವರಾದ ಶ್ರೀನಿವಾಸ ಗೌಡ, ಕೋಟ ಶ್ರೀನಿವಾಸ ಪೂಜಾರಿ ಮುಂತಾದವರ ಮಾರ್ಗದರ್ಶನದಲ್ಲಿ ಪಾದಯಾತ್ರೆ ನಿರ್ಧಾರ ಕೈಗೊಳ್ಳಲಾಗಿದೆ. ಪಾದಯಾತ್ರೆ ಉದ್ಘಾಟನೆಗೆ ಕೇಂದ್ರ ಸಚಿವರಾದ ಯಸ್ಸೊ ಶ್ರೀಪಾದ ನಾಯಕ ಸೇರಿದಂತೆ ಸಮಾಜದ ಸಚಿವರು ಶಾಸಕರು ಸ್ವಾಮೀಜಿಗಳನ್ನು ಆಹ್ವಾನಿಸಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಶಕ್ತಿ ಪೀಠದ ಟ್ರಸ್ಟಿಗಳಾದ ವೆಂಕಟೇಶ ಕಡೇಚೂರ್, ವೆಂಕಟೇಶಗುಂಡಾನೂರು, ಮುಖಂಡರಾದ ಮಲ್ಲಿಕಾರ್ಜುನ ಕುಂದಿ ಮಹೇಶ್ ಹೋಳಕುಂದ ಅಶೋಕ್ ಭೀಮಳ್ಳಿ ರಮೇಶ್ ಗುತ್ತೇದಾರ್ ಹಾಗೂ ಕರದಾಳು ಶಕ್ತಿ ಪೀಠದ ಮಾಧ್ಯಮ ಸಂಚಾಲಕರಾದ ಡಾ. ಸದಾನಂದ ಪೆರ್ಲ ಮತ್ತಿತರರಿದ್ದರು.

### ಜಯಮೃತ್ಯುಂಜಯ ಶ್ರೀಗಳ ಪದಚ್ಯುತಿಗೆ ಆಕ್ರೋಶ

ಕೂಡಲಸಂಗಮ ಪಂಚಮಸಾಲಿ ಪೀಠದ ಪೂಜ್ಯರಾದ ಶ್ರೀ ಜಯಮೃತ್ಯುಂಜಯ ಸ್ವಾಮೀಜಿಯವರನ್ನು ಪಂಚಮಸಾಲಿ ಪೀಠದಿಂದ ಪದಚ್ಯುತಿಗೊಳಿಸಿರುವುದು ಅಕ್ಷಮ್ಯ ಅಪರಾಧವಾಗಿದೆ. ಪಂಚಮಸಾಲಿ ಸಮುದಾಯದಲ್ಲಿರುವ ಭಿನ್ನಾಭಿಪ್ರಾಯಗಳನ್ನು ತಮ್ಮೊಳಗೆ ಚರ್ಚಿಸಿ ಪರಿಹಾರ ಕೈಗೊಳ್ಳಬೇಕೆ ವಿನಃ ಏಕಾಏಕಿ ಪದಚ್ಯುತಿಗೊಳಿಸಿದ ವಿಜಯಾನಂದ ಕಾಶಪ್ಪನವರು ಸೇರಿದಂತೆ ಬೆಂಬಲಿಗರ ಕ್ರಮ ಖಂಡನೀಯ. ರಾಜಕೀಯ ತೆವಳಿಗಾಗಿ ಸ್ವಾಮೀಜಿಯವರನ್ನು ಬಲಿಪಶು ಮಾಡಿದ ಘಟನೆ ತೀರಾ ಅನ್ಯಾಯವಾಗಿದ್ದು ಈ ಬಗ್ಗೆ ಕರ್ನಾಟಕ ಸಾಧುಸಂತರ ಸಮಾವೇಶದಲ್ಲಿ ಚರ್ಚಿಸಿ ಮುಂದಿನ ಕ್ರಮಕ್ಕೆ ಸಿದ್ಧತೆ ಕೈಗೊಳ್ಳಲಾಗುತ್ತದೆ. ರಾಜ್ಯದ ಎಲ್ಲಾ ಸ್ವಾಮೀಜಿಗಳು ಇಂತಹ ಘಟನೆಗಳನ್ನು ಏಕಕಂಠದಿಂದ ಖಂಡಿಸಬೇಕಾಗಿದೆ.

# ಗಮನಸೆಳೆದ 'ಪ್ರಥಮ ಪಲ್ಲವ' ನೃತ್ಯರೂಪಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.6–ನಗರದ ನಟರಾಜ ಸಂಗೀತ ನೃತ್ಯ ನಿಕೇತನದ ವಿದ್ಯಾರ್ಥಿನಿಯರ ನೃತ್ಯರೂಪಕ ಪ್ರದರ್ಶನ ಪ್ರಥಮ ಪಲ್ಲವ ಪ್ರೇಕ್ಷಕರ ಮನಸೂರೆಗೊಳಿಸಿತು.

ನಗರದ ಅಂಬೇಡ್ಕರ್ ಭವನದಲ್ಲಿ ಜರುಗಿದ ಸಮಾರಂಭವನ್ನು ವಿದ್ಯಾಪ್ರಸಾರಕ ಮಂಡಳದ ಗೌರವ ಕಾರ್ಯದರ್ಶಿ ಡಾ.ಗಿರೀಶ ಮಾಸೂರಕರ, ಭೀಮಸೇನಾಚಾರ್ಯ ಪಾಂಡುರಂಗಿ, ಪ್ರವಿಣಾಚಾರ್ಯ ಗುಮಾಸ್ತೆ, ವಿದುಷಿ ಲಕ್ಷ್ಮೀ ತೇರದಾಳಮಠ, ದೀಕ್ಷಾ ಬಿಸೇ ಉದ್ಘಾಟಿಸಿ ಮಕ್ಕಳ ಸಾಧನೆಗೆ ಪ್ರಶಂಸೆ ವ್ಯಕ್ತಪಡಿಸಿದರು.

ವಿದುಷಿ ಶುಭದಾ ದೇಶಪಾಂಡೆ ಅವರ ನೇತೃತ್ವದಲ್ಲಿ ಕಾರ್ಯಕ್ರಮಗಳು ಜರುಗಿದವು. ನೃತ್ಯರೂಪಕಕ್ಕೆ ವಿದ್ವಾನ್ ವಿನೀತ ಗಾಯನ, ಗೌತಮ್ ಅವರ ಮೃದಂಗ ವಾದನ, ಸಮೃದ್ಧ ಅವರ ಕೊಳಲು ವಾದನವಿತ್ತು. ಮಲ್ಲಾರಿ, ಜತಿಸ್ವರಂ, ವಾತ್ಸಲ್ಯ ಪದಂ, ಶಿವಪದಂ, ತಿಲ್ಲಾನ, ಮಂಗಳಂ ನೃತ್ಯರೂಪಕಗಳನ್ನು ಕಿಶೋರಿಯರಾದ ಲಕ್ಷ್ಮೀ ಗುಮಾಸ್ತೆ, ವೈಶಾಲಿ ಕಾಗವಾಡೆ, ಸನ್ನಿಧಿ ದೊಡ್ಡಲಿಂಗಣ್ಣವರ, ಆರಾಧ್ಯ ಪೂಜಾರಿ, ರಶ್ಮಿ ರೊಟ್ಟಿ ಪ್ರಸ್ತುತಪಡಿಸಿದರು.

ಮಧುರಾ ಸಂಪಗಾಂವಿ. ಅನನ್ಯ ಕುಲಕರ್ಣಿ, ಮೇಘಾ ಅನಗವಾಡಿ ಅವರು ನೃತ್ಯರೂಪಕವನ್ನು ಮನೋಜ್ಞವಾಗಿ ಸಂಯೋಜಿಸಿ ಚಪ್ಪಾಳೆ ಗಿಟ್ಟಿಸಿದರು..ಪ್ರಿಯಾಂಕ ಕುಲಕರ್ಣಿ ಅವರ ಗಾಯನ ಗಮನಸೆಳೆಯಿತು.

## ಯುವಕ ಕಾಣೆ: ಪತ್ತೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.06:ನಗರದ ವಿದ್ಯಾನಗರ ಬಡಾವಣೆಯ ಸೌದಗರ್ ಕಾಲೋನಿಯ ಸಾಯಿರಾಮ್ ಚೌಧರಿ ಎನ್ನುವ 24 ವರ್ಷದ ಯುವಕ ಅ.04 ರಂದು ದೇವಸ್ಥಾನಕ್ಕೆ ಹೋಗಿ ಬರುವುದಾಗಿ ಹೇಳಿ ಕಾಣೆಯಾಗಿದ್ದು, ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.ಚಹರೆ ಗುರುತು: ಅಂ–ದಾಜು 6.2 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧರಣ ಮೈಕಟ್ಟು, ಬಲಗೈ ಮೇಲೆ ವೆಂಕಟ ಬಾಲಾಜೀ ಇಂಗ್ಲೀಷ್‌ನಲ್ಲಿ ಹಚ್ಚೆ ಇರುತ್ತದೆ.ಕಾಣೆಯಾದ ಸಂದರ್ಭದಲ್ಲಿ ಹಳದಿ ಬಣ್ಣದ ಟೀ–ಶರ್ಟ್ ಹಾಗೂ ಗ್ರೇ ಕಲರ್ ಜೀನ್ಸ್ ಪ್ಯಾಂಟ್ ಮತ್ತು ಸ್ಯಾಂಡಲ್ಸ್ ಚಪ್ಪಲಿ ಧರಿಸಿರುತ್ತಾನೆ. ಯುವಕನ ಬಗ್ಗೆ ಸುಳಿವು ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731,244145 ಅಥವಾ ಪಿಎಸ್‌ಐ ಮೊ.9480820385, ಪಿಐ ಮೊ.9480803047 ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು

## ಅನಾಮಧೇಯ ಮೃತದೇಹ ಪತ್ತೆ; ವಾರಸುದಾರರ ಪತ್ತೆಗೆ ಮನವಿ


ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.06:ಬಳ್ಳಾರಿ ರೈಲು ನಿಲ್ದಾಣ ವ್ಯಾಪ್ತಿಯ ಹದ್ದಿನಗುಂಡು–ಹಗರಿ ರೈಲ್ವೇ ನಿಲ್ದಾಣಗಳ ಮಧ್ಯ ರೈಲ್ವೇ ಕೆ.ಎಂ.ನಂ 214/32–34 ನೇದ್ದರ ಹಳಿಯ ಮಧ್ಯೆ ಯಾವುದೋ ಚಲಿಸುವ ರೈಲುಗಾಡಿಗೆ ಆಕಸ್ಮಿಕವಾಗಿ ಬಿದ್ದು ಅಂದಾಜು 50 ವರ್ಷದ ಅನಾಮಧೇಯ ವ್ಯಕ್ತಿಯು ಅ.04 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಪ್ರಕಟಣೆ ಹೊರಡಿಸಿದ್ದಾರೆ.

ಮೃತನ ಚಹರೆ: ಎತ್ತರ ಸುಮಾರು 5.6 ಅಡಿ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಉದ್ದ ಮೂಗು, ಅಗಲವಾದ ಹಣೆ, ತಲೆ ಮತ್ತು ಗಡ್ಡ, ಮೀಸೆ ಬೋಳಿಸಿರುತ್ತಾನೆ.

ಮುಂಗೈ ಮೇಲೆ ಎಸ್.ಪಿ.ಎಸ್.ಎಸ್. ಆರ್.ಎಸ್ ಎಂದು ಅಚ್ಚೆ ಗುರುತು ಇರುತ್ತದೆ.ಮೃತನ ಮೈ ಮೇಲೆ ಗೋಲ್ಡನ್ ಕಲರ್ ತುಂಬುತೋಳಿನ ಶರ್ಟ್, ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಇರುತ್ತದೆ.ಮೇಲ್ಕಂಡ ಚಹರೆ ಗುರುತುಳ್ಳ ಮೃತನ ವಾರಸುದಾರರ ಬಗ್ಗೆ ಮಾಹಿತಿ ಇದ್ದಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕರ ಮೊ:9480802131 ಅಥವಾ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕರ ಮೊ:9480800471 ಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

# ಮಹರ್ಷಿ ವಾಲ್ಮೀಕಿ ಮನುಕುಲದ ಬೆಳಕು



ಮಹರ್ಷಿ ವಾಲ್ಮೀಕಿ ಅವರು ರಾಮಾಯಣವನ್ನು ಸಂಸ್ಕೃತದಲ್ಲಿ ರಚಿಸಿದ್ದಾರೆ. ಇದರಲ್ಲಿ ಒಟ್ಟು 24,000 ಶ್ಲೋಕಗಳಿವೆ. ಅವರು ಭಾರತದ ಅತ್ಯಂತ ಶ್ರೇಷ್ಠ ಋಷಿಗಳು, ಕವಿಗಳೆಂದು ಪರಿಗಣಿಸಲ್ಪಟ್ಟಿದ್ದಾರೆ. ಈ ದಿನವನ್ನು 'ಪ್ರಗತ್ ದಿವಸ್' ಎಂದು ಕರೆಯಲಾಗುತ್ತದೆ, ಅಂದರೆ ಜ್ಞಾನೋದಯದ ದಿನ. ವಾಲ್ಮೀಕಿ ಅವರು ತಮ್ಮ ಆಧ್ಯಾತ್ಮಿಕ ಜ್ಞಾನ ಮತ್ತು ಬೋಧನೆಗಳ ಮೂಲಕ ಭಾರತೀಯ ಸಂಸ್ಕೃತಿಯ ಮೇಲೆ ಹೊಸ ಬೆಳಕು ಬೀರಿದ್ದಾರೆ.

ಭಾರತದ ಮೂಲನಿವಾಸಿಗಳಲ್ಲಿ ಬೇಡರು ಪ್ರಮುಖವಾಗಿದ್ದಾರೆ. ತ್ರೇತಾಯುಗ, ದ್ವಾಪರಯುಗ, ಕಲಿಯುಗ ಈ ಎಲ್ಲಾ ಯುಗಗಳಲ್ಲೂ ಭಾರತದ ಸಂಸ್ಕೃತಿಗೆ ಬೇಡರ ಸಮುದಾಯದ ಕೊಡುಗೆ ಅಪಾರವಿದೆ. ಭಾರತದ ಸಂಸ್ಕೃತಿಗೆ ಅಮೂಲ್ಯವಾದ ಕೊಡಗೆಯನ್ನು ನೀಡಿದ್ದಾರೆ. ಮಹರ್ಷಿ ವಾಲ್ಮೀಕಿಯವರು ರಾಮಾಯಣವನ್ನು ರಚಿಸಿದ ಆದಿಕವಿಯಾಗಿದ್ದಾರೆ. ಇವರ ರಚಿಸಿದ ರಾಮಾಯಣ ಗ್ರಂಥವು ವಿಶ್ವವ್ಯಾಪಿ ನೂರಾರು ಭಾಷೆಗಳಿಗೆ ತರ್ಜುಮೆಯಾಗಿ ವಿಶ್ವ ಮಾನ್ಯತೆಯನ್ನು ಪಡೆದಿದೆ. ಅಂದು ಇಂದಿನ ಮನುಕುಲದ ಎಲ್ಲಾ ಸಮಸ್ಯೆಗಳಿಗೆ ಒಂದಲ್ಲ ಒಂದು ರೀತಿಯಲ್ಲಿ ಪರಿಹಾರವನ್ನು ರಾಮಾಯಣ ಮಹಾಕಾವ್ಯದ ಮೂಲಕ ಮಹರ್ಷಿ ವಾಲ್ಮೀಕಿ ಅವರು ತೋರಿದ್ದಾರೆ. ಅವರ ರಾಮಾಯಣ ಮಹಾಕಾವ್ಯ ನಿತ್ಯ ನಿರಂತರವಾಗಿ ಇಂದಿಗೂ ಮನುಕುಲ ಬೆಳಗುತ್ತಿದೆ..

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.6–ಆದಿಕವಿ ಮಹರ್ಷಿ ವಾಲ್ಮೀಕಿ ಅವರ ಜನ್ಮದಿನವನ್ನು ಭರತ ಖಂಡದಲ್ಲಿ ಹಬ್ಬವನ್ನಾಗಿ ಆಚರಿಸಲಾಗುತ್ತಿದೆ. ಇದು ಪ್ರತಿ ವರ್ಷ ಶರದ್ ಪೂರ್ಣಿಮೆ ಅಥವಾ ಅಶ್ವಿನ್ ಹುಣ್ಣಿಮೆಯಂದು ಆಚರಿಸಲಾಗುತ್ತದೆ. ಮಹರ್ಷಿ ವಾಲ್ಮೀಕಿ ಅವರು 'ರಾಮಾಯಣ' ಮಹಾಕಾವ್ಯದ ಕರ್ತೃ ಮತ್ತು 'ಆದಿಕವಿ' ಎಂದು ಪ್ರಸಿದ್ಧರಾಗಿದ್ದಾರೆ. ಈ ದಿನದಂದು ಭಾರತೀಯರೆಲ್ಲರೂ ಭಕ್ತಿ ಮತ್ತು ಭಾವದಿಂದ ಪೂಜಿಸಿ, ಪ್ರಾರ್ಥನೆಯ ಮೂಲಕ ಮಹರ್ಷಿ ವಾಲ್ಮೀಕಿ ಅವರ ಜ್ಞಾನ ಸಂಪತ್ತು ಮತ್ತು ಕೊಡುಗೆಗಳನ್ನು ಸ್ಮರಣೆ ಮಾಡುವದರೊಂದಿಗೆ ಮುಂದಿನ ಪೀಳಿಗೆಗೆ ಅವರ ಹಾಕಿ ಕೊಟ್ಟಿರುವ ಸಾಮಾಜಿಕ, ಕೌಟುಂಬಿಕ ಮಾನವೀಯ ಮೌಲ್ಯಗಳನ್ನು ಉಳಿಸಿ, ಬೆಳಸಿ, ಅಳವಡಿಸಿಕೊಳ್ಳಬೇಕಾದ ಅಗತ್ಯತೆ ಇದೆ.

ನಮ್ಮ ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರು ಬಯಸಿರುವ 'ರಾಮರಾಜ್ಯ' ಪರಿಕಲ್ಪನೆ ಲಭ್ಯವಾಗಿದ್ದು ಮಹರ್ಷಿ ವಾಲ್ಮೀಕಿ ಅವರು ರಚಿಸಿದ 'ರಾಮಾಯಣ' ಮಹಾಕಾವ್ಯದಿಂದ ಎಂಬುದು ನಿರ್ವಿವಾದ. ಜಾತಿರಹಿತ, ವರ್ಗರಹಿತ, ಶೋಷಣೆರಹಿತ, ಸಮಪಾಲು–ಸಮಬಾಳು, ಸಮಾನ ಅವಕಾಶದ ಸಮಾಜವೇ 'ರಾಮರಾಜ್ಯ– ಎಂಬುದನ್ನು ಮಹರ್ಷಿ ವಾಲ್ಮೀಕಿ ಅವರು ತಮ್ಮ ರಾಮಾಯಣ ಮಹಾಕಾವ್ಯದ ಮೂಲಕ ಮನುಕುಲಕ್ಕೆ ನೀಡಿದ್ದಾರೆ.

ಮಹರ್ಷಿ ವಾಲ್ಮೀಕಿ ಅವರು 'ರಾಮಾಯಣ'ದ ಸೀತೆಯ ತಂದೆ–ತಾಯಿ ಯಾರು, ಅವಳು ಯಾವ ಕುಲಕ್ಕೆ ಸೇರಿದವಳು ಎಂಬುದು ಗೊತ್ತಿಲ್ಲ. ಸೀತೆ ಭೂ ತಾಯಿಯ ಮಡಿಲಲ್ಲಿ ಜನಕ ಮಹಾರಾಜನಿಗೆ ದೊರೆತವಳು. ಸೀತೆ ತನ್ನ ಸದ್ಗುಣಗಳಿಂದ ಲೋಕ ಮೆಚ್ಚುವಂತಹ ಸಾಧ್ವಿ ಹೆಣ್ಣಾಗಿ ಸರ್ವಕಾಲಕ್ಕೂ ಕಾಣುತ್ತಾಳೆ. ಸೀತೆಯ ಮೂಲಕ ಮಹರ್ಷಿ ವಾಲ್ಮೀಕಿ ಅವರು ಜಾತಿ, ಹುಟ್ಟಿನ ಮೂಲ ಮುಖ್ಯವಲ್ಲ. ನಮ್ಮ ನಮ್ಮ ಬದುಕಿನ ದಾರಿ, ಸದ್ಗುಣಗಳು ಸಮಾಜ ಮೆಚ್ಚುವಂಥದ್ದು ಎಂದು ತೋರುತ್ತಾ ಜಾತಿಯ ಸಂಕೋಲೆಗಳನ್ನು ಬಿಡಿಸಲು ಪ್ರಯತ್ನಿಸಿರುವ ಮಹಾತ್ಮರಾಗಿದ್ದಾರೆ.

ಮನುಕುಲದ ಸಮಾಜದಲ್ಲಿ ಹೆಣ್ಣಿನ ಶೋಷಣೆ ಮಾಡಿದವರು ಯಾರೇ ಆಗಲಿ ಅವರು ಸೋಲಲೇಬೇಕು ಎಂಬ ಸಂದೇಶವನ್ನು 'ರಾಮಾಯಣ'ದಲ್ಲಿ ಮಹರ್ಷಿ ವಾಲ್ಮೀಕಿ ಅವರು ಮನುಕುಲಕ್ಕೆ ತೋರಿಸಿದ್ದಾರೆ. ಗರ್ಭವತಿಯಾದ ಸೀತೆಯನ್ನು ಕಾಡಿಗಟ್ಟಿದ ರಾಮ ತನ್ನ ಮಕ್ಕಳಾದ ಲವ–ಕುಶರಿಂದಲೇ ಸೋಲು ಅನುಭವಿಸುತ್ತಾನೆ. ಸೀತೆಯನ್ನು ಅಪಹರಿಸಿದ ಲಂಕೇಶ್ವರನಾದ ರಾವಣ ಸಾವನ್ನು ಕಾಣುತ್ತಾನೆ. ಸುಗ್ರೀವ ಮತ್ತು ವಿಭೀಷಣನ ಪರವಾಗಿ ರಾಮ–ಲಕ್ಷ್ಮಣರು ನಿಂತು ಪ್ರಬಲರಾದ ವಾಲಿ ಹಾಗೂ ರಾವಣರ ಸಂಹಾರ ಮಾಡಿ, ದುರ್ಬಲರಾದ ಸುಗ್ರೀವ ಮತ್ತು ವಿಭೀಷಣರಿಗೆ ರಾಜ್ಯ ಕೊಡಿಸುವುದರ ಮೂಲಕ ಧರ್ಮಿಷ್ಠರು ಅಬಲರ ಪರವಾಗಿ ನಿಲ್ಲುವುದೇ 'ಮನುಷ್ಯ ಧರ್ಮ' ಎಂಬುದನ್ನು ಮಹರ್ಷಿ ವಾಲ್ಮೀಕಿ ಅವರು ತಮ್ಮ ರಾಮಾಯಣ ಮಹಾಕಾವ್ಯದಲ್ಲಿ ಹೇಳಿ ತೋರಿಸಿದ್ದಾರೆ.

ಮಹರ್ಷಿ ವಾಲ್ಮೀಕಿ ಅವರು 'ರಾಮಾಯಣ' ಮಹಾಕಾವ್ಯದಲ್ಲಿ ರಾಮ–ರಾವಣರ ಯುದ್ಧದ ಸಂದರ್ಭದಲ್ಲಿ ಸಾವು–ಬದುಕಿನ ಹೋರಾಟದಲ್ಲಿದ್ದ ಲಕ್ಷ್ಮಣನನ್ನು ಉಳಿಸಲು ಸಂಜೀವಿನಿ ಪರ್ವತವನ್ನು ಹೊತ್ತು ತಂದ ಆಂಜನೇಯನ ಮೂಲಕ ಗಿಡಮೂಲಿಕೆಗಳನ್ನು ಬಳಸಿಕೊಂಡು ಲಕ್ಷ್ಮಣನ ಪ್ರಾಣ ಉಳಿಸಿದ ಪ್ರಸಂಗದ ಮೂಲಕ ಮಹರ್ಷಿ ವಾಲ್ಮೀಕಿ ಅವರ ಸ್ಪಷ್ಟ ಸಂದೇಶವನ್ನು ಮನುಕುಲಕ್ಕೆ ನೀಡಿದ್ದಾರೆ. ಯಾವ ದೇಶ, ಯಾವ ಸಮಾಜ ಪರಿಸರವನ್ನು ಕಾಪಾಡುತ್ತದೋ ಆ ಪರಿಸರ ಪ್ರತಿಯೊಬ್ಬರ ಬದುಕನ್ನು ಉಳಿಸಲು, ಬೆಳಸಲು ಸಹಕಾರಿಯಾಗುತ್ತದೆ ಎಂಬುದು ಮನಕುಲಕ್ಕೆ ಹೇಳಿಕೊಟ್ಟಿದ್ದಾರೆ.

ಮಹರ್ಷಿ ವಾಲ್ಮೀಕಿ ಅವರು 'ರಾಮಾಯಣ' ಮಹಾಕಾವ್ಯದಲ್ಲಿ ಕೌಟುಂಬಿಕ ಸಂಬಂಧಗಳು ಆಡಳಿತಗಾರರ ಮತ್ತು ಜನ ಸಾಮಾನ್ಯರ ಸಂಬಂಧಗಳ ಬಗ್ಗೆ ಸ್ಪಷ್ಟತೆಯನ್ನು ತೋರುತ್ತಾ, ರಾಜರು ಮತ್ತು ಜನ ಪ್ರತಿನಿಧಿಗಳು ಕೊಟ್ಟ ಮಾತಿನಂತೆ ನಡೆದುಕೊಳ್ಳುವುದೇ ಧರ್ಮದ ತಳಹದಿ ಎಂಬುದನ್ನು ಶ್ರೀರಾಮ ಮತ್ತು ಸಹೋದರ ಭರತನ ಸಂವಾದದ ಮೂಲಕ ಮನುಕುಲಕ್ಕೆ ಮಹರ್ಷಿ ವಾಲ್ಮೀಕಿ ಅವರು ಹೇಳಿದ್ದಾರೆ.

ಭರತ ಶ್ರೀರಾಮನ ಸಹೋದರನಾಗಿ ವಿಧೇಯನಾಗಿ ಕಾಡಿನಲ್ಲಿರುವ ರಾಮನನ್ನು ಭೇಟಿಯಾಗಿ, 'ಅಣ್ಣಾ, ತಾಯಿಯಾದ ಕೈಕೇಯಿಯ ಅಚಾತುರ್ಯದಿಂದ ತಂದೆ ನಿಮ್ಮನ್ನು ಕಾಡಿಗೆ ಕಳುಹಿಸಿ, ನನ್ನನ್ನು ರಾಜ್ಯವಾಳಲು ಸೂಚಿಸಿರುವುದು ಸಾಧುವಲ್ಲ. ದಯಮಾಡಿ ತಾವು ಅಯೋಧ್ಯೆಗೆ ಹಿಂದಿರುಗಿ, ರಾಜನಾಗಿ ಅಯೋಧ್ಯೆಯನ್ನು ಧರ್ಮದ ಹಾದಿಯಲ್ಲಿ ಮುನ್ನಡೆಸಬೇಕು ಎಂದು ಪರಿಪರಿಯಾಗಿ ಬೇಡುತ್ತಾನೆ. ಶಾಂತಚಿತ್ತರಾದ ಶ್ರೀರಾಮ, ಅಧಿಕಾರ ಮುಖ್ಯವಲ್ಲ. ಕೊಟ್ಟ ಮಾತಿನಂತೆ ನಡೆದುಕೊಳ್ಳುವುದೇ ಧರ್ಮ. ತಂದೆಗೆ ಕೊಟ್ಟ ಮಾತಿನಂತೆ ಹದಿನಾಲ್ಕು ವರ್ಷ ವನವಾಸವನ್ನು ಮುಗಿಸಿ ಅಯೋಧ್ಯೆಗೆ ಬರುತ್ತೇನೆ. ಅಲ್ಲಿಯವರೆಗೂ ಧರ್ಮದ ಹಾದಿಯಲ್ಲಿ ನೀನೇ ರಾಜ್ಯಭಾರವನ್ನು ನಡೆಸಬೇಕು' ಎಂದು ಹೇಳುವುದರ ಮೂಲಕ ರಾಜರು ಮತ್ತು ಜನಪ್ರತಿನಿಧಿಗಳು ಅಧಿಕಾರಕ್ಕಿಂತ ಸನ್ನಡತೆ ಮತ್ತು ನೀಡಿದ ವಾಗ್ದಾನವನ್ನು ಈಡೇರಿಸುವುದೇ ಧರ್ಮ ಎಂಬುದನ್ನು ಮಹರ್ಷಿ ವಾಲ್ಮೀಕಿ ಅವರು ವಿಶ್ವಕ್ಕೆ ಸಂದೇಶ ನೀಡಿದ್ದಾರೆ.

ಮಹರ್ಷಿ ವಾಲ್ಮೀಕಿ ಅವರು ತಮ್ಮ 'ರಾಮಾಯಣ' ಮಹಾಕಾವ್ಯದ ಮನುಕುಲದ ಆದರ್ಶಗಳನ್ನು ಸಮಾಜಕ್ಕೆ ನೀಡಿದ್ದಾ–ರೆ. ಅವರ ನಿಡಿರುವ ಆದರ್ಶಗಳನ್ನು ಇಂದಿನ ಯುಗದ ಮನುಜರು, ಪ್ರಭುಗಳು ಅರ್ಥೈಸಿಕೊಂಡು ಪ್ರತಿಯೊಬ್ಬರು ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು. ಮಹರ್ಷಿ ವಾಲ್ಮೀಕಿ ಅವರು ತಿಳಿಸಿರುವ ಸಾಮಾಜಿಕ ಮೌಲ್ಯಗಳನ್ನು ನಾವೆಲ್ಲರೂ ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ರಾಮರಾಜ್ಯದ ಪರಿಕಲ್ಪನೆ ಸಾರ್ಥಕತೆ ಪಡೆಯುತ್ತದೆ.

**ಡಾ.ಚಂದ್ರಶೇಖರ**
ಮು.ಕಾಳನ್ನವರ
ಕನ್ನಡ ಉಪನ್ಯಾಸಕರು
ಬಾಗಲಕೋಟೆ

# ಜೀವನದ ಶ್ರೇಷ್ಠತೆ ಹಿರಿಯರ ಅನುಭವದಲ್ಲಿದೆ:ಸಂಗಪ್ಪ



**ಹಿರಿಯ ಸಾಧಕರಿಗೆ ಸನ್ಮಾನ**

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಮಲ್ಲಿಕಾರ್ಜುನ ಯಾಳವಾರ, ಮಲ್ಲಪ್ಪ ಗಾಣಿಗೇರ, ಸಿದ್ದಲಿಂಗಪ್ಪ ಶಿರೂರ, ಹುಚ್ಚನಗೌಡ ಗೌಡರ, ಶಾಂತಾಬಾಯಿ ಕಠಾರಿ, ದುಂಡಪ್ಪ ಬಡಿಗೇರ,ಮಹಾದೇವಪ್ಪಕಡಕಭಾವಿ, ಸಂಗಯ್ಯ ಚನ್ನಯ್ಯ ಹಿರೇಮಠ, ಸದಾಶಿವ ತಮ್ಮನಪ್ಪ ಗೊಂದಕರ ಅವರನ್ನು ಸನ್ಮಾನಿಸಲಾಯಿತು.

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.6–ಜೀವನದ ಶ್ರೇಷ್ಠತೆ ಯೌವನದಲ್ಲಿರದೇ ವಯೋವೃದ್ಧರ ಅನುಭವದಲ್ಲಿದ್ದು, ಹಿರಿಯ ಜೀವಿಗಳನ್ನು ಭವಿಷ್ಯದ ಮಾರ್ಗದರ್ಶಕರಂತೆ ಕಾಣಬೇಕಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲೆಯ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಿರಿಯರ ಅನುಭವ, ತ್ಯಾಗ, ಪ್ರೀತಿ ಮತ್ತು ಮಾರ್ಗದರ್ಶನ ನಮ್ಮ ಸಮಾಜದ ಬಲವಾದ ಮೂಲಸ್ತಂಭವಾಗಿದೆ ಎಂದರು.

ಹಳೆಯ ಮರದ ನೆರಳಿನಲ್ಲಿ ಹೊಸ ಬೀಜಗಳು ಎಂಬಂತೆ, ಹಿರಿಯರ ಅನುಭವನದ ನೆರಳಿಲ್ಲದೇ ಯುವಜನಾಂಗದ ಬೆಳವಣಿಗೆ ಅಸಾಧ್ಯ. ಅವರು ನಮ್ಮ ಭವಿಷ್ಯದ ದಾರಿದೀಪವೂ ಹೌದು. ಇಂದು ನಾವು ಹಿರಿಯರನ್ನು ಗೌರವಿಸುವುದಷ್ಟೇ ಅಲ್ಲ, ಅವರೊಂದಿಗೆ ಸಂಪರ್ಕ ಸಾಧಿಸುವ, ಅಗತ್ಯಗಳನ್ನು ಅರ್ಥಮಾಡಿಕೊಳ್ಳುವ ಮತ್ತು ಅವರ ಬದುಕಿಗೆ ಗೌರವ ನೀಡುವ ನಿಜವಾದ ಸಂಸ್ಕೃತಿಯನ್ನು ಬೆಳೆಸಬೇಕಾಗಿದೆ ಎಂದು ಸಂಗಪ್ಪ ಹೇಳಿದರು.

ಸರ್ಕಾರ ಹಿರಿಯರ ಆರೈಕೆ, ಆರೋಗ್ಯ, ಪಿಂಚಣಿ ಹಾಗೂ ಸೌಲಭ್ಯಗಳಿಗಾಗಿ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದೆ. ಆದರೆ ಅದು ಸಾಕಾಗುವುದಿಲ್ಲ. ನಮ್ಮ ಮನೆಗಳಲ್ಲಿ ಸಮಾಜದಲ್ಲಿ ಮತ್ತು ಹೃದಯಗಳಲ್ಲಿ ಗೌರವವನ್ನು ಬೆಳೆಸಿದಾಗ ಮಾತ್ರ ಅವರ ಬದುಕು ಅರ್ಥಪೂರ್ಣವಾಗುತ್ತದೆ. ಹಿರಿಯ ನಾಗರಿಕರ ದಿನಾಚರಣೆ ಆಚರಣೆಗೆ ಶೀಮಿತವಾಗದೇ ಪ್ರತಿದಿನದ ಜೀವನದ ಒಂದು ಸಂಸ್ಕೃತಿಯಾಗಿ ರೂಪಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಮಾತನಾಡಿ, ಹಳೆ ಬೇರು, ಹೊಸ ಚಿಗುರು ಎಂಬಂತೆ ಒಂದು ಮರ ತನ್ನ ಹಳೆಯ ಬೇರುಗಳ ಆಧಾರದ ಮೂಲಕ ಹೊಸ ಚಿಗುರುಗಳನ್ನು ಬಿಟ್ಟು ಬೆಳೆದಾಗ ಮಾತ್ರ ಸೌಂದರ್ಯವನ್ನು ಪಡೆಯುತ್ತದೆ. ಅದೇ ರೀತಿ ನಮ್ಮ ಸಂಸ್ಕೃತಿ ಹಾಗೂ ಸಂಸ್ಕಾರಗಳು ಮೂಲ ಬೇರಾಗಿದ್ದು, ಆಧುನಿಕತೆ ಹೊಸ ಚಿಗುರಾಗಬೇಕಿದೆ. ಸುಖ, ದುಃಖವನ್ನು ಅನುಭವಿಸಿದವರು ಹಿರಿಯ ನಾಗರಿಕರಾಗಿದ್ದು, ಅವರ ಮಾರ್ಗದರ್ಶನ ಇಂದಿನ ಯುವ ಪೀಳಿಗೆ ಅನುಸರಿಸುವ ಅಗತ್ಯವಿದೆ ಎಂದು ಹೇಳಿದರು.

ಉಪನ್ಯಾಸ ನೀಡಿದ ವೈದ್ಯಾಧಿಕಾರಿ ಸಚಿನ್ ದೇಸಾಯಿ, ವಯಸ್ಸಿಗೆ ತಕ್ಕಂತೆ ಬರುವ ಕಾಯಿಲೆಗಳ ಬಗ್ಗೆ ವಿವರವಾಗಿ ತಿಳಿಸಿದರು. ಮುರುಘಾನಂದ ಸ್ವಾಮೀಜಿ ಆಶೀರ್ವಚನ ನೀಡಿದರು. ಹಿರಿಯ ನಾಗರಿಕರಾದ ಸಿದ್ದಲಿಂಗಯ್ಯ ಗುಳೇದ, ಮಲ್ಲಿಕಾರ್ಜುನ ಯಾಳವಾರ, ಮಲ್ಲಪ್ಪ ಗಾಣಿಗೇರ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಗಿರಿಜಾ ಪಾಟೀಲ, ಪ್ರಭು ಹಳ್ಳೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಎಂಜಿಎಸ್‌ಎಸ್‌ಕೆ 8 ಸ್ಥಾನಗಳಿಗೆ ಚುನಾವಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.6:ತಾಲೂಕಿನ ಹುಣಜಿ(ಎ) ಸಮೀಪದ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಸೋಮವಾರ ಶಾಂತಿಯುತವಾಗಿ ಮತದಾನ ನೆರವೇರಿತು.

ಕಾರ್ಖಾನೆಗೆ ಶೇ. 69ರಷ್ಟು ಮತದಾನವಾಗಿದೆ. ಒಟ್ಟು 4452 ರೈತ ಮತದಾರರು ಹೊಂದಿದ್ದು ಅದರಲ್ಲಿ 3106 ರೈತರು ತಮ್ಮ ಹಕ್ಕು ಚಲಾಯಿಸಿದ್ದರು.

ಬೆಳಿಗ್ಗೆ 9ಗಂಟೆಯಿಂದ ಆರಂಭಗೊಂಡ ಮತದಾನ ಸಾಯಂಕಾಲ 4 ಗಂಟೆ ವರೆಗೂ ನಡೆಯಿತು.

ಬೆಳಿಗ್ಗೆ 11 ಗಂಟೆ ವರೆಗೂ ನೀರಸವಾಗಿದ್ದ ಮತದಾನ ಮಧ್ಯಾಹ್ನ 12 ಗಂಟೆ ನಂತರ ಬಿರುಸು ಪಡೆದು ಕೊಂಡಿತು. ರೈತರು ಸರತಿ ಸಾಲಿನಲ್ಲಿ ನಿಂತು ಮತದಾನ ಮಾಡುತ್ತಿದ್ದ ದೃಶ್ಯ ಕಂಡು ಬಂತು.


ಒಟ್ಟು 13 ನಿರ್ದೇಶಕರ ಸ್ಥಾನಗಳ ಪೈಕಿ 5 ಸ್ಥಾನಗಳು ಅವಿರೋಧ ಆಯ್ಕೆಗೊಂಡ ಹಿನ್ನೆಲೆಯಲ್ಲಿ 8 ಸ್ಥಾನಗಳಿಗೆ ಚುನಾವಣೆ ನಡೆಯಿತು.

ಸಾಮಾನ್ಯ ಕ್ಷೇತ್ರ 5, ಸಾಮಾನ್ಯ ಮಹಿಳಾ ಕ್ಷೇತ್ರ 2 ಮತ್ತು ಪರಿಶಿಷ್ಟ ಜಾತಿ 1 ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 15 ಅಭ್ಯರ್ಥಿಗಳು ಕಣದಲ್ಲಿದ್ದರು.

ಪ್ರತಿ ಬಾರಿ ಅವಿರೋಧ ಆಯ್ಕೆ ನಡೆಯುತ್ತಿದ್ದ ಕಾರ್ಖಾನೆಗೆ ಈ ಬಾರಿ ಬಿಜೆಪಿ ಬೆಂಬಲಿತರು ಸ್ಪರ್ಧೆ ಮಾಡಿದ್ದರಿಂದ ಚುನಾವಣಾ ಕಣ ರಂಗೇರಿತು.

ಹಾಗಾಗಿ 8 ಸ್ಥಾನಗಳಲ್ಲಿ ಅಮರಕುಮಾರ ಖಂಡ್ರೆ ಪೆನಾಲ್ ಮತ್ತು ಬಿಜೆಪಿ ಬೆಂಬಲಿತರ ನಡುವೆ ನೇರ ಸ್ಪರ್ಧೆ ಏ

# 469ನೇ ಶಿವಾನುಭವ ಗೋಷ್ಠಿ ಇಂದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.6:ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ಮಂಗಳವಾರ ಸಂಜೆ 5.30 ಗಂಟೆಗೆ ಗಂಗಾಂಬಿಕೆ ಜಯಂತಿ ಮತ್ತು 469ನೆಯ ಶಿವಾನುಭವ ಗೋಷ್ಠಿ ಕಾರ್ಯಕ್ರಮ ಜರುಗಲಿದೆ. ನಾಡೋಜ ಡಾ.ಬಸವಲಿಂಗಪಟ್ಟದ್ದೇವರು ಕಾರ್ಯಕ್ರಮದ ದಿವ್ಯಸಾನ್ನಿಧ್ಯ ವಹಿಸುವರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಲಿದ್ದಾರೆ. ಶಿವಬಸವ ಸ್ವಾಮೀಜಿ ಸಮ್ಮುಖ ವಹಿಸುವರು.

ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ವೇಳೆ ಪಾರ್ವತಿ ಜಗನ್ನಾಥ ಧುಮನಸೂರೆ, ಮಲ್ಲಮ್ಮ ನಾಗನಕೇರೆ ಅವರನ್ನು ಸನ್ಮಾನಿಸಲಾಗುತ್ತಿದೆ. ಆರತಿ ನಿಜಲಿಂಗ ಪಾತ್ರೆ ಅನುಭಾವ ನೀಡಲಿದ್ದಾರೆ. ಸ್ವರೂಪಾ ವಚನ ಪಠಣ ಮಾಡಲಿದ್ದಾರೆ. ಲಿಂಗಾನಂದ ಶಿವರಾಜ ಕಾರ್ಯಕ್ರಮದ ಭಕ್ತಿ ದಾಸೋಹ ವಹಿಸಿಕೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ

# ತೇಗ್ ಬಹಾದ್ದೂರ 350 ನೇ ಶಹೀದ್ ದಿವಸ್ : ಬೀದರನಲ್ಲಿ ಭವ್ಯ ಶೋಭಾಯಾತ್ರೆ




ಬೀದರ. ಅ. 06 : ಸಿಖ್ ಧರ್ಮದ 9ನೇ ಗುರು ಶ್ರೀ ತೇಗ್ ಬಹಾದ್ದೂರ್ ಅವರ 350 ನೇ ಶಹೀದ್ ದಿವಸ ನಿಮಿತ್ಯ ಭಾನುವಾರ ನಗರದಲ್ಲಿ ಕೀರ್ತನೆಯೊಂದಿಗೆ ಭವ್ಯ ಜಾಗೃತಿ ಶೋಭಾಯಾತ್ರೆ ನಡೆಯಿತು.

ಶ್ರೀ ನಾನಕ ಝಿರಾ ಸಾಹೇಬ್ ಗುರುದ್ವಾರಾದಲ್ಲಿ ಗುರುಜಿಯವರು ಮತ್ತು ಆಡಳಿತ ಮಂಡಳಿಯಿಂದ ವಿಶೇಷ ಪೂಜೆ ಸಲ್ಲಿಸಿ ಶೋಭಾಯಾತ್ರೆಗೆ ಚಾಲನೆ ನೀಡಿದರು. ಅಲ್ಲಿಂದ ಹೊರಟ ಯಾತ್ರೆಯು ಗುರುದ್ವಾರಾ ಗೇಟ್, ಮಡಿವಾಳ ವೃತ್ತ, ರೋಟರಿ ವೃತ್ತ, ಶ್ರೀ ಹರಳಯ್ಯ ವೃತ್ತ ಮಾರ್ಗವಾಗಿ ಜನವಾಡಾ ಗ್ರಾಮದಿಂದ ಔರಾದ (ಬಿ) ಮಾರ್ಗವಾಗಿ ಮಹಾರಾಷ್ಟ್ರದ ನಾಂದೇಡ್‌ನ ಗುರುದ್ವಾರಾ ಸಚ್‌ಖಂಡ್ ಶ್ರೀ ಹಜೂರ್ ಸಾಹೇಬ್‌ಗೆ ತಲುಪಿತು. ರಸ್ತೆ ಬದಿಯಲ್ಲಿ ನಿಂತು ಸಾರ್ವಜನಿಕರು ಮತ್ತು ಗುರು ನಾನಕ ಸಂಸ್ಥೆಯ ಸಿಬ್ಬಂದಿಗಳು ಭವ್ಯ ಸ್ವಾಗತ ಮಾಡಿದರು. ಈ ಮಹತ್ವದ ಶೋಭಾಯಾತ್ರೆಯೂ ಧಾರ್ಮಿಕ ಸ್ವಾತಂತ್ರ್ಯ ಮತ್ತು ಮಾನವ ಘಟನೆತೆಯ ತತ್ವಗಳಿಗಾಗಿ ನಿಂತ ಒಂಬತ್ತನೇ ಗುರುಗಳ ಸರ್ವೋಚ್ಚ ತ್ಯಾಗಕ್ಕೆ ಗೌರವ ಸಲ್ಲಿಸಿದರು.

ಶ್ರೀ ನಾನಕ ಝಿರಾ ಸಾಹೇಬ್ ಫೌಂಡೆಷನ್

ಅಧ್ಯಕ್ಷ ಡಾ. ಎಸ್.ಬಲಬೀರ್ ಸಿಂಗ್ ಅವರು ಮಾತನಾಡಿ ಬೀದರ ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಪತ್ರಿಕಾ ಮತ್ತು ಇಲೆಕ್ಟ್ರಾನಿಕ್ಸ್ ಮಾಧ್ಯಮ ಮತ್ತು ಸಾರ್ವಜನಿಕರು ನೀಡಿದ ಅಚಲ ಬೆಂಬಲ ಮತ್ತು ಸಹಕಾರಕ್ಕಾಗಿ ನಮ್ಮ ಹೃತ್ಪೂರ್ವಕ ಕೃತಜ್ಞತೆಯನ್ನು ಸಲ್ಲಿಸುತ್ತೇನೆ, ಗುರು ತೆಗ್ ಬಹಾದ್ದೂರ್‌ಜಿ ಅವರ ಬೋಧನೆಗಳು, ಸತ್ಯ, ನ್ಯಾಯ ಮತ್ತು ಕರುಣೆಯನ್ನು ಎತ್ತಿಹಿಡಿಯಲು ನಮ್ಮೆಲ್ಲರಿಗೂ ಸ್ಪೂರ್ತಿ ನೀಡುತ್ತಲೇ ಇರಲಿ ಎಂದು ನುಡಿದರು.

ಈ ಯಾತ್ರೆಯ ಆಸ್ಸಾಂನಿಂದ ಪ್ರಾರಂಭವಾಗಿ ರಾಷ್ಟ್ರತುಂಬೆಲ್ಲ ಸಂಚರಿಸಿ ಎರಡು ತಿಂಗಳದ ನಂತರ ಆಸ್ಸಾಂ ಸೇರಲಿದೆ. ಅಲ್ಲಿ ಭವ್ಯ ಕಾರ್ಯಕ್ರಮ ನಡೆಯಲಿದೆ. ದೇಶ–ವಿದೇಶಗಳಿಂದ ಭಕ್ತರು ಸೇರಲಿದ್ದಾರೆ ಎಂದು ಡಾ.ಎಸ್.ಬಲಬೀರ್ ಸಿಂಗ್ ಅಧ್ಯಕ್ಷರು ಶ್ರೀ ನಾನಕ ಝಿರಾ ಸಾಹೇಬ್ ಫೌಂಡೆಷನ್, ಬೀದರ ತಿಳಿಸಿದರು.

# ರೋಟರಿ ಕ್ಲಬ್‌ವತಿಯಿಂದ ಸ್ವಚ್ಛತಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಅ.6: ನಾವು ವಾಸಿಸುವ ಪರಿಸರ ಶುಚಿತ್ವ ಕಾಪಾಡಿದರೆ ಸುಂದರ,ನೈರ್ಮಲ್ಯಪೂರ್ಣ ಸಮಾಜ ಸ್ಥಾಪಿಸಲು ಸಾಧ್ಯವಾಗುತ್ತದೆ ಎಂದು ಮಕ್ಕಳತಜ್ಞ ಡಾ.ವಸಂತ ಪವಾರ ಹೇಳಿದರು.

ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್‌ನವರು ಸ್ವಚ್ಛ ಭಾರತ ಅಭಿಯಾನ ಅಂಗವಾಗಿ ಪಟ್ಟಣದ ವಿವಿಧ ಓಣಿಗಳಲ್ಲಿ ಹಮ್ಮಿಕೊಂಡ ಸ್ವಚ್ಛತಾ ಕಾರ್ಯಕ್ರಮದಲ್ಲಿ ಸ್ವತಃ ಕಸಬರಗಿಯಿಂದ ಕಸ ಗೂಡಿಸಿ ಮಾತನಾಡಿದರು.

ಮನೆ,ಮನಸ್ಸುಪರಿಶುದ್ಧವಾಗಿರಬೇಕಾದರೆ ನಾವು ಸ್ವಚ್ಛತೆಗೆ ಪ್ರಥಮಾದ್ಯತೆ ನೀಡಬೇಕು ಎಂದರು.

ಮಾಜಿ ಎಜಿ ಡಾ.ಅಮೀತ ಅಷ್ಟೂರೆ ಮಾತನಾಡಿ,ಆರೋಗ್ಯಕರ ಶರೀರಕ್ಕಾಗಿ ಸಾರ್ವಜನಿಜಕ ಸ್ಥಳಗಳನ್ನು ಸ್ವಯಂಪ್ರೇರಣೆಯಿಂದ ಸ್ವಚ್ಛ ಮಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.ನ್ಯಾಯವಾದಿ ಉಮಾಕಾಂತ ವಾರದ ಮಾತನಾಡಿ,ಶುಚಿತ್ವವು ರೋಗಾಣುಗಳು ಮತ್ತು ಕೊಳೆಯಿಂದ ದೂರವಿಡುತ್ತದೆ.ಮಾರಣಾಂತಿಕ ಕಾಯಿಲೆಗಳನ್ನು ತಡೆಗಟ್ಟಬಹುದು ಎಂದು ತಿಳಿಸಿದರು.

ರೋಟರಿ ಪಡೆ ಪಟ್ಟಣದ ಭವಾನಿ ನಗರ,ದತ್ತ ನಗರ ಸೇರಿದಂತೆ ಸಾರ್ವಜನಿಕ ಸ್ಥಳಗಳು ಸ್ವಚ್ಛಗೊಳಿಸಿ ಇತರರಿಗೆ ಮಾದರಿಯಾದರು.ಸ್ವಚ್ಛತಾ ಕಾರ್ಯಕ್ರಮದಲ್ಲಿ ರೋಟರಿ ಅಧ್ಯಕ್ಷ ಅಶ್ವಿನ ಭೋಸ್ಲೆ, ಕಾರ್ಯದರ್ಶಿ ಬಸವ ಪಾಟೀಲ್ ,ಡಾ.ನಿತೀನ ಪಾಟೀಲ್,ದತ್ತುಕುಮಾರ ಮೇಹಕ್ರೆ,ಡಾ.ವಿಲಾಸ ಕನಸೆ,ಡಾ. ಗುಂಡೆರಾವ ಶೆಡೋಳೆ,ಸೇರಿದಂತೆ ಡೈಮಂಡ್ ಕಾಲೇಜಿನ ಸಿಬ್ಬಂದಿ ಭಾಗವಹಿಸಿದ್ದರು.

# ಮುಖ್ಯ ನ್ಯಾಯಮೂರ್ತಿಯತ್ತ ಶೂ ಎಸೆತ ಘಟನೆ ತೀವ್ರ ಖಂಡನೆ



ಬೀದರ.ಅ.06:ನವದೆಹಲಿಯ ಸುಪ್ರೀಂಕೋರ್ಟ್‌ನಲ್ಲಿ ಪ್ರಕರಣವೊಂದರ ವಿಚಾರಣೆ ವೇಳೆ ವಕೀಲರೊಬ್ಬರು ಮುಖ್ಯನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರತ್ತ ಶೂ ಎಸೆದ ಘಟನೆಯನ್ನು ಅಖಿಲ ಭಾರತ ಕಾಂಗ್ರೆಸ್ ಸಮಿತಿ ಕಿಸಾನ್ ವಿಭಾಗದ ಜಂಟಿ ಸಂಯೋಜಕ ಜಾನಸನ್ ಘೋಡೆ ತೀವ್ರವಾಗಿ ಖಂಡಿಸಿದ್ದಾರೆ.

ವಕೀಲ ಕಿಶೋರ್ ಶೂ ಎಸೆದು ದಲಿತ ಸಮುದಾಯಕ್ಕೆ ಸೇರಿದ ನ್ಯಾಯಮೂರ್ತಿ ಹಾಗೂ ದೇಶದ ನ್ಯಾಯಾಂಗ ವ್ಯವಸ್ಥೆಯನ್ನು ಅವಮಾನಿಸಿದ್ದಾರೆ. ಸಂವಿಧಾನ ಜಾರಿಗೆ ಬಂದ 75 ವರ್ಷಗಳ ನಂತರವೂ ಮನುವಾದಿಗಳ ಮನದಲ್ಲಿ ಪರಿಶಿಷ್ಟರ ಬಗ್ಗೆ ಅಸಹನೆ ಇರುವುದಕ್ಕೆ ಈ ಘಟನೆಯೇ ನಿದರ್ಶನವಾಗಿದೆ ಎಂದು ಹೇಳಿದ್ದಾರೆ.

ಗವಾಯಿ ಅವರು ತಮ್ಮ ಅರ್ಹತೆ ಹಾಗೂ ಸಾಧನೆ ಮೂಲಕ ದೇಶದ ನ್ಯಾಯಾಂಗ ವ್ಯವಸ್ಥೆಯ ಅತ್ಯುನ್ನತ ಹುದ್ದೆಗೆ ಏರಿದ್ದಾರೆ. ಅವರನ್ನು ಅವಮಾನಿಸಿರುವ ವಕೀಲರ ವಿರುದ್ಧ ಕಾನೂನು ರೀತ್ಯಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಬೇಡವಾದ ನವಜಾತ ಶಿಶು ಕಂಡುಬಂದಲ್ಲಿ ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಒಪ್ಪಿಸಿ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ



ಬಳ್ಳಾರಿ,ಅ.06:ಬೇಡವಾದ ಮತ್ತು ಸಾರ್ವಜನಿಕ ಸ್ಥಳದಲ್ಲಿ ನವಜಾತ ಶಿಶು ಕಂಡುಬಂದಲ್ಲಿ ಅಂತಹ ಮಕ್ಕಳನ್ನು ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ಒಪ್ಪಿಸಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಯಾವುದೇ ಕಾರಣದಿಂದ ತಮಗೆ ಜನಿಸಿದ ನವಜಾತ ಶಿಶುಗಳು,ಅನಾಥ,ಪರಿತ್ಯಕ್ತ ಮಗುವು ತಮಗೆ ಬೇಡವಾದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಿ ಮಾಹಿತಿ ನೀಡಿದರೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅಥವಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಗುವನ್ನು ಸ್ವೀಕರಿಸಿ, ಸರ್ಕಾರಿ ವಿಶೇಷ ದತ್ತು ಸಂಸ್ಥೆಗೆ ದಾಖಲು ಮಾಡುತ್ತಾರೆ.

ಇಲ್ಲವೇ ಬಳ್ಳಾರಿ ನಗರದ ಕಂಟೋನ್‌ಮೆಂಟ್ ಪ್ರದೇಶದ ಶಾಂತಿಧಾಮ ಆವರಣದ ಸರ್ಕಾರಿ ವಿಶೇಷ ದತ್ತು ಸಂಸ್ಥೆ, ಇಲ್ಲಿಗೆ ಒಪ್ಪಿಸಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

ಈ ಪ್ರಕ್ರಿಯೆಯಲ್ಲಿ ನವಜಾತ ಮಗುವಿನ ತಾಯಿ/ಪೋಷಕರಿಗೆ ಯಾವುದೇ ವಿಚಾರಣೆಗೆ ಒಳಪಡಿಸಲಾಗುವುದಿಲ್ಲ. ಈ ಬಗ್ಗೆ ಸಾರ್ವಜನಿಕರು ಸಹ ಯಾವುದೇ ಭಯ ಆತಂಕವಿಲ್ಲದೇ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಿ ಬೇಡವಾದ ಮಕ್ಕಳನ್ನು ಒಪ್ಪಿಸಬೇಕು.

ಸಾರ್ವಜನಿಕರು ಯಾವುದೇ ಕಾರಣಕ್ಕೂ ಮಕ್ಕಳನ್ನು ಕಸದ ಬುಟ್ಟಿಯಲ್ಲಿ, ರಸ್ತೆ ಬದಿಯಲ್ಲಿ, ತಿಪ್ಪೆ ಗುಂಡಿಯಲ್ಲಿ ಹಾಕುವುದರ ಮೂಲಕ ಮಕ್ಕಳ ಸಾವಿಗೆ ಕಾರಣರಾಗಬಾರದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಸೇನೆಗೆ ಯಾದವ್ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.6: ಕನ್ನಡ ಸೇನೆ ಕರ್ನಾಟಕ ಸಂಘಟನೆಯನ್ನು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಯ ರಕ್ಷಣೆ ಮಾಡಲು ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ರವರ ಆದೇಶದ ಮೇರೆಗೆ ವಿಜಯಕುಮಾರ ಯಾದವ ವಿಠಲಪುರ್ ಇವರನ್ನು ತಾಲೂಕ ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ. ಲಾಲು ಪ್ರಸಾದ್ ಯಾದವ್ ಅವರನ್ನು ಬೇಮಖೇಡಾ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ತಾಲೂಕಾಧ್ಯಕ್ಷ ಪವನ್ ಪೂಜಾರಿ ಅವರು ನೇಮಕ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಮಾಧ್ಯಮ ಸಂಚಾಲಕ ಚಿದಾನಂದ ಗುಳ್ಳಾ ಮುತ್ತಂಗಿ, ವಿಠಲಪುರ್ ಗ್ರಾಮ ಘಟಕ ಅಧ್ಯಕ್ಷ ಮಲ್ಲಿಕಾರ್ಜುನ್ ಮುನ್ನೂರು, ಶಶಿಧರ್ ಯಾದವ್, ಅನೀಲಕುಮಾರ್ ಯಾದವ್ ಉಪಸ್ಥಿತರಿದ್ದರು.

# ಅ.07 ರಂದು ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ

ಬಳ್ಳಾರಿ,ಅ.06:ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್,ಮಹಾನಗರ ಪಾಲಿಕೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಹಯೋಗದೊಂದಿಗೆ ಅ.07 ರಂದು ಬೆಳಿಗ್ಗೆ 11 ಗಂಟೆಗೆ ನಗರದ ನಲ್ಲಚೆರವು ಪ್ರದೇಶದ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ. ವೇದಿಕೆ ಕಾರ್ಯಕ್ರಮವನ್ನು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಉದ್ಘಾಟಿಸುವರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಕಂಪ್ಲಿ ಶಾಸಕ ಜೆ.ಎನ್ ಗಣೇಶ್, ಬಳ್ಳಾರಿ ಸಂಸದರಾದ ಈ.ತುಕಾರಾಂ,ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭೆ ಸಂಸದ ಡಾ.ಸೈಯದ್ ನಾಸೀರ್ ಹುಸೇನ್, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಬಳ್ಳಾರಿ ನಗರ ನಾರಾ ಭರತ್ ರೆಡ್ಡಿ, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ,ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ,ಸಮಾಜದ ಹಿರಿಯ ಮುತ್ಸದ್ದಿ ಜಿ.ರುದ್ರಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.ಹೊಸಪೇಟೆಯ ಶ್ರೀ ಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ವೀರಭದ್ರಪ್ಪ ತಂಬ್ರಳ್ಳಿ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು.ಪುಷ್ಪಾರ್ಚನೆ:ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 09 ಗಂಟೆಗೆ ನಗರದ ಎಸ್.ಪಿ ವೃತ್ತದ ಬಳಿಯ ಮತ್ತು ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಪುಷ್ಪಾರ್ಚನೆ ಮಾಡಲಾಗುವುದು. ಮೆರವಣಿಗೆ:ನಂತರ ಬೆಳಿಗ್ಗೆ 10 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾಪು) ಪದವಿಪೂರ್ವ ಕಾಲೇಜು ಮೈದಾನದಿಂದ ಭವ್ಯ ಮೆರವಣಿಗೆ ನಡೆಯಲಿದೆ. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ವಾಲ್ಮೀಕಿ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಅ.16 ರಂದು ಅಡುಗೆ ಸ್ಪರ್ಧೆ; ನೋಂದಾಯಿಸಿಕೊಳ್ಳಲು ಆಹ್ವಾನ

ಬಳ್ಳಾರಿ,ಅ.06:ಬಳ್ಳಾರಿ ತಾಲ್ಲೂಕಿನ ಹಗರಿಯ ಐಸಿಎಆರ್ –ಕೃಷಿ ವಿಜ್ಞಾನ ಕೇಂದ್ರ ವತಿಯಿಂದ ವಿಶ್ವ ಆಹಾರ ದಿನ ಅಂಗವಾಗಿ "ಪರಂಪರೆಯ ತಿನಿಸುಗಳಲ್ಲಿ ಪೌಷ್ಟಿಕ ನವೀನತೆ" ಎಂಬ ವಿಷಯದಡಿ ಅಕ್ಟೋಬರ್ 16 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ಕೇಂದ್ರದ ಆವರಣದಲ್ಲಿ ಅಡುಗೆ ಸ್ಪರ್ಧೆ ಆಯೋಜಿಸಲಾಗಿದ್ದು, ಅರ್ಹರು ಭಾಗವಹಿಸಲು ನೋಂದಾಯಿಸಿಕೊಳ್ಳಬಹುದು.

ಜಿಲ್ಲೆಯ ಪರಂಪರೆಯ ತಿನಿಸುಗಳ ಮೂಲಕ ಪೋಷಕಾಂಶಯುತ ಮತ್ತು ಆರೋಗ್ಯಕರ ಆಹಾರ ಪದ್ಧತಿಯನ್ನು ಉತ್ತೇಜಿಸುವುದು ಮುಖ್ಯ ಉದ್ದೇಶವಾಗಿದೆ. ಭಾಗವಹಿಸುವವರು ತಮ್ಮ ಮನೆಯಲ್ಲೇ ಆಹಾರ ತಿನಿಸು ತಯಾರಿಸಿ, ಸಿದ್ಧವಾದ ತಿನಿಸನ್ನು ನಿಗದಿತ ದಿನದಂದು ಇದೇ ಕಚೇರಿಗೆ ತರಬೇಕು.30 ಮಂದಿ ಮಾತ್ರ ಪಾಲ್ಗೊಳ್ಳಲು ಅವಕಾಶವಿದ್ದು,ಮೊದಲು ನೋಂದಾಯಿಸುವವರಿಗೆ ಆದ್ಯತೆ ನೀಡಲಾಗುತ್ತದೆ.ರೈತ ಮಹಿಳೆಯರು, ಸ್ವಯಂಸಹಾಯ ಗುಂಪು ಸದಸ್ಯರು, ವಿದ್ಯಾರ್ಥಿಗಳು ಮತ್ತು ಗ್ರಾಮೀಣ ಯುವಕರು ಭಾಗವಹಿಸಬಹುದಾಗಿದೆ.ಸೂಚನೆ:ಒಂದು ತಿನಿಸು ಮಾತ್ರ ತಯಾರಿಸಬೇಕು, ಸ್ಥಳೀಯ ಪದಾರ್ಥಗಳನ್ನು ಬಳಸಬೇಕು.ಆಹಾರವು ಪೋಷಕಾಂಶಯುತವಾಗಿರಬೇಕು; ಹೆಚ್ಚು ಎಣ್ಣೆ, ಮೈದ ಪದಾರ್ಥಗಳ ಬಳಕೆ ತಪ್ಪಿಸಬೇಕು.ಪ್ರದರ್ಶಿಸಲು ಸಿದ್ಧವಾದ ತಿನಿಸು ಸ್ವಚ್ಛವಾದ ಪಾತ್ರೆಯಲ್ಲಿ ತರಬೇಕು. ಪ್ರದರ್ಶನ ವೇಳೆಯಲ್ಲಿ ತಿನಿಸಿನ ಹೆಸರು, ಬಳಸಿದ ಪದಾರ್ಥಗಳು, ಪೋಷಕಾಂಶದ ಮಹತ್ವ ಮಾಹಿತಿ ನೀಡಬೇಕು. ಪೋಷಕ ಮೌಲ್ಯ, ರುಚಿ, ಪ್ರದರ್ಶನ ಮತ್ತು ಸ್ಥಳೀಯ ಪದಾರ್ಥಗಳ ಬಳಕೆ ಪ್ರಮಾಣಿಸಿ ವಿಜೇತರಿಗೆ ಬಹುಮಾನ ಮತ್ತು ಪ್ರಮಾಣಪತ್ರ ನೀಡಲಾಗುತ್ತದೆ.

ಆಸಕ್ತರು ತಮ್ಮ ಹೆಸರು, ಗ್ರಾಮದ ಹೆಸರು ಮತ್ತು ತಿನಿಸಿನ ಶೀರ್ಷಿಕೆಯನ್ನು ಕೆಳಗಿನ ವಿಳಾಸಕ್ಕೆ ಅಥವಾ ದೂರವಾಣಿಯಲ್ಲಿ ನೋಂದಾಯಿಸಬಹುದು. ನೋಂದಾಯಿಸಿಕೊಳ್ಳಲು ಅಕ್ಟೋಬರ್ 13 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ತಾಲ್ಲೂಕಿನ ಹಗರಿಯ ಐಸಿಎಆರ್ –ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ (ಗೃಹ ವಿಜ್ಞಾನಿ) ಅವರ ಮೊ.9535556509 ಗೆ ಸಂಪರ್ಕಿಸಬಹುದು ಎಂದು ಕೇಂದ್ರದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.10 ರಂದು ಬೃಹತ್ 'ಪರಿಸರ ಜಾಗೃತಿ' ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.06:ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಈ ಸುವರ್ಣ ಮಹೋತ್ಸವದ ಅಂಗವಾಗಿ ಜಿಲ್ಲಾ ಕೇಂದ್ರದಲ್ಲಿ ಅ.09 ರಂದು ಆಯೋಜಿಸಲು ಉದ್ದೇಶಿಸಲಾಗಿದ್ದ ಬೃಹತ್ 'ಪರಿಸರ ಜಾಗೃತಿ' ಕಾರ್ಯಕ್ರಮವನ್ನು ಕಾರಣಾಂತರಗಳಿಂದ ಮುಂದೂಡಿ ಅ.10 ರಂದು ಬೆಳಿಗ್ಗೆ 09.30 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾಪು) ಪದವಿಪೂರ್ವ ಕಾಲೇಜು ಮೈದಾನದಲ್ಲಿ ಏರ್ಪಡಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿ ಟಿ.ಎಂ.ಸಿದ್ದೇಶ್ವರ ಬಾಬು ತಿಳಿಸಿದ್ದಾರೆ.

# 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ

ಬಳ್ಳಾರಿ,ಅ.06:

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಆರಂಭಿಸಲು ಇಚ್ಛಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ ಬಳ್ಳಾರಿಯಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಅರ್ಹ ಪರಿಶಿಷ್ಟ ಪಂಗಡ ಮಹಿಳೆಯರಿಂದ ನೋಂದಾಯಿಸಿಕೊಳ್ಳಬಹುದಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮ ಆರಂಭಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಉದ್ಯಮ ನಿರ್ವಹಣೆ ಹಾಗೂ ಇತ್ಯಾದಿ ವಿಷಯಗಳ ಕುರಿತು ತರಬೇತಿ ನೀಡಲಾಗುತ್ತದೆ.

ಅಭ್ಯರ್ಥಿಗಳು 18 ರಿಂದ 45 ವರ್ಷ ವಯಸ್ಸಿನವರಾಗಿರಬೇಕು. ಓದಲು/ಬರೆಯಲು ಬರುತ್ತಿರಬೇಕು. ಪರಿಶಿಷ್ಟ ಪಂಗಡ ಮಹಿಳೆಯರಿಗೆ ಮಾತ್ರ ಅವಕಾಶ.

ಆಸಕ್ತರು ಅರ್ಜಿಯನ್ನು ನಗರದ ಹೊಸಪೇಟೆ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿ ಕಟ್ಟಡದ ಸಿಡಾಕ್ ನ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪಡೆದುಕೊಳ್ಳಬಹುದು ಅಥವಾ ಮೊ.9449226221, 7483538942 ಗೆ ಕರೆಮಾಡಿ ನೋಂದಾಯಿಸಿಕೊಳ್ಳಬಹುದು ಎಂದು ಸಿಡಾಕ್ ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವರ್ಲ್ಡ್ ಸೆಲೆಬ್ರಲ್ ಪ್ಯಾಲೇಸಿ ಡೇ



ಕಲಬುರಗಿ:ಅ.6:ನಗರದ ರೋಟರಿ ಕ್ಲಬ್ ಶಾಲೆಯಲ್ಲಿ ಬ್ರೈನೆಕ್ಸ್ ಚಿಲ್ಡ್ರನ್ ಡೆವಲಪ್ಮೆಂಟ್ ಸೆಂಟರ್ ಕಲ್ಬುರ್ಗಿ ವತಿಯಿಂದ ವರ್ಲ್ಡ್ ಸೆಲೆಬ್ರಲ್ ಪ್ಯಾಲೇಸಿ ಡೇ ಅಗವಾಗಿ ವಿಶೇಷ ಮಕ್ಕಳಿಗೆ ಫ್ಯಾನ್ಸಿ ಡ್ರೆಸ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮವನ್ನು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರು ಉದ್ಘಾಟಿಸಿ ಮಾತನಾಡಿ ಕಲ್ಯಾಣ ಕರ್ನಾಟಕದಲ್ಲಿ ಈ ರೀತಿ ವಿಶೇಷ ಮಕ್ಕಳಿಗೆ ಸಂಸ್ಥೆಯನ್ನು ತೆರೆದು ಅವರ ನುನ್ನತೆಗಳನ್ನು ಸರಿಪಡಿಸುತ್ತಿರುವಂತ ಸದರಿ ಸಂಸ್ಥೆಗೆ ಅಭಿನಂದನೆಸಿದರು ಹಾಗೂ ಈ ರೀತಿ ಸಾಮಾಜಿಕ ಕಾರ್ಯಕರ್ಮಗಳಲ್ಲಿ ಅವರ ಜೊತೆಗೆ ಇದ್ದೇವೆ ಅಂತ ತಿಳಿಸಿದರು.

ಅದರಂತೆ ಮುಖ್ಯ ಅತಿಥಿ-ಯಾಗಿ ಆಗಮಿಸಿದಂತ ಡಾ. ಎಚ್ ವೀರಭದ್ರಪ್ಪ ಮಾಜಿ ಅಧ್ಯಕ್ಷರು ಕರ್ನಾಟಕ ಮೆಡಿಕಲ್ ಕೌನ್ಸಿಲ್ ರವರು ಮಾತನಾಡಿ ಸದರಿ ಸಂಸ್ಥೆಯು ಒಳ್ಳೆ ಕೆಲಸ ಮಾಡುತ್ತಿದೆ ಹಾಗೂ ಇಡೀ ದೇಶದಲ್ಲಿ 10% ಮಕ್ಕಳಲ್ಲಿ ಒಂದು ಪರ್ಸೆಂಟ್ ಮಕ್ಕಳು ಈ ರೀತಿ ವಿಶೇಷ ನನ್ನತೆಗಳನ್ನು ಹೊಂದಿದ ಮಕ್ಕಳು ಹುಟ್ಟುತ್ತಿರುವುದರಿಂದ ಅವರನ್ನು ಎಲ್ಲಾ ವಿಭಾಗದಲ್ಲಿ ಪರಿಪೂರ್ಣ ಮಾಡಲು ಸಂಸ್ಥೆ ಒಳ್ಳೆಯ ಕಾರ್ಯವನ್ನು ನಿರ್ವಹಿಸುತ್ತಿದೆ ಎಂದು ಹುರಿದುಂಬಿಸಿದರು.

ಈ ಸಂದರ್ಭದಲ್ಲಿ ಡಾ. ದೇವಿದಾಸ ಪಾಟೀಲ್, ಡಾ. ಅನ್ವರ್ ಖಾನ್, ಡಾ. ನಮ್ಮರ ಹಯಾತ್, ಡಾ. ಮಲ್ಲೇರಾವ ಮಲ್ಲೆ, ಸಂಸ್ಥೆಯ ಅಧ್ಯಕ್ಷೆ ಡಾ. ರಾಗಿಣಿ ಎಂ, ಡಾ. ರಾಹುಲ್ ಮದಕನಹಳ್ಳಿ, ಶರಣ ರಾಜ್ ಚಪ್ಪರಬಂದಿ ಇದ್ದರು.



ಕಲಬುರಗಿ: ತಾಲೂಕಿನ ಶ್ರೀನಿವಾಸ್ ಸರಡಗಿ ಗ್ರಾಮದ ಮಹಾಲಕ್ಷ್ಮೀ ಶಕ್ತಿ ಪೀಠದ 13ನೇ ದಸರಾ ದರ್ಬಾರದ ಪ್ರಯುಕ್ತ 2ನೇ ಮೈಸೂರು ಮಾದರಿಯಲ್ಲಿ ಜಂಬೂ ಸವಾರಿ ಭವ್ಯ ಮೆರವಣಿಗೆ, ತುಲಾಭಾರ ಮತ್ತು ಭಾವೈಕ್ಯ ಧರ್ಮಸಭೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು. ಶಕ್ತಿಪೀಠಾಧಿಪತಿಗಳಾದ ಡಾ. ಅಪ್ಪಾರಾವ ದೇವಿ ಮುತ್ಯಾ, ಗ್ರಾಮೀಣ ಮತಕ್ಷೇತ್ರದ ಶಾಸಕ ಬಸವರಾಜ ಮತ್ತಿಮೂಡ, ಶಾಸಕ ಅಲ್ಲಮಪ್ರಭು ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ತಿಪ್ಪಣಪ್ಪ ಕಮಕನೂರ ಸೇರಿದಂತೆ ವಿವಿಧ ಮಠಾಧಿಶರು, ರಾಜಕಿಯ ಮುಖಂಡರು, ಕರ್ನಾಟಕ, ಆಂಧ್ರ ಪ್ರದೇಶ, ಮಹಾರಾಷ್ಟ್ರ, ಆಂಧ್ರಪ್ರದೇಶ ಹಾಗೂ ಗ್ರಾಮಸ್ಥರು, ಸಕಲ ಸದ್ಭಕ್ತರು ಆಗಮಿಸಿದರು. ನಂತರ ವಿವಿಧ ಕ್ಷೇತ್ರದಲ್ಲಿ ಶ್ರಮಿಸಿದ ಗಣ್ಯರಿಗೆ ಸುಕ್ಷೇತ್ರ ಶ್ರೀನಿವಾಸ ಸರಡಗಿ ಶ್ರೀ ಶಕ್ತಿಪೀಠದ ವತಿಯಿಂದ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಖಾದಿ ಮರಾಟ ಮತ್ತು ವಸ್ತು ಪ್ರದರ್ಶನಕ್ಕೆ ಚಾಲನೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.6: ಮಹಾತ್ಮ ಗಾಂಧಿ ಜಯಂತಿ ಪ್ರಯುಕ್ತ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ವತಿಯಿಂದ ಅಕ್ಟೋಬರ್ 02 ರಿಂದ 10 ರವರೆಗೆ ಕೊಪ್ಪಳ ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಳ್ಳಲಾದ ಖಾದಿ ಮರಾಟ ಮತ್ತು ವಸ್ತು ಪ್ರದರ್ಶನಕ್ಕೆ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹಾಗೂ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ ಕೆ.ವೀರೇಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಈ ವಸ್ತುಪ್ರದರ್ಶನದಲ್ಲಿ ಖಾದಿ ಬಟ್ಟೆಗಳು, ರೆಡಿಮೇಡ್ ಡ್ರೆಸ್ಸೆಸ್, ಜಮಖಾನ, ಕೈವಸ್ತ್ರ, ಟವಲುಗಳು ಮತ್ತು ಗ್ರಾಮೋದ್ಯೋಗ ಉತ್ಪನ್ನಗಳಾದ ಅಗರಬತ್ತಿ, ಸಾಬೂನು, ಜೇನುತುಪ್ಪ ಇತ್ಯಾದಿ ಉತ್ಪನ್ನಗಳು ಮಾರಾಟಕ್ಕಾಗಿ ಲಭ್ಯವಿರುತ್ತವೆ. ಆಸಕ್ತರು ಭಾಗವಹಿಸಬಹುದು ಎಂದು ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ: ಅರ್ಹ ಶಿಕ್ಷಕರು ಮತದಾರರ ಪಟ್ಟಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳಲು ಡಿ.ಸಿ. ಮನವಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.06–ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಅರ್ಹತಾ ದಿನಾಂಕ 01.11.2025ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು, ಈ ಹಿಂದೆ ಮತದಾರರ ಪಟ್ಟಿಯಲ್ಲಿ ಹೆಸರಿದ್ದರು ಸಹ ಇದೀಗ ಪುನ: ನಮೂನೆ-19ರಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿವಹಿಸಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿಗಳು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯಾಗಿರುವ ಬಿ. ಫೌಜಿಯಾ ತರನ್ನುಮ್ ಅವರು ಮನವಿ ಮಾಡಿದ್ದಾರೆ. ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿದೆ. ಮತದಾರರ ಪರಿಷ್ಕರಣೆ ಭಾಗವಾಗಿ ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರಂದು ಪ್ರಕಟಿಸಿ ಡಿಸೆಂಬರ್ 10 ರೊಳಗೆ ಆಕ್ಷೇಪಣೆ ಅಹ್ವಾನಿಸಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30 ರಂದು ಪ್ರಕಟಿಸಲಾಗುತ್ತದೆ ಎಂದು ಮತದಾರರ ಪರಿಷ್ಕರಣೆ ಕಾರ್ಯದ ಬಗ್ಗೆ ಸಹಾಯಕ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ಷೇತ್ರಕ್ಕೆ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಕಲಬುರಗಿ ಜಿಲ್ಲೆಯ ಚುನಾವಣಾ ಕ್ಷೇತ್ರವ್ಯಾಪ್ತಿಗೊಳಪಡುವ ಕಲಬುರಗಿ ಜಿಲ್ಲೆಯ ಜಿಲ್ಲಾಧಿಕಾರಿಗಳು, ಕಲಬುರಗಿ ಮಹಾನಗರಪಾಲಿಕೆ ಆಯುಕ್ತರು, ಕಲಬುರಗಿ ಮತ್ತು



ಸೇಡಂ ಸಹಾಯಕ ಆಯುಕ್ತರು, ಜಿಲ್ಲೆಯ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಶೀಲ್ದಾರರು ಸಹಾಯಕ ಮತದಾರರ ನೊಂದಣಾಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದು, ಈ ಕಚೇರಿಗಳಿಗೆ ಕಾಲಮಿತಿಯಲ್ಲಿ ಅರ್ಜಿ, ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೊಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತುಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ಮತದಾರರಿಗೆ ನೋಟಿಸ್ ನೀಡುತ್ತಾರೆ. ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದೆ ಇದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುತ್ತದೆ.

ಹೆಸರು ಸೇರಿಸಲು ಅರ್ಹತೆ ಏನು?: ಭಾರತದ ಪ್ರಜೆಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ಸೆಪ್ಟೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟ ಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹೀಗಾಗಿ ಅರ್ಜಿಯೊಂದಿಗೆ ಶಾಲಾ ಸಂಸ್ಥೆಯಿಂದ ಅನುಬಂಧ-2ರಲ್ಲಿ ಪಡೆದ ಪ್ರಮಾಣ ಪತ್ರ ಲಗತ್ತಿಸಬೇಕು.

ಬಲ್ಕ್ ಅರ್ಜಿ ಸ್ವೀಕರಿಸಲ್ಲ: ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾ-ರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸುವುದಿಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಸಿಬ್ಬಂದಿಗಳ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಗಳಿಗೆ ಸಲ್ಲಿಸಬಹುದು. ಬಲ್ಕ್ (ಗುಚ್ಛದ) ರೂಪದಲ್ಲಿ ಅರ್ಜಿ ಸ್ವೀಕರಿಸಲ್ಲ. ಕುಟುಂಬದ ಎಲ್ಲಾ ಸದಸ್ಯರ ಅರ್ಜಿಗಳನ್ನು ಕುಟುಂಬ ಯಾರಾದರು ಒಬ್ಬ ಸದಸ್ಯರು ಸಲ್ಲಿಸಬಹುದಾಗಿದೆ. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದಲ್ಲಿ ಪ್ರಜಾಪ್ರಾತಿನಿಧ್ಯ ಅಧಿನಿಯಮ-1950ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಸಹಾಯಕ ಚುನಾವಣಾಧಿಕಾರಿಗಳು ತಿಳಿಸಿದರು.

# ರೈತರ ನೋವಿಗೆ ಈಡಿಗ ಸಮುದಾಯದ ಸಂಪೂರ್ಣ ಬೆಂಬಲ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ :ಅ.6:ರೈತರ ನೋವು ಅದು ದೇಶದ ನೋವಾಗಿದ್ದು ಅನ್ನದಾತರ ಸಂಕಷ್ಟಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರವು ತಕ್ಷಣ ಮಧ್ಯಪ್ರವೇಶಿಸಿ ನೆರವಿಗೆ ಧಾವಿಸಬೇಕು. ರೈತರ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹೋರಾಟಕ್ಕೆ ಈಡಿಗ ಬಿಲ್ಲವ ಸೇರಿದಂತೆ 26 ಪಂಗಡಗಳ ಸಂಪೂರ್ಣ ಬೆಂಬಲವಿದೆ ಎಂದು ಚಿತ್ತಾಪುರ ಕರದಾಳು ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿ ಪೀಠದ ಡಾ. ಪ್ರಣವಾನಂದ ಶ್ರೀಗಳು ಹೇಳಿದರು.



ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯಿಂದ ಕಲಬುರಗಿ ಜಗತ್ ವೃತ್ತದಲ್ಲಿ ಅಕ್ಟೋಬರ್ 2 ರಿಂದ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹಾಗೂ ಅಕ್ಟೋಬರ್ 13ರ ಕಲಬುರಗಿ ಬಂದ್ ಗೆ ಈಡಿಗ ಸಮುದಾಯವು ಸಂಪೂರ್ಣ ಬೆಂಬಲ ನೀಡಲಿದೆ. ಸಮುದಾಯದವರ ಅಂಗಡಿ ಮುಗ್ಗಟ್ಟುಗಳನ್ನು ಆ ದಿನ ಬಂದ್ ಮಾಡಿ, ಆಟೋ ಚಾಲಕರು ಕೂಡ ಬಂದ್ ಗೆ ಕೈಜೋಡಿಸಲಿದ್ದಾರೆ. ರೈತ ಕಷ್ಟಕ್ಕೆ ಸಿಲುಕಿದರೆ ಅದು ರಾಷ್ಟ್ರ ಸಂಕಷ್ಟಕ್ಕೆ ಸಿಲುಕಿದಂತೆ. ದೇವರಿಗೆ ನೈವೇದ್ಯ, ಜನರಿಗೆ ಹಸಿವು ನೀಗಿಸುವ ಅಣ್ಣ ನೀಡುವ ರೈತಾಪಿ ವರ್ಗ ಅತಿವೃಷ್ಟಿಯಿಂದ ತೀವ್ರಹಾನಿಗೊಳಗಾಗಿದ್ದು ನೆರವನ್ನು ಕೋರಿ ಆಗ್ರಹಿಸುತ್ತಿರುವುದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ಸ್ವಾಮೀಜಿ ಹೇಳಿದರು.

ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಅಧ್ಯಕ್ಷರಾದ ದಯಾನಂದ ಪಾಟೀಲ್ ಮಾತನಾಡಿ ರೈತರು ಅತಿವೃಷ್ಟಿಗೆ ಸಿಲುಕಿ ಈ ಬಾರಿ ಹಬ್ಬವನ್ನು ಕೂಡ ಆಚರಿಸದ ಸ್ಥಿತಿ ಎದುರಾಗಿದೆ. ಅದಕ್ಕಾಗಿ ಕಲಬುರಗಿ ಜಿಲ್ಲೆಯನ್ನು ಹಸಿ ಬರಗಾಲ ಜಿಲ್ಲೆ ಎಂದು ಘೋಷಣೆ ಮಾಡಬೇಕು, ಸಾಲಮನ್ನಾ, ರಾಷ್ಟ್ರೀಯ ವಿಪತ್ತು ಪರಿಹಾರ ವಿತರಣೆ, ವಿಶೇಷ ಪ್ಯಾ-ಕೇಜ್ ಅಡಿಯಲ್ಲಿ ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಕೂಡಲೇ ರಾಜ್ಯ ಸರ್ಕಾರ ಪ್ರಕಟಿಸುವಂತೆ ಒತ್ತಾಯಿಸಿದರು.

ಧರಣಿ ಸತ್ಯಾಗ್ರಹದಲ್ಲಿ ಈಡಿಗ ನಾಯಕರದ ವೆಂಕಟೇಶ ಗುಂಡಾನೂರು, ಅಂಬಯ್ಯ ಗುತ್ತೇದಾರ್ ಇಬ್ರಾಹಿಂಪುರ್, ಡಾ. ಸದಾನಂದ ಪೆರ್ಲ, ರಮೇಶ್ ಗುತ್ತೇದಾರ್, ರೈತ ಮುಖಂಡರಾದ ಅನಿಲ್ ಡಾಂಗೆ, ಯಲ್ಲಾಲಿಂಗ ಪೂಜಾರಿ, ಮಹೇಶ್ ಕಡೇಚೂರ್ ಮಲ್ಲಿಕಾರ್ಜುನ ಪೂಜಾರಿ, ಭೀಮಾಶಂಕರ ಮಾಡಿಯಾಳ, ಶರಣಬಸಪ್ಪ ಗಣಜಲಖೇಡ್ , ನಾಗಪ್ಪ ರಾಯಚೂರಕರ, ಸಾಜಿದ ಅಹಮದ್ ಮತ್ತಿತರು ಭಾಗವಹಿಸಿದ್ದರು.

# ಬೆಂಬಲ ಬೆಲೆ ಯೋಜನೆಯಡಿ ಹೆಸರು ಕಾಳು, ಉದ್ದಿನ ಕಾಳು ಸೂರ್ಯಕಾಂತಿ ಹಾಗೂ ಸೋಯಾಬಿನ್ ಖರೀದಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.06–2025–26ನೇ ಸಾಲಿನ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ ಗುಣಮಟ್ಟದ (FAQ) ಹೆಸರು ಕಾಳು, ಉದ್ದಿನ ಕಾಳು, ಸೂರ್ಯಕಾಂತಿ ಖರೀದಿಸಲು ಸರ್ಕಾರವು ದಿನಾಂಕ:25-09-2025 ರಂದು ಹಾಗೂ ಸೋಯಾಬಿನ್ ಖರೀದಿಸಲು 29-09-2025 ರಂದು ಆದೇಶ ಹೊರಡಿಸಿದ್ದು, ಅದರಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಈ ಕೆಳಕಂಡಂತೆ ಕೃಷಿ ಉತ್ಪನ್ನಗಳ ಖರೀದಿಗೆ ಖರೀದಿ ಕೇಂದ್ರಗಳನ್ನು ತೆರೆದು ಖರೀದಿಸಲು ಅನುಮತಿ ನೀಡಲಾಗಿದೆ.

ಕಲಬುರಗಿ ಜಿಲ್ಲೆಯ ರೈತ ಭಾಂದವರು ಇದರ ಸದುಪಯೋಗ ಪಡೆದುಕೊಂಡು ತಮ್ಮ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ (PACS) ಹಾಗೂ ರೈತ ಉತ್ಪಾದಕ ಸಂಘ (FPO) ಗಳಿಗೆ ಭೇಟಿ ನೀಡಿ ತಾವು ಬೆಳೆದ ಹೆಸರು ಕಾಳು, ಉದ್ದಿನ ಕಾಳು, ಸೂರ್ಯಕಾಂತಿ ಹಾಗು ಸೋಯಾಬೀನ ಮಾರಾಟಕ್ಕೆ ನೋಂದಾಯಿಸಿಕೊಂಡು ಮಾರಾಟ ಮಾಡಬೇಕೆಂದು ಎಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 67 ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಮೂಲಕ (ಪಿಎಸಿಎಸ್) (PACS) ಹಾಗೂ ರೈತ ಉತ್ಪಾದಕ ಸಂಘ (ಎಫ್‌ಪಿಓ) (FPO) ಗಳ ಮೂಲಕ ಹೆಸರು ಕಾಳು ಹಾಗೂ ಉದ್ದಿನ ಕಾಳು ಒಟ್ಟು 59 (ಪಿಎಸಿಎಸ್) (PACS) ಹಾಗೂ (ಎಫ್‌ಪಿಓ) FPO ಗಳ ಮೂಲಕ ಸೂರ್ಯಕಾಂತಿ ಮತ್ತು 47 (ಪಿಎಸಿಎಸ್) (PACS) ಹಾಗೂ (ಎಫ್‌ಪಿಓ) ಈಕಔ ಗಳ ಮೂಲಕ ಸೋಯಾಬೀನ ಖರೀದಿ ಮಾಡಲಾಗುತ್ತದೆ. ನಾಫೆಡ್ ಸಂಸEÜ(NAFED) ರಾಜ್ಯ ಖರೀದಿ ಸಂಸ್ಥೆಯಾಗಿದ್ದು, ಪ್ರತಿಯೊಂದು ಖರೀದಿ ಕೇಂದ್ರಗಳಲ್ಲಿ ಪಿ.ಓ.ಎಸ್. (POS) ಯಂತ್ರಗಳ ಮೂಲಕ ರೈತರ ನೊಂದಣಿ ಹಾಗೂ ಖರೀದಿ ಪ್ರಕ್ರಿಯೆಯಲ್ಲಿ ಗಖಆಂಖ ಬಯೋ ಮೇಟ್ರಿಕ್ ಪಡೆಯುವುದು ಕಡ್ಡಾಯವಾಗಿರುತ್ತದೆ.

ಹೆಸರು ಕಾಳು, ಉದ್ದಿನ ಕಾಳು ಹಾಗೂ ಸೂರ್ಯಕಾಂತಿ ಖರೀದಿಸಲು ರೈತರ ನೋಂದಣಿ ಕಾರ್ಯವನ್ನು ದಿ:13-12-2025 ರವರೆಗೆ ಹಾಗೂ ಖರೀದಿ ಪ್ರಕ್ರಿಯೆಯು ದಿ:23-12-2025 ರವರೆಗೆ ಕೈಗೊಳ್ಳಲಾಗುತ್ತದೆ. ಅದೇ ರೀತಿ ಸೋಯಾಬೀನ್ ಖರೀದಿಸಲು ರೈತರ ನೋಂದಣಿ ಕಾರ್ಯವನ್ನು ದಿ:17-12-2025 ರವರೆಗೆ ಹಾಗೂ ಖರೀದಿ ಪ್ರಕ್ರಿಯೆಯನ್ನು ದಿ:27-12-2025 ರವರೆಗೆ ಕೈಗೊಳ್ಳಲಾಗುತ್ತದೆ. ರೈತರಿಂದ ಖರೀದಿಸಿದ ಉತ್ಪನ್ನದ ಮೌಲ್ಯವನ್ನು ಡಿ.ಬಿ.ಟಿ. (DBT) ಪೋರ್ಟಲ್ ಮೂಲಕ ಪಾವತಿಸಲಾಗುತ್ತದೆ.

ಹೆಸರು ಕಾಳನ್ನು ಪ್ರತಿ ಕ್ವಿಂಟಾಲ್‌ಗೆ ಖರೀದಿ ದರ 8,768 ರೂ. ರಂತೆ ಪ್ರತಿ ಎಕರೆಗೆ 03 ಕ್ವಿಂಟಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಲ್ ಖರೀದಿಸಲಾಗುತ್ತದೆ.

ಉದ್ದಿನ ಕಾಳು ಪ್ರತಿ ಕ್ವಿಂಟಾಲ್‌ಗೆ ದರ 7,800 ರೂ. ರಂತೆ ಪ್ರತಿ ಎಕರೆಗೆ 05 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತ-ರಿಂದ ಗರಿಷ್ಠ 30 ಕ್ವಿಂಟಾಲ್‌ವರೆಗೆ ಖರೀದಿಸಲಾಗುತ್ತದೆ.

ಸೂರ್ಯಕಾಂತಿ ಪ್ರತಿ ಕ್ವಿಂಟಾಲ್‌ಗೆ ದರ 7,721 ರೂ.ರಂತೆ ಪ್ರತಿ ಎಕರೆಗೆ 04 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್‌ವರೆಗೆ ಖರೀದಿಸಲಾಗುತ್ತದೆ.

ಸೋಯಾಬೀನ್ ಪ್ರತಿ ಕ್ವಿಂಟಾಲ್‌ಗೆ 5,328 ರೂ.ರಂತೆ ಪ್ರತಿ ಎಕರೆಗೆ 05 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಖರೀದಿಸಲಾಗುತ್ತದೆ. ಸರ್ಕಾರದ ಆದೇಶದಂತೆ ಕಲಬುರಗಿ ಜಿಲ್ಲೆಗೆ ಬೆಂಬಲ ಬೆಲೆ ಯೋಜನೆಯಡಿ ಹೆಸರು ಕಾಳು ಖರೀದಿಸಲು ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ಕಲಬುರಗಿ ಸಂಸ್ಥೆಯನ್ನು, ಉದ್ದಿನ ಕಾಳು ಹಾಗೂ ಸೋಯಾಬೀನ್ ಖರೀದಿಸಲು ಕಲಬುರಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಹಾಗೂ ಸೂರ್ಯಕಾಂತಿ ಖರೀದಿಸಲು ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳ ನಿಯಮಿತ (KOF) ಸಂಸ್ಥೆಯನ್ನು ಖರೀದಿ ಸಂಸ್ಥೆಯನ್ನಾಗಿ ನೇಮಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉದ್ದಿನ ಕಾಳು ಮತ್ತು ಸೋಯಾಬೀನ ಖರೀದಿಗಾಗಿ (KSCMF)-ಮೊಬೈಲ್ ಸಂಖ್ಯೆ 9449864446, ಹೆಸರು ಕಾಳು ಖರೀದಿಗಾಗಿ (KSPAML) ಮೊಬೈಲ್ ಸಂಖ್ಯೆ: 9964474444 ಹಾಗೂ ಸೂರ್ಯಕಾಂತಿ ಖರೀದಿಗಾಗಿ (KOF) ಮೊಬೈಲ್ ಸಂಖ್ಯೆ 9591812142 ಗೆ ಸಂಪರ್ಕಿಸಲು ಕೋರಲಾಗಿದೆ.

# ದಲಿತ ಸೇನೆಯ ನೂತನ ಪದಾಧಿಕಾರಿಗಳ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.6: ಖ್ಯಾತ ವಕೀಲರು ಹಾಗೂ ದಲಿತ ಸೇನೆಯ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ ಹಾಗೂ ದಲಿತ ಸೇನೆ ಜಿಲ್ಲಾಧ್ಯಕ್ಷ ಮಂಜುನಾಥ ಭಂಡಾರಿ ಅವರ ನೇತೃತ್ವದಲ್ಲಿ ನೂತನ ಪದಾಧಿಕಾರಿಗಳ ನೇಮಕ ಸಭೆ ನಡೆಯಿತು.

ನಗರದ ಜಗತ್ ವೃತ್ತದ ಬಳಿ ಇರುವ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಅದೆ ಆವರಣದಲ್ಲಿ ದಲಿತ ಸೇನೆಯ ಕಾಳಗಿ ತಾಲೂಕಿನ ಅಧ್ಯಕ್ಷರಾಗಿ



ಕತ್ತಲಪ್ಪ ಅಂಕ್ಕನ ಆಯ್ಕೆ ಹಾಗೂ ದಲಿತ ಸೇನೆಯ ಕಾರ್ಯಾಧ್ಯಕ್ಷರಾಗಿ ಮಾರುತಿ ತೇಗಲತ್ತಿಪ್ಪಿ ಆಯ್ಕೆ ಹಾಗೂ ಕಾಳಗಿ ತಾಲೂಕಿನ ಕಾರ್ಮಿಕ ಘಟಕದ ಅಧ್ಯಕ್ಷರಾಗಿ ಆಕಾಶ್ ಹೆಬ್ಬಾಳ ಅವರನ್ನು ಆಯ್ಕೆ ಮಾಡಿ ಅವರಿಗೆ ದಲಿತ ಸೇನೆಯ ಶಾಲು ಹೊದಿಸಿ ವಿಶೇಷವಾಗಿ ಸನ್ಮಾನಿಸಿ ಸಂಘಟನೆ ಬರಮಾಡಿಕೊಂಡರು.

ನೇಮಕಗೊಂಡ ನೂತನ ಪದಾಧಿಕಾರಿಗಳಿಗೆ ದಲಿತ ಸೇನೆಯ ಸಿದ್ದಾಂತಕ್ಕೆ ತಕ್ಕಂತೆ ಜನರ ನೋವಿಗೆ ಶೋಷಣೆಗೆ ಸ್ಪಂದಿಸುವ ಕೆಲಸ ಮಾಡುವಂತೆ ದಲಿತ ಸೇನೆಯ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ ಅವರು ಸಲಹೆ ನೀಡಿದರು. ಬಳಿಕ ಮಾತನಾಡಿದ ದಲಿತ ಸೇನೆಯ ಜಿಲ್ಲಾಧ್ಯಕ್ಷ ಮಂಜುನಾಥ ಭಂಡಾರಿ ಅವರು ದಲಿತ ಸೇನೆಯ ಕಾರ್ಯಕರ್ತರು ಯಾವಾಗಲೂ ಅನ್ಯಾಯದ ವಿರುದ್ಧ ಹೋರಾಟ ಮಾಡಬೇಕೆಂದು ನೂತನ ಪದಾಧಿಕಾರಿಗಳಿಗೆ ಕರೆ ನೀಡಿದರು. ಜಿಲ್ಲೆಯಾದ್ಯಂತ ದಲಿತ ಸೇನೆಯ ಹೆಸರಿನಲ್ಲಿ ಯಾರಾದರೂ ಅಧಿಕಾರಿಗಳಿಗೆ ಅಂಜಿಕೆ ಹಾಕುವುದು ಅಥವಾ ಸರ್ಕಾರಿ ಕಛೇರಿಗಳಲ್ಲಿ ದಲಿತ ಸೇನೆಯ ಹೆಸರಿನಲ್ಲಿ ನಿಮ್ಮಗೆ ತೊಂದರೆ ನೀಡುತ್ತಿದ್ದರೆ ಕೂಡಲೇ ಅವರನ್ನು ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಅಥವಾ ದಲಿತ ಸೇನೆಯ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ ಹಾಗೂ ಜಿಲ್ಲಾಧ್ಯಕ್ಷ ಮಂಜುನಾಥ ಭಂಡಾರಿ ಅವರಿಗೆ ಈ ತರಹದ ಘಟನೆಗಳು ಗಮನಕ್ಕೆ ತಂದಿದೆ ಆದ್ರೆ ದಲಿತ ಸೇನೆ ಅವರ ವಿರುದ್ಧ ಕ್ರಮ ಕೈಗೊಳ್ಳಲು ಸಿದ್ದರಿದ್ದೇವೆ ಎಂದು ಭಂಡಾರಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಯುವ ಮುಖಂಡರಾದ ಸಂತೋಷ ಪಾಳಾ, ಅಷ್ಪಕ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾರ್ಮಿಕರಿಗೆ ವಾರದ ರಜೆ ಕಡ್ಡಾಯವಾಗಿ ನೀಡಬೇಕು: ಗಂಗಾಧರ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.6: ಕಾರ್ಮಿಕರಿಗೆ ಕಡ್ಡಾಯವಾಗಿ ವಾರದಲ್ಲಿ ಒಂದು ದಿನ ರಜೆ ನೀಡಿಬೇಕೆಂದು ಕಾರ್ಮಿಕ ನಿರೀಕ್ಷಕ ಗಂಗಾಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಟ್ಟೆ ಅಂಗಡಿ, ಕಿರಣ ಅಂಗಡಿ, ಹೋಟೆಲ್, ಧಾಭಾ, ಗ್ಯಾ-ರೇಜ್, ಬೇಕರಿ, ಪೆಟ್ರೋಲ್ ಬಂಕ್, ಹಾರ್ಡ್ವೇರ್ , ಆನ್ಲೈನ್ ಸೆಂಟರ್, ಕಟಿಂಗ್ ಶಾಪ್ ಸೇರಿದಂತೆ ಇತರೆ ಅಂಗಡಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ವಾಣಿಜ್ಯ ಸಂಸ್ಥೆ ಕಾಯ್ದೆ 1961 ಅಡಿ ವಾರದಲ್ಲಿ ಒಂದು ದಿವಸ ರಜೆ ನೀಡುವುದು ಇದೆ ಎಂದಿದ್ದಾರೆ. ವಾರದ ಯಾವ ದಿನ ರಜೆ ನೀಡುತ್ತಿರಿ ಎನ್ನುವ ಬಗ್ಗೆ ಅಂಗಡಿಗಳಲ್ಲಿ ಕಡ್ಡಾಯವಾಗಿ ಫಲಕ ಅಳವಡಿಸಬೇಕು ಒಂದು ವೇಳೆ ರಜೆ ದಿನ ಅಳವಡಿಸಿದ್ದೇ ಇದ್ದಲ್ಲಿ ಕಾನೂನು ಕ್ರಮ ಜರುಗಿಸಲಾಗುತ್ತದೆ.



ಕರ್ನಾಟಕ ಅಂಗಡಿ ವಾಣಿಜ್ಯ ಸಂಸ್ಥೆ ಅಡಿಯಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳತಕ್ಕದ್ದು ಚಾಲಕ, ನಿರ್ವಾಹಕ, ಕ್ಲೀನರ್, ನಿಲ್ದಾಣ ಸಿಬ್ಬಂದಿ, ಬುಕಿಂಗ್, ಸಮಯ ಪಾಲಕ ಸೇರಿದಂತೆ ಕೆಲಸ ಮಾಡುವ 18ರಿಂದ 60 ವರ್ಷದೊಳಗಿನ ಕಾರ್ಮಿಕರು ಕಾರ್ಮಿಕ ಇಲಾಖೆಗೆ ಸಂಪರ್ಕಿಸಿ ಕಾರ್ಮಿಕರ ಕಾರ್ಡ್ ಪಡೆದುಕೊಳ್ಳಬೇಕು ಹಾಗೂ ಅಂಬೇಡ್ಕರ್ ಸಹಾಯಹಸ್ತದಲ್ಲಿ ಕ್ಷೌರಿಕರು, ಮಡಿವಾಳರು, ಕಂಬಾರರು, ಕುಂಬಾರರು, ಚಮ್ಮಾರರು ಸೇರಿದಂತೆ ಇತರೆ ಅಸಂಘಟಿತ ವಲಯದಲ್ಲಿ ಬರುವವರು ಕಾರ್ಡ್ ಮಾಡಿಸಿಕೊಳ್ಳಬೇಕು ಎಂದು ಕಾರ್ಮಿಕ ಅಧಿಕಾರಿ ಗಂಗಾಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿ ಎಕರೆಗೆ 25 ಸಾವಿರ ರೂ.ಗಳಂತೆಯೇ ಹತ್ತು ಎಕರೆಗೆ ಪರಿಹಾರ ನೀಡಲು ಆಂದೋಲಾ ಶ್ರೀಗಳ ಆಗ್ರಹ



ತ್ರಿಮೂರ್ತಿ ಸಚಿವರೆಲ್ಲಿ?

ಯಾದಗಿರಿ:ಮಳೆ,ಪ್ರವಾಹದಿಂದ ಆದ ಬೆಳೆ ಹಾನಿಗೆ ಕೂಡಲೇ ಪ್ರತಿ ಹೆಕ್ಟೇರ್ ಗೆ 25 ಸಾವಿರ ರೂ., ವಾಣಿಜ್ಯ ಬೆಳೆಗೆ ಪ್ರತಿ ಹೆಕ್ಟೇರ್ ಗೆ 50 ಸಾವಿರ ರೂ. ಪರಿಹಾರ ನೀಡಬೇಕೆಂದು ಶಿವಸೇನಾ ರಾಜ್ಯಾಧ್ಯಕ್ಷ ಸಿದ್ದಲಿಂಗ ಸ್ವಾಮೀಜೀ ಆಂದೋಲಾ ಆಗ್ರಹಿಸಿದ್ದಾರೆ.ಸೋಮವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ನಾಮಕವಾಸ್ತೆ ಸಿಎಂ ಅವರು ವೈಮಾನಿಕ ಸಮೀಕ್ಷೆ ನಡೆಸಿದ್ದಾರೆ. ಅವರ ಜೊತೆಯಲ್ಲಿ ಅವಳಿ ಜಿಲ್ಲೆಗಳ ತ್ರಿಮೂರ್ತಿ ಸಚಿವರು ( ಪ್ರಿಯಾಂಕ್ ಖರ್ಗೆ, ಡಾ.ಶರಣಪ್ರಕಾಶ ಪಾಟೀಲ್, ಶರಣಬಸಪ್ಪ ದರ್ಶನಾಪುರ) ಇದ್ದರೇ ಹೊರತು ಹಳ್ಳಿಗಳಿಗೆ ತೆರಳಿ ಬೆಳೆ ಹಾನಿ ಪರಿಶೀಲಿಸಲಿಲ್ಲ.

2 ಸಾವಿರ ಕೋಟಿ ರೂ.ಪರಿಹಾರ ನೀಡುವುದಾಗಿ ಸಿಎಂ ಅವರು ಘೋಷಿಸಿದ್ದೇ ಬಂತು, ಆದರೇ ಇಂದಿಗೂ ಒಂದೇ ಒಂದು ರೂ. ಪರಿಹಾರ ಬಿಡುಗಡೆ ಮಾಡಿಲ್ಲ. ಜಾತಿ ಸಮೀಕ್ಷೆಗಿಂತ ಬೆಳೆ ಸಮೀಕ್ಷೆ ಮುಖ್ಯವಾಗಿದೆ. ಕಳೆದ ವರ್ಷ ಬಂದ ನೆಟೆ ರೋಗಕ್ಕೆ ಪರಿಹಾರ ಘೋಷಿಸಿದ್ದ ಸರ್ಕಾರ ಇದುವರೆಗೂ ನೀಡಿಲ್ಲ. ಬರಿ ಭರವಸೆಗಳ ಮೇಲೆ ಸರ್ಕಾರ ನಡೆಸುವ ಮೂಲಕ ಜನತೆಗೆ ಮೋಸ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದರು.ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಾಂಕ್ರಾಮಿಕ ರೋಗಗಳ ಬೀತಿ ಕಾಡುತ್ತಿದೆ. ಜನರ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ದವಸ ಧ್ಯಾನ, ಹಣ ಗಂಗೇ ಪಾಲಾಗಿವೆ. ಕಾರಣ,ಕೂಡಲೇ ಜಿಲ್ಲಾಡಳಿತ ಜನರ ಕಡೆ ಗಮನ ನೀಡಬೇಕೆಂದರು.ಸರ್ಕಾರ ಇನ್ನೂ ನಿರ್ಲಕ್ಷ್ಯವಹಿಸಿದರೇ ರೈತರು ಆತ್ಮಹತ್ಯೆ ದಾರಿ ತುಳಿಯಬೇಕಾಗುತ್ತದೆ ಎಂದು ಶ್ರೀಗಳು ಆಂತಕ ವ್ಯಕ್ತಪಡಿಸಿದರು.

**ಶುರುವಾದ ಹೊಸ ವರಸೆ ತಡೆಯಿರಿ.**

ಐ ಲವ್ ಮೊಹಮದ್ ಎಂಬ ಬ್ಯಾನರ್ ಗಳು ಕಟ್ಟುವ ಹೊಸ ಕೆಲಸಕ್ಕೆ ಕೆಲವರು ಮುಂದಾಗುತ್ತಿದ್ದು, ಯುಪಿ ಸರ್ಕಾರದ ಮಾದರಿಯಲ್ಲಿಯೇ ಶಿಕ್ಷೆಯಾಗಬೇಕು. ರಾಜ್ಯದಲ್ಲಿ ಆಳಂದ, ಸಚಿವ ಡಾ.ಶರಣಪ್ರಕಾಶ ಪಾಟೀಲ್ ಊರಾದ ಊಡುಗಿ, ದಾವಣಗೇರಿ ಸೇರಿದಂತೆಯೇ ವಿವಿಧಡೆ ಬ್ಯಾನರ್ ಕಟ್ಟುತ್ತಿದ್ದಾರೆ. ಇದು ಒಳ್ಳೆಯ ಬೆಳವಣಿಗೆ ಅಲ್ಲ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಆಂದೋಲಾ ಶ್ರೀಗಳು ಆಗ್ರಹಿಸಿದರು.

ಶಿವಸೇನಾ ಪಕ್ಷದ ರಾಜ್ಯ ಕಾರ್ಯದರ್ಶಿ ವಿಶಾಲ ಪಾಟೀಲ್, ...... ಇದ್ದರು.

**ಬಾಲ್ಕಿ ಪಟ್ಟದೇವರು ಮಾತಾಡಲಿ.**

ಬೆಂಗಳೂರಿನಲ್ಲಿ ಭಾನುವಾರ ನಡೆದ ಬವಸ ಸಂಸ್ಕೃತಿ ಉತ್ಸವದಲ್ಲಿ ಅಖಂಡ ವೀರಶೈವ ಲಿಂಗಾಯತ ಧರ್ಮ ಒಡೆಯುವ ಮತ್ತು ಕತ್ತರಿ ಹಾಕುವ ಕೆಲಸ ನಡೆದಿದೆ ಎಂದು ಶಿವಸೇನಾ ಪಕ್ಷದ ರಾಜ್ಯಾಧ್ಯಕ್ಷ ಸಿದ್ದಲಿಂಗ ಸ್ವಾಮೀಜಿ ಆಂದೋಲಾ ಆರೋಪಿಸಿದ್ದಾರೆ.

ಹಿಂದೆಯೂ ಕೂಡಾ ಧರ್ಮ ಒಡೆಯುವ ಕೆಲಸ ಮಾಡಿಯೇ ಅಧಿಕಾರ ಕಳೆದುಕೊಂಡ ಸಿದ್ದರಾಮಯ್ಯ ಅವರು ಈಗ ಮತ್ತೇ ಅದೆ ಕೆಲಸಕ್ಕೆ ಹಾಕಿದ್ದಾರೆ ಎಂದು ದೂರಿದರು.

ವಚನ ವಿವಿ ಸ್ಥಾಪನೆ, ಮೇಟ್ರೋ ಗೆ ಬಸವಣ್ಣ ನವರ ಹೆಸರು ಇಡಲು ಒಪ್ಪಿದ್ದನ್ನು ಸ್ವಾಗತಿಸಿದ ಅವರು, ಬಸವಣ್ಣನವಾದ ಬಸವಕಲ್ಯಾಣದಲ್ಲಿ ನಡೆಯುವ ಪ್ರಾಣಿ ಹತ್ಯೆ, ಗೋಹತ್ಯೆ ನಿಲ್ಲಿಸಲಿ, ಈ ಬಗ್ಗೆ ಬಾಲ್ಕಿ ಮಠದ ಸ್ವಾಮಿಗಳು ತುಟಿ ಬಿಚ್ಚಿ ಮಾತಾಡಬೇಕು. ಸಿದ್ದರಾಮಯ್ಯ ಅವರು ಎದೇ ಬಗೆದರೇ ಬಸವಣ್ಣನವರ ಕಾಣುತ್ತಾರೆ ಎಂದು ಹೇಳಿದ್ದಾರೆ. ಆದರೇ ಬಸವ ಕಲ್ಯಾಣದಲ್ಲಿ ಬೆಳಕು ಹರಿದರೇ ಪ್ರಾಣಿಗಳ ರಕ್ತವೇ ಕಾಣುತ್ತದೆ. ಈ ಬಗ್ಗೆ ಬಾಲ್ಕಿಯ ಪಟ್ಟದೇವರು ಮಾತಾಡಿ ರಕ್ತ ರಹಿತ ಬಸವ ಕಲ್ಯಾಣ ಮಾಡಿಸಲಿ, ಆಗ ವಚನ ವಿವಿ ಸ್ಥಾಪನೆಯಾದರೇ ಅದಕ್ಕೊಂದು ಅರ್ಥ ಬರುತ್ತದೆ ಎಂದು ಆಂದೋಲಾ ಶ್ರೀಗಳು ಕಿವಿ ಮಾತು ಹೇಳಿದರು.

# ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಕಚೇರಿ ಉದ್ಘಾಟನೆ



ಮಲ್ಲಮ್ಮನುಡಿವಾರ್ತೆ ಬಸವಕಲ್ಯಾಣ :– ಅ 6 ಬೀದರ ನಗರದಲ್ಲಿ ಶ್ರೀ ನಿವಾಸ ಮಂಟಪ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ರವಿವಾರ ನಡೆದ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಬೆಂಗಳೂರು (ರಿ) ಬೀದರ ಜಿಲ್ಲಾ ಘಟಕದ ವತಿಯಿಂದ ಅಭಿನಂದನಾ ಸಮಾರಂಭ ಹಾಗೂ ಅಖಿಲಕರ್ನಾಟಕಬ್ರಾಹ್ಮಣಮಹಾಸಭಾ ಜಿಲ್ಲಾ ಕಚೇರಿ ಉದ್ಘಾಟನೆ ಕಾರ್ಯಕ್ರಮ ಜರುಗಿತು. ಬೆಂಗಳೂರು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಎಸ್. ರಘುನಾಥ್ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ಕರ್ನಾಟಕ ಸರ್ಕಾರ ಬ್ರಹ್ಮಣ ಅಭಿವೃದ್ಧಿ ಮಂಡಳಿ ಎ. ಜಯಸಿಂಹ.ಅಧ್ಯಕ್ಷತೆ ಜಿಲ್ಲಾ ಅಧ್ಯಕ್ಷರಾದ ವೆಂಕಟೇಶ್ ಕುಲಕರ್ಣಿ ವಂದಿಸಿದರು. ಗೌರವಾಧ್ಯಕ್ಷರಾದ ಸುಧಾಕರ ರಾವ್ ಪಾಟೀಲ. ಹಾಗೂ ಕೇಶವರಾವ್ ತಳಘಟಕರ್. ನರಸಿಂಹ ದೀಕ್ಷಿತ್ ಬೀದರ ಜಂಟಿ ಕಾರ್ಯದರ್ಶಿ ರಾಜೇಶ್ ಕುಲಕರ್ಣಿ. ಕೋಲಾರ ರಾಜ್ಯ ಸಂಘಟನಾ ಕಾರ್ಯದರ್ಶಿ ಸತೀಶ್ ಕುಲಕರ್ಣಿ

ಸೇರಿದಂತೆ ಇನ್ನಿತರರಿಗೆ ಹುಮನಾಬಾದ ತಾಲೂಕಿನ ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿ ರಾಜೇಶ್ವರ ಹಾಗೂ ಮಾಣಿಕ್ ಪ್ರಭು ಬ್ರಾಹ್ಮಣ ಸಮಾಜದ ವತಿಯಿಂದ ಸನ್ಮಾನಿಸಲಾಯಿತು. ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರಿಯರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ,06:ಹಿರಿಯರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಕಲಬುರಗಿ ಮಹಾನಗರಪಾಲಿಕೆಯ ಮಹಾಪೌರರಾದ ವರ್ಷಾ ರಾಜೀವ ಜಾನೆ ಅವರು ಹೇಳಿದರು.ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಿವೃತ್ತ ನೌಕರರ ಸಂಘ, ಹಿರಿಯ ನಾಗರಿಕರ ವೇದಿಕೆ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಕಲಬುರಗಿ ನಗರದ ಹೊಸ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ವಿಶ್ವ ಹಿರಿಯ ನಾಗರೀಕ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಕಾರ್ಯಕ್ರಮದಲ್ಲಿ ಕಲಬುರಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಚಂದ್ರಿಕಾ ಪರಮೇಶ್ವರ ಅವರು ಮಾತನಾಡಿ, ಹಿರಿಯರು ಮಾರ್ಗದರ್ಶನ,ಸಲಹೆ ಕಿರಿಯರಿಗೆ ಸದಾ ಬೇಕಾಗುತ್ತದೆ. ಈಗಲೂ ನಮ್ಮ ಬದುಕಿನ ತಪ್ಪು ತಿದ್ದುವುದಕ್ಕೆ ಮನೆ ಮನೆಗೊಬ್ಬರು ಹಿರಿಯರು ಬೇಕು, ಅವರ ಆರ್ಶಿವಾದ ನಮ್ಮ ಮೇಲೆ ಸದಾ ಇರಬೇಕು. ನಮ್ಮ ಜೀವನದಲ್ಲಿ ಹಿರಿಯರು ಹಾಕಿದ ಮಾರ್ಗದರ್ಶನದಲ್ಲಿ ನಾವೆಲ್ಲರೂ ನಡೆದುಕೊಂಡು ಬಂದರೆ ನಮ್ಮ ಬದುಕಿನಲ್ಲಿ ಯಾರ ಮುಂದೆಯು ತಲೆಬಾಗುವ ಪರಿಸ್ಥಿತಿ ಬರುವುದಿಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಮಾತನಾಡಿ, ಸಮಾಜಕ್ಕೆ ಎತ್ತಿ ತೋರಿಸುವ ದಿನವೆಂದರೆ ಅದು ಹಿರಿಯ ನಾಗರಿಕ ದಿನಾಚರಣೆ–ಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ॥ಗುಂಡಪ್ಪ ಸೈದಾಪುರ ಅವರು ವಿಶೇಷ ಉಪನ್ಯಾಸ ನೀಡಿ ಹಿರಿಯರನ್ನು ಗೌರವಿಸಿದರೆ ಜಗತ್ತು ನಮ್ಮನ್ನು ಗೌರವಿಸುತ್ತದೆ. ಹಿರಿಯರು ನಮ್ಮ ಕುಟುಂಬದ ಮೂಲ ಮತ್ತು ಸಮಾಜದ ಆಧಾರ ಸ್ತಂಭಗಳಿದ್ದಂತೆ ಅವರ ಅನುಭವ, ಜ್ಞಾನ ಮತ್ತು ಮಾರ್ಗದರ್ಶನಕ್ಕೆ ನಾವು ಸದಾ ಕೃತಜ್ಞರಾಗಿರಬೇಕು ಎಂದು ಹೇಳಿದರು.

ಇತ್ತೀಚಿನ ದಿನಮಾನಗಳಲ್ಲಿ ಹಿರಿಯರಿಗೆ ಕೀಳಾಗಿ ಕಾಣುವುದೇ ಹೆಚ್ಚಾಗಿದೆ. ಹಿರಿಯರು ಘನತೆಯಿಂದ ಮತ್ತು ಸಂತೋಷದಿಂದ ಬದುಕುವಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ.ಅವರಿಗೆ ಬೆಂಬಲ ನೀಡುವುದು ಅವರ ಮಾತುಗಳನ್ನು ಕೇಳುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶ್ವ ಹಿರಿಯ ನಾಗರಿಕ ದಿನಾಚರಣೆ–ಯ ಪ್ರಯುಕ್ತ 2025–26ನೇ ಸಾಲಿನ ಹಿರಿಯ ನಾಗರಿಕ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದ 20 ಜನ ಹಿರಿಯ ನಾಗರಿಕರಿಗೆ ಪ್ರಶಂಸನಾ ಪತ್ರವನ್ನು ವಿತರಣೆ ಮಾಡಿದರು. ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರಿಗೆ ಜಿಲ್ಲಾಮಟ್ಟದಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ, ಸ್ಪರ್ಧೆಯಲ್ಲಿ ವಿಜೇತರಾದ ಹಿರಿಯರಿಗೆ ಸನ್ಮಾನಿಸಿ ಪ್ರಮಾಣಪತ್ರವನ್ನು ನೀಡಿ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ್ ಹುಸೇನ್ ಖಾನ್, ವಿಜಯಲಕ್ಷ್ಮೀ ಗ್ರಾಮಿಣಾಭಿವೃದ್ಧಿ ಸೇವಾ ಸಂಸ್ಥೆಯ ಅಧ್ಯಕ್ಷರಾದ ಲಿಂಗರಾಜ ತಾರಫೈಲ್, ಮಹಾದೇವಿ ತಾಯಿ ಮಹಿಳಾ ವಿಧ್ಯಾವರ್ಧಕ ಸಂಘದ ಅಧ್ಯಕ್ಷರಾದ ಅನಂತರಾಜ, ವಿನಾಯಕ ಎಜ್ಯುಕೇಶನ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಶ್ರೀಮಂತ ರೇವೂರ, ಹೈದ್ರಾಬಾದ್ ಕರ್ನಾಟಕ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ದತ್ತು ಅಗರವಾಲ್, ಸಹಾರಾ ಸಂಸ್ಥೆಯ ಮಸ್ತಾನ ಬಿರಾದಾರ ಸೇರಿದಂತೆ ಲಕ್ಷ್ಮೀಕಾಂತ ಕುಲಕರ್ಣಿ, ಸರಸ್ವತಿದೇವಿ, ಆನಂದರಾಜ್, ಪ್ರತಾಪಸಿಂಗ್ ತಿವಾರಿ, ಕಾಶಪ್ಪ ವಾಂಜರಖೇಡ, ಡಾ.ಅಬ್ದುಲ್ ವಾಹಿದ್ ಮುನೀರ್, ಸಂಗಮ್ಮ ಅಜ್ಜಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಬಾದಾಮಿಗೆ ಯುವ ಪರಿವರ್ತನೆ ಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.6–ಜನಸಾಮಾನ್ಯರ ವೇದಿಕೆ ಕರ್ನಾಟಕ ಅ.2 ರಿಂದ 13 ರ ವರೆಗೆ ಬೀದರನಿಂದ ಬೆಂಗಳೂರುವರೆಗೆ ಹಮ್ಮಿಕೊಂಡಿರುವ ಯುವ ಪರಿವರ್ತನೆ ಯಾತ್ರೆ ಸೋಮವಾರ ಬಾದಾಮಿ ನಗರಕ್ಕೆ ಆಗಮಿಸಿತು.

ಬೆಳಿಗ್ಗೆ ನಗರದ ಬಸವೇಶ್ವರ ಸರ್ಕಲ್‌ನಿಂದ ಆರಂಭವಾದ ಜಾಥಾ ಮೆರವಣಿಗೆಯು ಮುಖ್ಯರಸ್ತೆಯ ಮೂಲಕ ಅಂಬೇಡ್ಕರ ಸರ್ಕಲ್ ವರೆಗೆ ಆಗಮಿಸಿ ಡಾ.ಬಿ.ಆರ್. ಅಂಬೇಡ್ಕರ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ಜನಸಾಮಾನ್ಯರ ವೇದಿಕೆಯ ಯಾತ್ರೆ ಸಂಚಾಲಕ ಯಲ್ಲಪ್ಪ ಹೆಗಡೆ ಮಾತನಾಡಿ, ಕರ್ನಾಟಕ ರಾಜ್ಯದ ಜ್ವಲಂತ ಸಮಸ್ಯೆಗಳು ಹಾಗೂ ಜನಪ್ರತಿನಿಧಿಗಳ ನಿರ್ಲಕ್ಷ್ಯವನ್ನು ಸರಕಾರದ ಗಮನಕ್ಕೆ ತರಲು ಪಕ್ಷಾತೀತ, ಜಾತ್ಯಾತೀತವಾಗಿ ಈ ಜಾಥಾ ಹಮ್ಮಿಕೊಂಡಿದ್ದು, 10 ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಯಾತ್ರೆಯನ್ನು ಬೀದರನಿಂದ ಬೆಂಗಳೂರಿನ ವಿಧಾನಸೌಧದವರೆಗೂ 1200 ಕಿ.ಮೀ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎಸ್.ಡಿ.ಜೋಗಿನ, ಪುರಸಭೆ ಸದಸ್ಯ ಮಂಜುನಾಥ ಹೊಸಮನಿ, ಬಸವರಾಜ ಡೊಳ್ಳಿನ, ಹನಮಂತ ಅಪ್ಪನ್ನವರ, ಸೇರಿದಂತೆ ಇತರರು ಹಾಜರಿದ್ದರು. ನಂತರ ಗದಗ ಜಿಲ್ಲೆಯ ರೋಣ ಪಟ್ಟಣಕ್ಕೆ ಯಾತ್ರೆಯನ್ನು ಬೀಳ್ಕೊಡಲಾಯಿತು.

# ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅರ್ಜಿ ವಿನಾಕಾರಣ ನಿರಾಕರಣೆ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.6:ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅರ್ಜಿ ವಿನಕಾರಣ ನಿರಾಕರಣೆ ಮಾಡುತ್ತಿರುವ ಅಧಿಕಾರಗಳ ಕ್ರಮ ಖಂಡಿಸಿ ಆರ್.ಎಮ್.ಎಸ್.ಸಂಘ ದಿಂದ ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.



ಪಟ್ಟಣದ ತಹಸೀಲ್ದಾರ ಕಛೇರಿ ಸೋಮವಾರ ಆರ್. ಎಮ್. ಎಸ್ ಸಂಘದ ತಾಲೂಕ ಅಧ್ಯಕ್ಷ ಬಬನ ರಾಠೋಡ ಅವರ ನೇತೃತ್ವದ ತಂಡ ತಹಸೀಲ್ದಾರ ಕಾರ್ಯಾಲಯದಲ್ಲಿ ಆಗುತ್ತಿರುವ ಅನ್ಯಾಯದ ಬಗ್ಗೆ ಗಮನ ಹರಿಸಿ ಜನ ಸಾಮಾನ್ಯರಿಗೆ ತೊಂದರೆ ಆಗದಂತೆ ನೋಡಿ ಕೊಳ್ಳುವಂತೆ ಮನವಿ ಮಾಡಿದರು.

ನಂತರ ಮಾತನಾಡಿ,ಕಮಲನಗರ ತಾಲೂಕಿನ ಜನತೆಗೆ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರದ ಸಮಸ್ಯೆ ಆಗುತ್ತಿದೆ. ಕಾರಣ ತಿಳಿಯದೆ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರ ತಿರಸ್ಕಾರಗೊಳ್ಳುತ್ತಿದೆ. ಸುತ್ತಮುತ್ತಲಿನ ಹಳ್ಳಿಯ ಜನರಿಗೆ ಹಾಗೂ ಶಾಲೆಯ ಮಕ್ಕಳಿಗೆ ಶಾಲೆಯ ಸೌಲಭ್ಯಗಳು ಅಥವಾ ರಾಶನ ಕಾರ್ಡ ಸರ್ಪಡೆಗೆ ಆದಾಯ ಮತ್ತು ಜಾತಿ ಪ್ರಮಾಣ ಪತ್ರದ ಅವಶಕತೆ ಇರುತ್ತದೆ.

ಆದರೆ ತಾವು ಜನರ ಸಮಸ್ಯೆ ಪರಿಹಾರ ಮಾಡದೆ ಮತ್ತೆ ಜನರ ಸಮಸ್ಯೆ ಉಂಟು ಮಾಡುವ ಕೆಲಸವನ್ನು ಮಾಡುತ್ತಿದ್ದೀರಿ. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಹಾಗೂ ಇನ್ನಿತರ ಪ್ರಮಾಣ ಪತ್ರಕ್ಕೆ ಬೇಕಾಕಗುವ ದಾಖಲೇಗಳು ತಮ್ಮ ಕಛೇರಿ ಸೂಚನಾ ಫಲಕ ಮೇಲೆ ಅಂಟಿಸಿ ಮತ್ತು ನಾಡಕಛೇರಿಯ ಹೊರಗಡೆ ಹೊರಡಿಸಿರಿ ಎಂದರು.

ಈ ಸಂದರ್ಭದಲ್ಲಿ ದೇವಿದಾಸ ಚೌವ್ಹಾಣ, ಪ್ರವೀಣ ಜಾಧವ, ಸಿದ್ದು ಸೋನಾಳೆ, ಅಜಯ ರಾಠೋಡ, ಅಜಯ ಥಾಕುರ ಸೇರಿದಂತೆ ಇನ್ನಿತರ ಇದ್ದರು.

# ಶಮಶೀರನಗರ ಗ್ರಾಮದಲ್ಲಿ ಗ್ಯಾರಂಟಿ ಯೋಜನಾ ಅರಿವು



ಬೀದರ. ಅ. 06 : ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ರವರ ಮಾರ್ಗದರ್ಶನದಲ್ಲಿ ಬೀದರ ತಾಲ್ಲೂಕಿನ ಪಂಚ್ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಮಂದಕನಳ್ಳಿ ಗ್ರಾಮಪಂಚಾಯತ ವ್ಯಾಪ್ತಿಯಲ್ಲಿ ಬರುವ ಶಮಶೀರನಗರ ಗ್ರಾಮದಲ್ಲ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

'ಗೃಹ ಲಕ್ಷ್ಮಿ' ಗ್ಯಾರಂಟಿ ಯೋಜನೆ ರಾಜ್ಯದ ಲಕ್ಷಾಂತರ ಮಹಿಳೆಯರ ಬದುಕಿನಲ್ಲಿ ಬದಲಾವಣೆ ತಂದಿರುವುದೇ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಾರ್ಥಕತೆ!.

ಅನ್ನಭಾಗ್ಯ, ಗೃಹ ಜ್ಯೋತಿ, ಯುವನಿಧಿ, ಶಕ್ತಿ ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ,ಶಿವಕುಮಾರ ಕುತ್ತಾಬಬಾದ್, ಸೇವದಳ್ ಅಧ್ಯಕ್ಷ ಮೋಹಿನ್ ಪಠಾಣ್, ಗ್ರಾಮ ಪಂಚಾಯತ್ ಸದಸ್ಯರಾದ, ಸಿಖಂದರ ಖಾನ, ಹೈದರ್ ಸಾಬ್, ಪ್ರಶಾಂತ ಕಟ್ಟಿಮನಿ

ಮುಖಂಡರಾದ ಖಾಸಿಂ ಸಾಬ್, ಲಾಲ್ ಅಹಮದ್, ವಾಜೀದ್ ಖಾನ್ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆ: ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ

ಕಲಬುರಗಿ:ಅ.06:–ಪ್ರತಿವರ್ಷದಂತೆ ಈ ವರ್ಷವೂ ಕೂಡ ಅಕ್ಟೋಬರ್ 7 ರಂದು ಮಂಗಳವಾರ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಗುತ್ತಿದ್ದು, ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಕಲಬುರಗಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ನಗರದ ಸರದಾರ ವಲ್ಲಭಭಾಯಿ ಪಟೇಲ್ ವೃತ್ತದಿಂದ ಡಾ. ಎಸ್.ಎಂ.ಪಂಡಿತ ರಂಗಮಂದಿರವರೆಗೆ ಮೆರವಣಿಗೆಯನ್ನು ಆಯೋಜಿಸಲಾಗುತ್ತದೆ. ಮಧ್ಯಾಹ್ನ 12.30 ಗಂಟೆಗೆ ಕಲಬುರಗಿ ಡಾ. ಎಸ್.ಎಂ.ಪಂಡಿತ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು, ಜಯಂತಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಲು ನುರಿತ ಉಪನ್ಯಾಸಕರರಾದ ಸುರಪೂರ ಪ್ರಭು ಮಹಾವಿದ್ಯಾಲಯದ ಉಪನ್ಯಾಸಕ ಡಾ.ಉಪೇಂದ್ರ ನಾಯಕ ಸುಬೇದಾರ್ ಅವರನ್ನು ಆಹ್ವಾನಿಸಲು ನಿರ್ಧರಿಸಲಾಯಿತು.

ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿ, ಸರ್ಕಾರಿ ಶಾಲಾ–ಕಾಲೇಜುಗಳಲ್ಲಿ ಹಾಗೂ ಅನುದಾನ, ಅನುದಾನ ರಹಿತ ಶಾಲಾ–ಕಾಲೇಜುಗಳಲ್ಲಿ ಕಡ್ಡಾಯವಾಗಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಬೇಕು. ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು ವ್ಯವಸ್ಥೆ ಹಾಗೂ ಸ್ವಚ್ಛತೆ ಕಾಪಾಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ಚಂದ್ರಶೇಖರ, ಕಲಬುರಗಿ ಜಿಲ್ಲಾ ವಾಲ್ಮೀಕಿ ನಾಯಕ ಸಂಘದ ಗೌರವಾಧ್ಯಕ್ಷ ಗುರುರಾಜ್ ಎಚ್. ಸುಬೇದಾರ್, ಸಮಾಜದ ಮುಖಂಡರಾದ ಯಲ್ಲಾಲಿಂಗ ಬಿರಾಳ, ಶ್ರವಣಕುಮಾರ್, ರಾಜು ಮಾವನೂರ್ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು, ಇತರ ಸಮಾಜಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಮಕ್ಕಳಿಗಾಗಿ ವಿವಿಧ ಸ್ಪರ್ಧೆ

ಬಾಗಲಕೋಟೆ,ಅ.6–ಮಹಾತ್ಮಾಗಾಂಧಿ ಜಯಂತಿ ಅಂಗವಾಗಿ ಜಿಲ್ಲಾ ಬಾಲಭವನದಲ್ಲಿ ಅಕ್ಟೋಬರ 9 ರಂದು 5 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಚಿತ್ರಕಲೆ, ಪ್ರಬಂಧ, ಲೇಖನ, ರಸಪ್ರಶ್ನೆ, ಹಾಗೂ ರಂಗೋಲಿ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

ಆಸಕ್ತ ಮಕ್ಕಳು ಅಕ್ಟೋಬರ 8 ರೊಳಗಾಗಿ ಹೆಸರು ನೊಂದಾಯಿಸಿಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿ ಹಾಗೂ ನೊಂದಣಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂ–ಖ್ಯೆ–209, ನವನಗರ ಬಾಗಲಕೋಟೆ ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಷೇರುದಾರರ ಕುಟುಂಬಕ್ಕೆ ಉಚಿತ ಒಪಿಡಿ




ಬೀದರ. ಅ. 06:ನಗರದ ಗುರುಪಾದಪ್ಪನಾಗಮಾರಪಳ್ಳಿ ಮಲ್ಟಿ ಸೂಪರ್ ಸ್ಪೆಷಾಲಿಟಿ ಸಹಕಾರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ವಾರ್ಷಿಕ ಮಹಾಸಭೆ ಇತ್ತೀಚೆಗೆ ನಡೆಯಿತು.

ಆಸ್ಪತ್ರೆ ಅಧ್ಯಕ್ಷ ತರುಣ್ ಸೂರ್ಯಕಾಂತ್ ನಾಗಮಾರಪಳ್ಳಿ ಮಾತನಾಡಿ, ಸಹಕಾರ ಕ್ಷೇತ್ರದ ಮೊದಲ ಆಸ್ಪತ್ರೆ ಇದಾಗಿದೆ.

ದಿವಂಗತ ಗುರುಪಾದಪ್ಪ ನಾಗಮಾರಪಳ್ಳಿ ಅವರು ಇದನ್ನು ಕಟ್ಟಿ ಬೆಳೆಸಿದ್ದು, ಅವರ ಆಶಯದಂತೆ ಮುನ್ನಡೆಸಿಕೊಂಡು ಹೋಗಲಾಗುತ್ತಿದೆ. ಆಸ್ಪತ್ರೆಯ ಷೇರುದಾರ ಕುಟುಂಬದ ಸದಸ್ಯರಿಗೆ ಪ್ರತಿ ತಿಂಗಳಲ್ಲಿ ಎರಡು ಭಾನುವಾರಗಳಂದು ಉಚಿತ ಒಪಿಡಿ ಸೇವೆ ಒದಗಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 350 ಹಾಸಿಗೆಯ ಆಸ್ಪತ್ರೆಯೊಂದಿಗೆ ಮೆಡಿಕಲ್ ಕಾಲೇಜ ಸ್ಥಾಪಿಸಬೇಕೆಂಬ ಕನಸು ಇಟ್ಟು-ಕೊಂಡು ಭಾಲ್ಕಿ ರಸ್ತೆಯ ಲಾಲಬಾಗ್ ಸಮೀಪ 70 ಎಕರೆ 18 ಗುಂಟೆ ಜಮೀನಿನ ಖರೀದಿಸಲಾಗಿದ್ದು, ಅದರ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುತ್ತಿದೆ ಎಂದರು.

ಷೇರುದಾರರಿಗೆ ಶೇ 10 ರಿಂದ 20ರ ವರಗೆ ರಿಯಾಯಿತಿ. ಹಿರಿಯ ನಾಗರಿಕರಿಗೆ ಶೇ 10 ರಿಯಾಯತಿ, ಆಡಳಿತ ಮಂಡಳಿ ಸದಸ್ಯರಿಗೆ ಶೇ 20ರಷ್ಟು ರಿಯಾಯಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ನಿರ್ದೇಶಕರಾದ ಸೂರ್ಯಕಾಂತ ನಾಗಮಾರಪಳ್ಳಿ, ಭೀಮರಾವ್ ಪಾಟೀಲ್, ಸಿದ್ರಾಮ ಡಿ.ಕೆ., ಡಾ. ಚಂದ್ರಕಾಂತ ಗುದಗೆ, ಡಾ.ವಿಜಯಕುಮಾರ ಕೋಟೆ,

ಡಾ. ರಜನೀಶ ವಾಲಿ, ರಾಜೇಶ್ವರ ನಿಟ್ಟೂರೆ, ಅಶೋಕ ರೇಜಂತಲ್, ರಾಮದಾಸ ಮುಖೇಡಕರ್, ಶಕುಂತಲಾ ಬೆಲ್ದಾಳೆ, ವಿಜಯಲಕ್ಷ್ಮೀ ರಾಜಕುಮಾರ ಹೂಗಾರ್, ಸಂತೋಷಕುಮಾರ ತಾಳಂಪಳ್ಳಿ, ಆಕಾಶ ವಿಜಯಕುಮಾರ ನಾಗಮಾರಪಳ್ಳಿ, ಸೈಯದ್ ಖಿಜರುಲ್ಲಾ ಹುಸೇನಿ, ರಾಚಪ್ಪ ಬಸವಣ್ಣಪ್ಪ ಪಾಟೀಲ್, ಸಂಜೀಕುಮಾರ ಸಿದ್ದಾಪುರ, ನರಸಾರೆಡ್ಡಿ ಗುಂಡುರೆಡ್ಡಿ, ಶಿವಕುಮಾರ ಕಾಶಿನಾಥ ಭಾಲ್ಕೆ, ಗೋವಿಂದ ವಿಶ್ವನಾಥ, ರಾಘವೇಂದ್ರ ಭಗವಾನರಾವ್, ಸಿಇಒ ಎನ್. ಕೃಷ್ಣಾರೆಡ್ಡಿ ಇದ್ದರು.

# ಶಿಕ್ಷಣ ಗುಣಮಟ್ಟ ಸುಧಾರಣೆಗೆ ಸೂಚನೆ



ಔರಾದ:ಅ.6:ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಇತ್ತೀಚೆಗೆ ಔರಾದ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಕಾಲೇಜು ಆವರಣದಲ್ಲಿ ಸಂಚರಿಸಿ ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ, ತರಗತಿ ಕೋಣೆಗಳನ್ನು ವೀಕ್ಷಿಸಿದರು. ಆವರಣದಲ್ಲಿ ಹುಲ್ಲು, ಕಸ-ಕಡ್ಡಿ ಬಿದ್ದಿರುವುದನ್ನು ಕಂಡು ಏಕೆ ಸ್ವಚ್ಛವಾಗಿಟ್ಟಿಲ್ಲವೆಂದು ಪ್ರಾಂಶುಪಾಲರಿಗೆ ಖಾರವಾಗಿ ಪ್ರಶ್ನಿಸಿದರು. ಮುಂದಿನ ಸಲ ಬಂದಾಗ ಸಂಪೂರ್ಣ ಕಾಲೇಜು ಸ್ವಚ್ಛವಾಗಿ ಕಾಣಬೇಕು. ಶೌಚಾಲಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ವಿದ್ಯಾರ್ಥಿಗಳಿಗೆ ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯಗಳ ಕೊರತೆಯಾಗದಂತೆ ವ್ಯವಸ್ಥೆ ಮಾಡಿಕೊಳ್ಳಬೇಕೆಂದು ಹೇಳಿದರು. ಇದೇ ವೇಳೆ ಕಾಲೇಜು ಅಭಿವೃದ್ಧಿ ಸಮಿತಿ ಸಭೆ ನಡೆಸಿ ಕಾಲೇಜು ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮಾಡಬೇಕಾದ ಕೆಲಸ-ಕಾರ್ಯಗಳ ಬಗ್ಗೆ ಪ್ರಾಂಶುಪಾಲರು ಮತ್ತು ಬೋಧಕ ಸಿಬ್ಬಂದಿಯೊಂದಿಗೆ ಸುದೀರ್ಘವಾಗಿ ಚರ್ಚಿಸಿದರು.

ಪ್ರಾಂಶುಪಾಲರ ಕೋಣೆಯಲ್ಲಿ ಕುರ್ಚಿ, ಟೇಬಲ್ ಮತ್ತಿತರೆ ಉಪಕರಣಗಳು ಹಳೆಯದಾಗಿರುವುದನ್ನು ಕಂಡು ಕಾಲೇಜು ಅಭಿವೃದ್ಧಿಗೆ ಇರುವ ಅನುದಾನ ಏಕೆ ಬಳಸುತ್ತಿಲ್ಲವೆಂದು ಬೇಸರ ಹೊರಹಾಕಿದರು. ಕಾಲೇಜಿಗೆ 30 ಲಕ್ಷ ಅನುದಾನ ನೀಡುತ್ತಿದ್ದು, ಕುರ್ಚಿ, ಟೇಬಲ್ ಸೇರಿದಂತೆ ಅವಶ್ಯಕ ಉಪಕರಣಗಳನ್ನು ತರಿಸಿಕೊಳ್ಳಿ ಎಂದು ಪ್ರಾಂಶುಪಾಲರಿಗೆ ನಿರ್ದೇಶನ ನೀಡಿದರು. ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು. ಎಲ್ಲ ಬೋಧಕ ಸಿಬ್ಬಂದಿ ಸರಿಯಾಗಿ ಕರ್ತವ್ಯ ನಿರ್ವಹಿಸಬೇಕು. ಪಾಠ್ಯ ಚಟುವಟಿಕೆಗಳ ಜೊತೆಗೆ ಕಾಲೇಜಿನ ಅಭಿವೃದ್ಧಿಯತ್ತ ಗಮನ ಹರಿಸಬೇಕು. ಆಕರ್ಷಕ ಪ್ರವೇಶದ್ವಾರ, ಕಂಪೌಂಡ್ ಗೋಡೆ, ಆಟದ ಮೈದಾನಗ ನಿರ್ಮಿಸಿ ಕಾಲೇಜು ಸುಂದರವಾಗಿ ಕಾಣುವಂತೆ ವ್ಯವಸ್ಥೆ ಮಾಡಲು ದಿಶೆಯಲ್ಲಿ ಪ್ರಸ್ತಾವನೆ ಸಲ್ಲಿಸಿ, ಹಂತ ಹಂತವಾಗಿ ಆದ್ಯತೆಯ ಮೇಲೆ ಎಲ್ಲವನ್ನು ಒದಗಿಸುವುದಾಗಿ ಭರವಸೆ ನೀಡಿದರು.

ಕಾಲೇಜು ಆವರಣದಲ್ಲಿ ಕೆಲವು ಹೊಸ ಕಟ್ಟಡಗಳನ್ನು ನಿರ್ಮಿಸಲಾಗಿದೆ. ಎಲ್ಲ ಕಟ್ಟಡಗಳಿಗೆ ಹೋಗಿ ಬರಲು ಅನುಕೂಲವಾಗುವಂತೆ ಕಾಲೇಜು ಆವರಣದಲ್ಲಿ ಹೊಸ ಸಿಸಿ ರಸ್ತೆಗಳನ್ನು ನಿರ್ಮಿಸಿಕೊಡಬೇಕೆಂದು ಪ್ರಾಂಶುಪಾಲರು ಮನವಿ ಮಾಡಿದರು. ಇದ-ಕ್ಕೆ ಸ್ಪಂದಿಸಿದ ಶಾಸಕರು ಅಗತ್ಯ ಅನುದಾನ ಕೊಡುವುದಾಗಿ ಭರವಸೆ ನೀಡಿದರು.

**ಅಧಿಕಾರಿಗೆ ತರಾಟೆ:**

ಹಿಂದಿನ ಸಭೆಯಲ್ಲಿ ಹೊಸ ಬೋರ್‌ವೆಲ್ ಕೊರೆಸಿ ವಿದ್ಯಾರ್ಥಿಗಳಿಗೆ ನೀರಿನ ಸಮಸ್ಯೆ ಪರಿಹರಿಸಿಕೊಡುವಂತೆ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗೆ ಶಾಸಕರು ನಿರ್ದಶನ ನೀಡಿದ್ದರು. ಕಾಮಗಾರಿ ಅನುಮೋದನೆಗೊಂಡು ಒಂದು ವರ್ಷವಾದರೂ ಇಂದಿಗೂ ನೀರಿನ ಸಮಸ್ಯೆ ಇತ್ಯರ್ಥ ಮಾಡದಿರುವುದಕ್ಕೆ ಅಧಿಕಾರಿಯ ವಿರುದ್ಧ ಆಕ್ರೋಶ ಹೊರಹಾಕಿದರು. ತುರ್ತಾಗಿ ಬೋರ್‌ವೆಲ್ ಕೊರೆಸಿ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ಅನುಕೂಲ ಮಾಡಿಕೊಡಬೇಕೆಂದು ಕಟ್ಟುನಿಟ್ಟಾಗಿ ಸೂಚಿಸಿದರು.

**ಸಿಟಿ ಬಸ್ ಒದಗಿಸಿ:**

ಪದವಿ ಕಾಲೇಜಿನಲ್ಲಿ ಸುಮಾರು 600ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಕಾಲೇಜು ದೂರವಿರುವುದರಿಂದ ವಿದ್ಯಾರ್ಥಿಗಳು ಪ್ರತಿದಿನ ಕಾಲೇಜಿಗೆ ಬಂದು ಹೋಗಲು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಪದವಿ ಕಾಲೇಜು, ಡಿಪ್ಲೋಮಾ, ಐಟಿಐ ಒಳಗೊಂಡಂತೆ ಎಲ್ಲ ಶಾಲಾ ಕಾಲೇಜುಗಳಿಗೆ ಹೋಗಲು ಅನುಕೂಲವಾಗುವಂತೆ ಪಟ್ಟಣದಲ್ಲಿ ಒಂದು ರೂಟ್ ಸಿದ್ದಪಡಿಸಿ ಸಿಟಿ ಬಸ್ ಓಡಿಸಲು ವ್ಯವಸ್ಥೆ ಮಾಡುವಂತೆ ಸಭೆಯಲ್ಲಿ ಬಸ್ ಡಿಪೋ ವ್ಯವಸ್ಥಾಪಕರಿಗೆ ಸೂಚಿಸಿದರು. ಇದೇ ವೇಳೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಪಟ್ಟಣ ದೊಡ್ಡದಾಗಿದ್ದು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಅನುಕೂಲಕ್ಕಾಗಿ ಸಿಟಿ ಬಸ್ ಓಡಿಸಲು ವ್ಯವಸ್ಥೆ ಮಾಡುವಂತೆ ನಿರ್ದೇಶನ ನೀಡಿದರು. ಪ್ರಾಂಶುಪಾಲರಾದ ಅಂಬಿಕಾ ಕೊತಮೀರ್ ಸೇರಿದಂತೆ ಎಲ್ಲ ಉಪನ್ಯಾಸಕರು ಮತ್ತು ಬೋಧ-ಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ಬಹುಜನರು ಜಾಗೃತರಾಗಿ ಹೋರಾಡಬೇಕಿದೆ



ಬೀದರ. ಅ. 06: ಔರಾದ್ 'ದೇಶದ ದಲಿತರು, ಅಲ್ಪಸಂಖ್ಯಾತರು, ಹಿಂದುಳಿದವರು ಜಾಗೃತರಾದರೆ ಮಾತ್ರ ನಾವು ಸಂವಿಧಾನದತ್ತವಾಗಿ ಸಿಗುವ ಸೌಲಭ್ಯ ಪಡೆಯಲು ಸಾಧ್ಯ' ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಅರವಿಂದಕುಮಾರ ಅರಳಿ ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ ಬಹುಜನ ಜನಸಂಪರ್ಕ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು.

ಡಾ.ಅಂಬೇಡ್ಕರ್ ಅವರು ನಮಗೆ ಸಂವಿಧಾನದ ಮೂಲಕ ಎಲ್ಲವೂ ಕೊಟ್ಟಿದ್ದಾರೆ. ಅದನ್ನು ನಾವು ಪಡೆಯಲು ಗಟ್ಟಿ ಧ್ವನಿ ಬೇಕು. ಅಂತಹ ಧ್ವನಿ ಒಗ್ಗೂಡಿಸಲು ಜನಸಂಪರ್ಕ ಕಚೇರಿ ತೆರೆದಿದ್ದು ಸಂತೋಷಸಂಗತಿ. ಇಂತಹ ಸಂಘಟನೆ ರಾಜಕೀಯ ರಹಿತವಾಗಿದ್ದರೆ ಮಾತ್ರ ಬಹುದಿನ ಬಾಳಲು ಸಾಧ್ಯ' ಎಂದು ಸಲಹೆ ನೀಡಿದರು.

ಮುಜೀಬ್ ಮಾತನಾಡಿ, 'ಭಾರತದಲ್ಲಿ ಸಂವಿಧಾನ ಶ್ರೇಷ್ಠ. ಈ ಮೂಲಕ ಅಧಿಕಾರ ಪಡೆದ ಕೆಲವರು ವಿರೋಧ ಮಾಡುತ್ತಾರೆ. ಈ ದೇಶದಲ್ಲಿ ಸಂವಿಧಾನ ಇರುವವರೆಗೆ ನಾವು ಹೆದರುವ ಅಗತ್ಯವಿಲ್ಲ' ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಹೋರಾಟಗಾರ ರಾಹುಲ್ ಖಂದಾರೆ ಮಾತನಾಡಿ, 'ಔರಾದ್ ಮೀಸಲು ಕ್ಷೇತ್ರವಾದರೂ ಇಲ್ಲಿಯ ಬಹುಜನರು ಸೌಲಭ್ಯಕ್ಕಾಗಿ ಹೋರಾಡಬೇಕಿದೆ. ಅವರಲ್ಲಿ ಜಾಗೃತಿ ಮೂಡಿಸಲು ಜನಸಂಪರ್ಕ ಕಚೇರಿ ತೆರೆಯಲಾಗಿದೆ' ಎಂದು ಹೇಳಿದರು.

ಟಿಪ್ಪು ಕ್ರಾಂತಿ ಸೇನೆ ಸಂಸ್ಥಾಪಕ ದಸ್ತಗೀರ, ಪ್ರಾಂಶುಪಾಲ ಮನ್ಮತ ಡೋಳೆ, ಪತ್ರಕರ್ತ ಬಾಲಾಜಿ ಕುಂಬಾರ ಮತ್ತಿತರರು ತಮ್ಮ ವಿಚಾರ ಮಂಡಿಸಿದರು.

ಮುಖಂಡ ರಾಜಕುಮಾರ ಸಿಂಧೆ, ಶಿವಮೂರ್ತಿ ಸುಬಾನೆ, ಬಿಎಸ್‌ಪಿ ಮುಖಂಡ ಕಪಿಲ್ ಗೋಡಬೋಲೆ, ನಗರಸಭೆ ಸದಸ್ಯ ಸೂರ್ಯಕಾಂತ ಸಾದುರೆ, ಭೀಮ ಆರ್ಮಿ ಜಿಲ್ಲಾಧ್ಯಕ್ಷ ಅಂಬ್ರೇಶ್ ಕುದ್ರೆ, ಫಿರ್ದೋಸ್ ಪಟೇಲ್, ಗಣಪತರಾವ ವಾಸುದೇವ, ಸುಭಾಷ ಲಾಧಾ, ತುಕಾರಾಮ ಹಸನ್ಮುಖಿ, ನವನಾಥ ಚಟ್ನಾಳ, ಪ್ರವೀಣ ಕಾರಂಜೆ, ಯಶವಂತ ಕಾಂಬಳೆ, ಸಿದ್ಧಾರ್ಥ ಭೋಸ್ಲೆ, ಸುಂದರ ಮೇತ್ರೆ ಮತ್ತಿತರರು ಹಾಜರಿದ್ದರು.

# ಅ.8 ರಂದು ಕಲಾಪಯಣ ಮುನ್ನುಡಿ ಉದ್ಘಾಟನೆ

ಬೀದರ, ಅ.06: ಸಾಮಾಜಿಕ ಉದ್ದೇಶಗಳನ್ನು ಪೂರೈಸುವ ನಿರಂತರ ಮತ್ತು ನಿರಂತರ ಪ್ರಯತ್ನಗಳ ಭಾಗವಾಗಿ ಬೀದರನ ಗುರುನಾನಕ್‌ದೇವ್ ಎಂಜಿನಿಯರಿಂಗ್ ಕಾಲೇಜು ಉಓಎಇಖಃಖ ಫೌಂಡೇಶನ್ ಆಶ್ರಯದಲ್ಲಿ ತನ್ನ ಕ್ಯಾಂಪಸ್‌ನಲ್ಲಿ ಅತ್ಯಾಧುನಿಕ "ಗುರುನಾನಕ ಬಿದ್ರಿ ಕಲೆ ಮತ್ತು ಕೌಶಲ್ಯ ಅಭಿವೃದ್ಧಿ ಕೇಂದ್ರ"ವನ್ನು ಸ್ಥಾಪಿಸಿ ಕಲಾಪಯಣದ ಮುನ್ನುಡಿಯನ್ನು ಅಕ್ಟೋಬರ್.8 ರಂದು ಬೀದರನ ಉಓಎಇಖಃಖ ಕ್ಯಾಂಪಸ್‌ನ ಗುರುಭವನದಲ್ಲಿ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಈ ಉದ್ಘಾಟನಾ ಸಮಾರಂಭದಲ್ಲಿ ಬೀದರನ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಸರ್ಕಾರಿ ನಿವೃತ್ತಿ ಐಎಎಸ್ ಜೈರಾಜ್, ಮಾಜಿ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಾ.ಎಸ್. ಬಲ್ಬೀರ್ ಸಿಂಗ್ ಮತ್ತು ಸಂಸ್ಥೆಗಳ ಸಮೂಹದ ಉಪಾಧ್ಯಕ್ಷೆ ಡಾ. ರೇಷಾ?? ಕೌರ್ ಪೊ?ಷಕರಾಗಿ ಹಾಗೂ ಜಿಎನ್‌ಡಿಇಸಿಯ ಎಲ್ಲಾ ಆಡಳಿತ ಮಂಡಳಿ ಸದಸ್ಯರು ಸಹ ಕಾರ್ಯಕ್ರಮದ ಭಾಗವಾಗಿರುತ್ತಾರೆ.

ಭಾರತದ ಅತ್ಯಂತ ಪ್ರಾಚೀನ ಕಲೆಗಳಲ್ಲಿ ಒಂದಾದ ಬಿದ್ರಿ ಕರಕುಶಲ ಕಲೆಯ ಪರಂಪರೆಯನ್ನು ರಕ್ಷಿಸುವುದು ಮತ್ತು ಉಳಿಸಿಕೊಳ್ಳುವುದು ಈ ಶಾಲೆಯ ಉದ್ದೇಶವಾಗಿದೆ. ಈ ಕರಕುಶಲ ಕಲೆಯಲ್ಲಿ ಆಸಕ್ತಿ ಹೊಂದಿರುವವರಿಗೆ ಬಿದ್ರಿ ಕರಕುಶಲ ಕಲೆಯ ಕೌಶಲ್ಯವನ್ನು ಕಲಿಸುವುದು ಈ ಶಾಲೆಯ ಉದ್ದೇಶವಾಗಿದೆ. ಇದರಿಂದಾಗಿ ಕಲೆಯಲ್ಲಿ ಕೌಶಲ್ಯ ಹೊಂದಿರುವ ಜನರ ಸಂಖ್ಯೆ ನಿರಂತರವಾಗಿ ಕ್ಷೀಣಿಸುತ್ತಿದೆ. ಅಲ್ಲದೆ, ಸ್ಥಳೀಯ ಕುಶಲಕರ್ಮಿಗಳು ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಮೂಲಕ ತಮ್ಮ ಕೌಶಲ್ಯವನ್ನು ಪ್ರದರ್ಶಿಸಲು ಒಂದು ವೇದಿಕೆಯನ್ನು ಪಡೆಯಲಿದ್ದಾರೆ. ಶಾಲೆಯ ಅತ್ಯಾಧುನಿಕ ಸೌಲಭ್ಯಗಳು ಕುಶಲಕರ್ಮಿಗಳು ಇಲ್ಲಿಯವರೆಗೆ ಕೇವಲ ಕಲ್ಪನೆಗಳಾಗಿದ್ದ ತಮ್ಮ ವಿನ್ಯಾಸಗಳನ್ನು ಜೀವಂತಗೊಳಿಸಲು ಸಹಾಯ ಮಾಡುತ್ತವೆ, ಹೀಗಾಗಿ ಕಲಾಕೃತಿಗಳ ವೈವಿಧ್ಯತೆಯನ್ನು ವಿಸ್ತರಿಸುತ್ತವೆ. ಜಿಎನ್‌ಡಿಇಸಿಯ ಪ್ರಾಂಶುಪಾಲರಾದ ಡಾ. ವೀಣಾ ಸೊರಗನ್ವಿ, ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆ ಮುಂತಾದ ಹೊಸ ಮತ್ತು ಉದಯೋನ್ಮುಖ ತಂತ್ರಜ್ಞಾನಗಳನ್ನು ಕಲಾಕೃತಿಗಳನ್ನು ತಯಾರಿಸುವ ಪ್ರಕ್ರಿಯೆಯಲ್ಲಿ ಸಂಯೋಜಿಸಲಾಗುವುದು, ಇದರಿಂದಾಗಿ ಉತ್ಪಾದನೆಯ ವೇಗ ಹೆಚ್ಚಾಗುತ್ತದೆ ಮತ್ತು ವಿನ್ಯಾಸ ಕಾರ್ಯವಿಧಾನಗಳಲ್ಲಿ ಹೊಸ ಸಾಧ್ಯತೆಗಳನ್ನು ತೆರೆಯಲಾಗುತ್ತದೆ ಇದು ಅತ್ಯಂತ ಶ್ರೇಷ್ಠ ಕಲೆಗಳಲ್ಲಿ ಒಂದನ್ನು ಅದರ ಶಾಸ್ತ್ರೀಯ ಪ್ರಾಚೀನತೆಗೆ ಅನುಗುಣವಾಗಿ ಜಾಗತಿಕ ಭೂಪಟಕ್ಕೆ ತರುವ ಪ್ರಯತ್ನವಾಗಿದೆ ಎಂದು ತಿಳಿಸಿದ್ದಾರೆ.

# ಮಣ್ಣು, ತೇವಾಂಶ ಸಂರಕ್ಷಣೆಗೆ ನರೇಗಾ ಸಹಕಾರಿ



ಬೀದರ. ಅ. 06: ಬೀದರ್ ತಾಲ್ಲೂಕಿನ ಕಮಠಾಣ ಅರಣ್ಯ ಪ್ರದೇಶದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಿಸಲಾಗಿರುವ ಇಂಗು ಗುಂಡಿಗಳು, ಮಣ್ಣು ಹಾಗೂ ತೇವಾಂಶ ಸಂರಕ್ಷಣೆಗೆ ಸಹಕಾರಿಯಾಗಿವೆ.

ಮಳೆಯ ಕಾರಣ ಇಂಗು ಗುಂಡಿಗಳಲ್ಲಿ ನೀರು ತುಂಬಿಕೊಂಡಿದ್ದು, ಅವುಗಳ ಅಕ್ಕ ಪಕ್ಕದಲ್ಲಿ ನೆಡಲಾದ ಸಸಿಗಳು ಹಸಿರಿನಿಂದ ನಳ ನಳಿಸುತ್ತಿವೆ.

ಅರಣ್ಯದಲ್ಲಿ ನರೇಗಾ ಯೋಜನೆ ಅಡಿಯಲ್ಲಿ 4 ಮೀ. ಉದ್ದ, ಅರ್ಧ ಮೀಟರ್ ಅಗಲ ಹಾಗೂ ಅರ್ಧ ಮೀಟರ್ ಆಳದ ಇಂಗು ಗುಂಡಿಗಳನ್ನು ನಿರ್ಮಿಸಲಾಗಿದೆ. ಪ್ರತಿ ಇಂಗು ಗುಂಡಿಯು 1 ಸಾವಿರ ಲೀಟರ್ ನೀರು ಸಂಗ್ರಹ ಸಾಮರ್ಥ್ಯ ಹೊಂದಿದೆ. 2025-26ನೇ ಸಾಲಿನ ನರೇಗಾ ಯೋಜನೆ ನೆರವಿನಿಂದ ಕಮಠಾಣ ಅರಣ್ಯ ಪ್ರದೇಶದಲ್ಲಿ ಒಂದು ಸಾವಿರ ಇಂಗು ಗುಂಡಿಗಳನ್ನು ಅಗೆಯಲಾಗಿದೆ. 6 ಸಾವಿರ ಸಸಿಗಳನ್ನು ನೆಡಲಾಗಿದೆ ಎಂದು ತಿಳಿಸುತ್ತಾರೆ ಬೀದರ್ ಸಾಮಾಜಿಕ ವಲಯ ಅರಣ್ಯ ಅಧಿಕಾರಿ ಶಿವಕುಮಾರ ರಾಠೋಡ್. ನರೇಗಾ ಯೋಜನೆಯಡಿ ಒಟ್ಟು 1,600 ಇಂಗು ಗುಂಡಿಗಳನ್ನು ನಿರ್ಮಿಸುವ ಗುರಿಯಿದೆ. ಈಗಾಗಲೇ ಅಗೆಯಲಾದ ಇಂಗು ಗುಂಡಿಗಳಲ್ಲಿ ನೀರು ಸಂಗ್ರಹವಾಗಿದೆ. ಇದರಿಂದ ಅರಣ್ಯ ಪ್ರದೇಶದಲ್ಲಿ ಮಣ್ಣು, ತೇವಾಂಶ ಸಂರಕ್ಷಣೆ ಜತೆಗೆ ಅಂತರ್ಜಲ ವೃದ್ಧಿಸಿದೆ. ಮರಗಳು ಸಮೃದ್ಧವಾಗಿ ಬೆಳೆಯಲು ಅನುಕೂಲವಾಗಿದೆ ಎಂದು ಹೇಳಿಸಿದ್ದಾರೆ. ಅಕ್ಟೋಬರ್‌ನಲ್ಲಿ ಇನ್ನೂ 600 ಇಂಗು ಗುಂಡಿಗಳನ್ನು ನಿರ್ಮಿಸಲಾಗುವುದು. ಯೋಜನೆಯಡಿ 1,600 ಕಂದಕ ನಿರ್ಮಾಣ ಹಾಗೂ ಸಸಿ ನೆಡುವಿಕೆಗೆ ? 9.88 ಲಕ್ಷ ವೆಚ್ಚವಾಗಲಿದೆ ಎಂದು ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಮಳೆ ಹಾನಿ: ಜನತಾ ಬ್ಯಾಂಕ್‌ನಿಂದ ಜಿಲ್ಲಾಡಳಿತಕ್ಕೆ ರೂ. 5 ಲಕ್ಷ ದೇಣಿಗೆ



ಬೀದರ.ಅ.06:ಜಿಲ್ಲೆಯಲ್ಲಿ ಭಾರಿ ಮಳೆ ಹಾಗೂ ಪ್ರವಾಹದಿಂದ ಆದ ಹಾನಿಯ ಪರಿಹಾರ ಕಾರ್ಯಕ್ಕಾಗಿ ಧಾರಾಶಿವ(ಉಸ್ಮಾನಾಬಾದ್)ದ ಜನತಾ ಸಹಕಾರಿ ಬ್ಯಾಂಕ್ ನಿಯಮಿತವು ಜಿಲ್ಲಾಡಳಿತಕ್ಕೆ ರೂ. 5 ಲಕ್ಷ ದೇಣಿಗೆ ನೀಡಿದೆ.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಬ್ಯಾಂಕ್ ಅಧ್ಯಕ್ಷ ವಸಂತರಾವ್ ನಾಗದೆ ಅವರು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ದೇಣಿಗೆಯ ಚೆಕ್ ಹಸ್ತಾಂತರಿಸಿದರು.

ಬೀದರ್ ಜಿಲ್ಲೆಯಲ್ಲಿ ಮಳೆ ಹಾಗೂ ಪ್ರವಾಹದಿಂದ ಬೆಳೆ, ಮನೆ, ಜನ, ಜಾನುವಾರಿಗೆ ಹಾನಿ ಉಂಟಾಗಿದೆ. ಹೀಗಾಗಿ ಸಾಮಾಜಿಕ ಹೊಣೆಗಾರಿಕೆ ಭಾಗವಾಗಿ ಬ್ಯಾಂಕ್‌ನಿಂದ ಜಿಲ್ಲಾಡಳಿತಕ್ಕೆ ದೇಣಿಗೆ ಕೊಡಲಾಗಿದೆ ಎಂದು ಅವರು ತಿಳಿಸಿದರು. ಬ್ಯಾಂಕ್‌ನಿಂದ ಮಳೆ ಹಾಗೂ ಪ್ರವಾಹದಿಂದ ಹಾನಿಗೊಳಗಾದ ಧಾರಾಶಿವ ಜಿಲ್ಲೆಗೆ ರೂ. 10 ಲಕ್ಷ, ಲಾತೂರು, ಬೀಡ್ ಹಾಗೂ ಸೋಲಾಪುರ ಜಿಲ್ಲೆಗೆ ತಲಾ ರೂ. 5 ಲಕ್ಷ ದೇಣಿಗೆ ನೀಡಲಾಗಿದೆ ಎಂದು ಹೇಳಿದರು. ಬ್ಯಾಂಕ್ ನಿರ್ದೇಶಕರಾದ ನಂದಕುಮಾರ ನಾಗದೆ, ಪ್ರದೀಪ್ ಪಾಟೀಲ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಾಬುರಾವ್ ಕಾರಬಾರಿ, ಮರಾಠಾ ಕ್ರಾಂತಿ ಮುಖ ಮೋರ್ಚಾ ಜಿಲ್ಲಾ ಸಂಯೋಜಕ ವೆಂಕಟರಾವ್ ಮಾಯಿಂದೆ, ಸುಶಾಂತ್ ಪವಾರ್, ಮರಗನೆ ಗುರೂಜಿ, ರೋಹಿತ್ ಮಾಯಿಂದೆ, ಅಶೋಕ್ ಜಾಧವ್ ಮತ್ತಿತರರು ಇದ್ದರು.

# ಇಂದು ಸಚಿವ ರಹೀಂ ಖಾನ್ ಬೀದರಗೆ

ಬೀದರ, ಅ.06 : ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಅಕ್ಟೋಬರ್.7 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅಂದು ಅವರು ಬೆಳಿಗ್ಗೆ 8 ರಿಂದ ಬೀದರ ಜಿಲ್ಲೆಯಲ್ಲಿ ನಿಗಧಿಪಡಿಸಿದ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ನಂತರ ಮಧ್ಯಾಹ್ನ 1.30ಕ್ಕೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿರುವ ಶ್ರೀ ಮಹರ್ಷಿ ವಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಕಟ್ಟುವಲ್ಲಿ ಗಡಿಜನರ ಸಹಕಾರ ಮುಖ್ಯ: ಸಾಹಿತಿ ಮಾಣಿಕ ನೇಳಗೆ




ಬೀದರ. ಅ. 06:ಔರಾದ್ 'ಗಡಿಯಲ್ಲಿ ಕನ್ನಡ ಉಳಿಸಿ, ಬೆಳೆಸಲು ಎಲ್ಲರ ಸಹಕಾರ ಅಗತ್ಯ' ಎಂದು ಹಿರಿಯ ಸಾಹಿತಿ ಮಾಣಿಕ ನೇಳಗೆ ಹೇಳಿದರು. ಪಟ್ಟಣದ ಕನ್ನಡ ಭವನದಲ್ಲಿ ಶನಿವಾರ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ದಸರಾ ಕವಿಗೋಷ್ಠಿ ಹಾಗೂ ಸಾಧಕರ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, 'ಔರಾದ್ ತಾಲ್ಲೂಕು ಮೂರು ರಾಜ್ಯಗಳ ಗಡಿಗೆ ಹೊಂದಿಕೊಂಡಿದೆ.

ಆದರೆ ಇಲ್ಲಿ ಕನ್ನಡಕ್ಕೆ ಎಂದೂ ಕುತ್ತು ಬಂದಿಲ್ಲ. ಬದಲಿಗೆ ಅನ್ಯ ಭಾಷಿಕರು ಇಲ್ಲಿ ಕನ್ನಡ ಕಟ್ಟಲು ನಮ್ಮ ಜತೆ ಕೈಜೋಡಿಸಿದ್ದಾರೆ. ಅವರೂ ಕನ್ನಡ ಕಲಿಯುತ್ತಿದ್ದಾರೆ. ತಮ್ಮ ಮಕ್ಕಳನ್ನು ಕನ್ನಡ ಶಾಲೆಗಳಿಗೆ ಸೇರಿಸುತ್ತಿದ್ದಾರೆ' ಎಂದು ಹೇಳಿದರು.

'ಕನ್ನಡದ ಆದಿಕವಿ ಪಂಪ, ಪೊನ್ನ, ರನ್ನ ಸೇರಿದಂತೆ ಅನೇಕ ಕವಿಗಳು ಕಾವ್ಯಧರ್ಮವನ್ನು ಮರೆತವರಿಲ್ಲ. ಅವರ ವಿಚಾರಗಳು ಇಂದಿಗೂ ಜನರನ್ನು ಆಕರ್ಷಿಸುವಲ್ಲಿ ಮಹತ್ತರ ಸ್ಥಾನ ಪಡೆದಿವೆ. ಬಳಿಕ ವಚನಕಾರರು, ಕೀರ್ತನಕಾರರು, ದಲಿತಕವಿಗಳು, ಬಂಡಾಯ ಸಾಹಿತಿಗಳು ಸ್ವಾತಂತ್ರ್ಯ ವಿಚಾರಗಳು ವ್ಯಕ್ತಪಡಿಸಿದ್ದು ವಿಶಿಷ್ಟವಾಗಿದೆ' ಎಂದು ಹೇಳಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ ಮಾತನಾಡಿ, 'ಪ್ರಸ್ತುತ ಜನಮಾನಸದಲ್ಲಿ ಆಂಗ್ಲ ವ್ಯಾಮೋಹ ಹೆಚ್ಚಾಗಿದ್ದು ಮೌಲ್ಯಗಳ ಅಧಃಪತನ ಶುರುವಾಗಿದೆ. ನಾವುಗಳು ಪುನಃ ಕನ್ನಡದ ಕಡೆಗೆ ಮುಖ ಮಾಡುವ ದಿನಗಳು ದೂರವಿಲ್ಲ' ಎಂದು ತಿಳಿಸಿದರು. ಪ್ರಕಾಶ ದೇಶಮುಖ, ಸೂರ್ಯಕಾಂತ, ಪಂಡರಿ ಆಡೆ, ಕಸಾಪ ಅಧ್ಯಕ್ಷ ಬಾಲಾಜಿ ಅಮರವಾಡಿ ಮಾತನಾಡಿದರು. ಶಿವಾನಂದ ಸ್ವಾಮಿ, ಎಂಡಿ ನಯೀಮ್, ರಂಜೀತ ಸಿಂಧೆ, ರಮೇಶ ಪಾಂಚಾಳ, ಸವಿತಾ ಮೀಸೆ, ಶಿಲ್ಪಾ ರಾಜೋಳೆ, ನಾಗೇಂದ್ರ ಚಿಟಗಿರೆ, ಪ್ರಕಾಶ ಬರ್ದಾಪೂರೆ, ವಿರೇಶ ಅಲಮಾಜೆ ಕವನ ವಾಚನ ಮಾಡಿದರು. ಸಾಧಕರಿಗೆ ಸನ್ಮಾನ: ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ದತ್ತಾತ್ರಿ ಗಿರಿ, ಮಹಾದೇವ ಭಾಲೇಕರ್, ಸಂಜೀವ ಬಿರಾದಾರ್, ಗುಣವಂತ ಬಿರಾದಾರ್, ಕೈಲಾಸಪತಿ ಕೇದಾರೆ ರಾಜ್ಯ ಮಟ್ಟದ ಶಿಕ್ಷಣರತ್ನ ಪ್ರಶಸ್ತಿ ಪುರಸ್ಕೃತ ರವೀಂದ್ರ ಡಿಗ್ಗಿ, ಪೀರಪ್ಪ ಉಜನೀಕರ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಮರ ಸ್ವಾಮಿ, ಜಗನ್ನಾಥ ಮೂಲಗೆ, ಸಂದೀಪ ಪಾಟೀಲ್, ಅಂಬಾದಾಸ ನಳಗೆ, ಗೋವಿಂದ ಪಾಟೀಲ್, ಮಹಾದೇವ ಘುಳೆ, ಗಜಾನನ ಮಳ್ಳಾ, ಅಶೋಕ ಅಲ್ಮಾಜೆ ಹಾಜರಿದ್ದರು.

# ಮಲ್ಲಣ್ಣದೇವರ ಪಲ್ಲಕ್ಕಿ ಅದ್ದೂರಿ ಉತ್ಸವ



ಬೀದರ. ಅ. 06: ಭಾಲ್ಕಿ ತಾಲ್ಲೂಕಿನ ಮೈಲಾರ ಗ್ರಾಮದಲ್ಲಿ ವಿಜಯದಶಮಿ ನಿಮಿತ್ತ ಮಲ್ಲಣ್ಣ ದೇವರ ಪಲ್ಲಕ್ಕಿ ಮೆರವಣಿಗೆ ಸಂಭ್ರಮದಿಂದ ಜರುಗಿತು.

ಮಲ್ಲಣ್ಣ ದೇಗುಲದಲ್ಲಿ ಗುರುವಾರ ರಾತ್ರಿ 11 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಮಲ್ಲಣ್ಣ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಆರತಿ ಬೆಳಗಿ ಪಲ್ಲಕ್ಕಿ ಮೆರವಣಿಗೆ, ರಥೋತ್ಸವಕ್ಕೆ ಚಾಲನೆ ನೀಡಿದರು.

ಪಲ್ಲಕ್ಕಿ ಮೆರವಣಿಗೆ ಘೃತಮಾರಿ ತುಪ್ಪದ ಮಾಳವ್ವ(ಗುರುತ ಮಲ್ಲಮ್ಮ) ದೇವಸ್ಥಾನ, ಮುಖ್ಯ ಬೀದಿ, ಬೀದರ್-ಭಾಲ್ಕಿ ಮುಖ್ಯ ರಸ್ತೆ ಮೂಲಕ ಹಾದು ಹನುಮಾನ ದೇವಸ್ಥಾನ ತಲುಪಿತು. ಮೆರವಣಿಗೆಯುದ್ದಕ್ಕೂ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ದೇವಸ್ಥಾನದ ವಗ್ಗೆಯರು, ವಾರುಗಳು, ಭಕ್ತರು ಕುಣಿದು ಸಂಭ್ರಮಿಸಿದರು.

ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಮಹಾ ಮಂಗಳಾರತಿಯೊಂದಿಗೆ ಉತ್ಸವ ಸಮಾರೋಪಗೊಂಡಿತು.

ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪೂರ, ರಾಜಶೇಖರ ಪಾಟೀಲ, ಮೀನುಗಾರಿಕೆ ನಿಗಮ ಮಂಡಳಿ ಅಧ್ಯಕ್ಷೆ ಮಾಲಾ ಬಿ. ನಾರಾಯಣರಾವ, ವಿಧಾನ ಪರಿಷತ್ ಮಾಜಿ ಸದಸ್ಯ ಅರವಿಂದಕುಮಾರ ಅರಳಿ, ಬಿಡಿಎ ಮಾಜಿ ಅಧ್ಯಕ್ಷ ಪಂಡಿತ ಚಿದ್ರಿ, ಹಾಲು ಒಕ್ಕೂಟದ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ, ದೇವಸ್ಥಾನದ ಆಡಳಿತಾಧಿಕಾರಿ, ಬಸವಕಲ್ಯಾಣ ಉಪವಿಭಾಗಾಧಿಕಾರಿ ಮುಕುಲ್ ಜೈನ್, ಕಾರ್ಯನಿರ್ವಾಹಣಾಧಿಕಾರಿ ಅನಂತರಾವ್ ಕುಲಕರ್ಣಿ, ವ್ಯವಸ್ಥಾಪಕ ಸಂಜೀವಕುಮಾರ ಸುಂಧಾಳ, ಮಾರುತಿ ಪಾಟೀಲ, ರಾಜಕುಮಾರ ಪಾಟೀಲ, ಪ್ರಧಾನ ಅರ್ಚಕ ಬಸಪ್ಪ ಹಿರಿವಗ್ಗೆ, ಮಲ್ಲಿಕಾರ್ಜುನ ಹಿರಿವಗ್ಗೆ, ಪ್ರಕಾಶ ಹಿರಿವಗ್ಗೆ, ಆಕಾಶ ಹಿರಿವಗ್ಗೆ,

# ಪರಿಸರ ವಾಹಿನಿ ವಾಹನಗಳಿಗೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 06:ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಹೊಸ 68 ಪರಿಸರ ವಾಹಿನಿ ವಾಹನಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.

ಇಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ವಿಧಾನಸೌಧ ಭವ್ಯ ಮೆಟ್ಟಿಲುಗಳ ಮುಂಭಾಗ ಹಮ್ಮಿಕೊಳ್ಳಲಾದ ಸಮಾರಂಭದಲ್ಲಿ ಮುಖ್ಯಮಂತ್ರಿಗಳು ಹೊಸ ಪರಿಸರ ವಾಹಿನಿ ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು 7,67,25,498/– ರೂ ವೆಚ್ಚದಲ್ಲಿ ಒಟ್ಟು 68 ವಾಹನಗಳನ್ನು ಖರೀದಿಸಿದ್ದು, ಈ ವಾಹನಗಳನ್ನು ರಾಜ್ಯದ್ಯಾದಂತ ಇರುವ ಮಂಡಳಿಯ ಪ್ರಾದೇಶಿಕ ಕಛೇರಿ ಮತ್ತು ವಲಯ ಕಛೇರಿಗಳಿಗೆ ಹಂಚಿಕೆ ಮಾಡಲು ಉದ್ದೇಶಿಸಿದೆ.

ಮೆ. ಮಹೇಂದ್ರ & ಮಹೇಂದ್ರ ಸಂಸ್ಥೆಯಿಂದ 48 ಸಂಖ್ಯೆಯ ಬುಲೇರೋ ನಿಯೋ ಎನ್ 4 ಮತ್ತು ಎನ್ 10 ವಾಹನಗಳನ್ನು ಖರೀದಿಸಿದ್ದು. ಸದರಿ ವಾಹನಗಳನ್ನು ರಾಜ್ಯದ್ಯಾದಂತ ಇರುವ ಪ್ರಾದೇಶಿಕ ಕಛೇರಿ ಹಾಗೂ ಬೆಂಗಳೂರು ನಗರ ಹೊರತು ಪಡಿಸಿ ಇರುವ ವಲಯ ಹಿರಿಯ ಪರಿಸರ ಅಧಿಕಾರಿಗಳಿಗೆ ಹಂಚಿಕೆ ಮಾಡಲು ಉದ್ದೇಶಿಸಿದೆ.

ಹಾಗೆಯೇ ಬೆಂಗಳೂರು ನಗರದಲ್ಲಿ ವಾಹನಗಳಿಂದ ಹೊರಸೂಸುವ ಕಾರ್ಬನ್ ಡೈಆಕ್ಸೈಡ್ ಕಡಿಮೆ ಮಾಡುವ ಉದ್ದೇಶದಿಂದ 16 ಸಂಖ್ಯೆಯ ವಿದ್ಯುತ್ ಚಾಲಿತ ಮಹೀಂದ್ರ ಎಕ್ಸ್ ಯು ವಿ 400 ವಾಹನಗಳನ್ನು ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಯ ವಲಯ ಹಿರಿಯ ಪರಿಸರ ಅಧಿಕಾರಿಗಳಿಗೆ ಮತ್ತು ಕೇಂದ್ರ ಕಛೇರಿಯ ಅಧಿಕಾರಿಗಳ ಕಾರ್ಯಚಟುವಟಿಕೆಗಳಿಗೆ ಹಂಚಿಕೆ ಮಾಡಲು ಉದ್ದೇಶಿಸಿಲಾಗಿದೆ ಎಂದರು.

ಬೆಂಗಳೂರು ನಗರ ವ್ಯಾಪ್ತಿಯಲ್ಲಿ ವಾಯುಗುಣಮಟ್ಟ ಮಾಪನ ಮಾಡುವ ಸಲುವಾಗಿ 04 ಮಹೀಂದ್ರ & ಮಹೀಂದ್ರ ಸಂಸ್ಥೆಯ ಃಖ ಖಗಿ ಮೊಬೈಲ್ ವ್ಯಾನ್ ವಾಹನಗಳನ್ನು ಖರೀದಿಸಿದ್ದು, ಸದರಿ ವಾಹನಗಳಲ್ಲಿ Air Quality Monitoring Equipment ಗಳನ್ನು ಅಳವಡಿಸಿ ಬೆಂಗಳೂರು ನಗರದ್ಯಾದಂತ ಕಾರ್ಯನಿರ್ವಹಿಸುತ್ತಿರುವ 04 ಹಿರಿಯ ಪರಿಸರ ಅಧಿಕಾರಿಗಳ ಕಛೇರಿಗೆ ಹಂಚಿಕೆ ಮಾಡಲು ಉದ್ದೇಶಿಸಲಾಗಿದೆ. ಈ 68 ವಾಹನಗಳ ಪೈಕಿ 49 ವಾಹನಗಳ ಖರೀದಿಯ ವೆಚ್ಚ ರೂ. 5,67,04,003/– ಮೊತ್ತಗಳಾಗಿದ್ದು, ಇದನ್ನು ಮಂಡಳಿಯ ಆಂತರಿಕ ಸಂಪನ್ಮೂಲದಿಂದ ಬರಿಸಲಾಗಿದೆ ಹಾಗೂ ಇನ್ನೂಳಿದ 19 ವಾಹನಗಳ ಖರೀದಿಯ ವೆಚ್ಚ ರೂ. 1,99,34,998/– ಮೊತ್ತಗಳಾಗಿದ್ದು, ಇದನ್ನು National Clear Air Quality Programme ಯೋಜನೆಯಡಿಯಲ್ಲಿ ಭರಿಸಲಾಗಿದೆ ಎಂದು ತಿಳಿಸಿದರು.

# ಸಮೀಕ್ಷೆ ಮುಗಿಯುತ್ತಿದ್ದಂತೆ ಶೀಘ್ರ ಪರಿಹಾರ ವಿತರಣೆ :ಜಿ.ಕುಮಾರ ನಾಯಕ



ಯಾದಗಿರಿ : ಅ 06 : ಕಳೆದ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ಸತತ ಮಳೆ ಮತ್ತು ಭೀಮಾ ನದಿ ಪ್ರವಾಹದಿಂದಾಗಿ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿ, ಮನೆ ಹಾನಿಯಾಗಿದೆ. ಈ ಕುರಿತು ಅಧಿಕಾರಿಗಳಿಂದ ಸಮೀಕ್ಷೆ ನಡೆ–ಯುತ್ತಿದ್ದು, ಸಮೀಕ್ಷೆ ಮುಗಿಯುತ್ತಿದಂತೆ ಪರಿಹಾರ ವಿತರಣೆ ಮಾಡಲಾಗುವುದು ಎಂದು ರಾಯಚೂರು ಸಂಸದ ಜಿ.ಕುಮಾರ ನಾಯಕ ಹೇಳಿದರು.

ಸೋಮವಾರ ಯಾದಗಿರಿ ತಾಲೂಕಿನ ಯಾದಗಿರಿ ಬಿ., ವಡಗೇರಾ ತಾಲೂಕಿನ ಗುರುಸುಣಿಗಿ, ನಾಯ್ಕಲ್ ಗ್ರಾಮದ ಪ್ರವಾಹ ಪೀಡಿತ ಪ್ರದೇಶಕ್ಕೆ ಭೇಟಿ ನೀಡಿ ಇತ್ತೀಚಿನ ಅತಿವೃಷ್ಟಿಯಿಂದಾದ ತೊಗರಿ, ಹೆಸರು, ಹತ್ತಿ ಬೆಳೆ ಹಾನಿ ಪರಿಶೀಲನೆ ನಡೆಸಿದ ನಂತರ ನಾಯ್ಕಲ್ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳೆ ಹಾನಿಗೆ ಎನ್.ಡಿ.ಆರ್. ಎಫ್ ನಿಯಮಾವಳಿ ಜೊತೆಗೆ ರಾಜ್ಯ ಸರ್ಕಾರದಿಂದ ಮಳೆಯಾಶ್ರಿತ, ನೀರಾವರಿ ಹಾಗೂ ಬಹುವಾರ್ಷಿಕ ಬೆಳೆಗಳಿಗೆ ಪ್ರತಿ ಹೆಕ್ಟೇರ್‌ಗೆ ತಲಾ 8,500 ರೂ. ಹೆಚ್ಚುವರಿ ಪರಿಹಾರ ಘೋಷಣೆ ಮಾಡಿದ್ದು, ಶೀಘ್ರವೇ ರೈತರಿಗೆ ನೀಡಲಾಗುವುದು ಎಂದರು.

ಭೀಮಾ ನದಿ ದಂಡೆಯ ಅಕ್ಕಪಕ್ಕದಲ್ಲಿ ಪ್ರವಾಹದಿಂದ ಹೊಲಗಳಿಗೆ ನೀರು ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿರುವುದನ್ನು ಇಂದು ಖುದ್ದಾಗಿ ಕಂಡಿರುವೆ. ಈಗಾಗಲೆ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು, ಡಿ.ಸಿ. ಆದಿಯಾಗಿ ಅಧಿಕಾರಿಗಳು ಸಹ ಭೇಟಿ ನೀಡಿ ಸಂತ್ರಸ್ತರ ಅಹವಾಲು ಆಲಿಸಿದ್ದಾರೆ. ಪ್ರತಿ ವರ್ಷ ಈ ಭಾಗ ಸತತವಾಗಿ ಅತಿವೃಷ್ಟಿ, ಅನಾವೃಷ್ಟಿಗೆ ತುತ್ತಾಗುತ್ತಿರುವುದರಿಂದ ಈಗಿನ ಎನ್.ಡಿ.ಆರ್.ಎಫ್ ನಿಯಮಾವಳಿಯಿಂದ ರೈತರಿಗೆ ನ್ಯಾಯಯುತ ಪರಿಹಾರ ದೊರಕುತ್ತಿಲ್ಲ. ಇದನ್ನು ತಿದ್ದುಪಡಿ ಮಾಡಿದಲ್ಲಿ ರೈತರಿಗೆ ಹೆಚ್ಚಿನ ಪರಿಹಾರ ಸಿಗಬಹುದೆಂಬುದು ರೈತರ ಬೇಡಿಕೆಯಾಗಿದೆ. ಈ ದಿಕ್ಕಿನಲ್ಲಿ ತಾವು ಎನ್.ಡಿ.ಆರ್.ಎಫ್ ನಿಯಮಾವಳಿಗಳನ್ನು ಅಧ್ಯಯನ ಮಾಡುತ್ತಿರುವೆ. ನಿಯಮಾವಳಿಯಲ್ಲಿ ತೊಡುಕುಗಳಿದಲ್ಲಿ ಅದನ್ನು ಕೇಂದ್ರದ ಗಮನ ಸೆಳೆಯುವೆ ಎಂದು ಜಿ. ಕುಮಾರ್ ನಾಯಕ್ ಭರವಸೆ ನೀಡಿದರು. ಇನ್ನು ನಾಯ್ಕಲ್ ಗ್ರಾಮದ ಸುಮಾರು 270 ಮನೆಗಳು ಪ್ರತಿ ಬಾರಿ ಪ್ರವಾಹಕ್ಕೆ ತುತ್ತಾಗುತ್ತಿರುವದುರಿಂದ ಶಾಶ್ವತ ಪರಿಹಾರಕ್ಕೆ ಗ್ರಾಮಸ್ಥರು ಗ್ರಾಮ ಸ್ಥಳಾಂತರ ಮಾಡುವುದರ ಕುರಿತು ಮನವಿ ಸಲ್ಲಿಸಿದ್ದು, ಈ ಬಗ್ಗೆ ಸ್ಥಳೀಯ ಅಧಿಕಾರಿಗಳು ಮತ್ತು ಶಾಸಕರೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಲ್ಪಿಸಲಾಗುವುದು ಎಂದು ಸಂಸದರು ತಿಳಿಸಿದರು. ಇದಕ್ಕು ಮುನ್ನ ವಡಗೇರಾ ತಾಲೂಕಿನ ಗುರುಸುಣಿಗಿ ಗ್ರಾಮದ ಸರ್ವೆ ನಂ. ಸರ್ವೆ ನಂ.227/1 ರಲ್ಲಿ ಶಂಕರಪ್ಪಗೌಡ ಬಸವರಾಜಪ್ಪ ಅವರಿಗೆ ಸೇರಿದ 3.33 ಎಕರೆ ಮತ್ತು ಸರ್ವೆ ನಂ.227/2 ರಲ್ಲಿ ವಿಶ್ವನಾಥರೆಡ್ಡಿ ಸೋಮಾನಥರೆಡ್ಡಿ ಅವರಿಗೆ ಸೇರಿದ 4 ಎಕರೆಯಲ್ಲಿ ಬೆಳೆದ ಹತ್ತಿ ಬೆಳೆ ಮತ್ತು ನಾಯ್ಕಲ್ ಗ್ರಾಮದ ಸರ್ವೆ ನಂ.454/3 ರಲ್ಲಿ ಮೊಹಮ್ಮದ್ ಹನೀಫ್ ಬಡೇಸಾಬ್ ಅವರಿಗೆ ಸೇರಿದ 3 ಎಕರೆಯಲ್ಲಿ ಬೆಳೆದ ಭತ್ತ ಬೆಳೆ ವೀಕ್ಷಣೆ ಮಾಡಿದರು. ನಾಯ್ಕಲ್ ಗ್ರಾಮದ ಬೆಳೆ ಹಾನಿ ವೀಕ್ಷಣೆ ಸಂದರ್ಭದಲ್ಲಿ ಸ್ಥಳದಲ್ಲಿದ್ದ ರೈತರು ಸರ್ಕಾರ ನೀಡುವ ಪರಿಹಾರ ನಮಗೆ ಸಾಲದು, ಬೆಳೆ ಸಾಲ ಮನ್ನಾ ಮಾಡಬೇಕೆಂದು ಸಂಸದರಿಗೆ ಮನವಿ ಮಾಡಿದರು. ನಂತರ ನಾಯ್ಕಲ್ ಗ್ರಾಮದಲ್ಲಿ ಮಳೆ ನೀರು ನುಗ್ಗಿ ಮನೆ ಹಾನಿಯಾಗಿರುವುದರ ಕುರಿತು ಗ್ರಾಮಸ್ಥರಿಂದ ಸಂಸದರು ಮಾಹಿತಿ ಪಡೆದುಕೊಂಡರು. ಇದಲ್ಲದೆ ಶಹಾಪೂರ ತಾಲೂಕಿನ ಹತ್ತಿಗುಡೂರ ಗ್ರಾಮದ ಸರ್ವೆ ನಂ.203ರಲ್ಲಿ ಕಾರ್ತಿಕ ಭೀಮಾರಾಯ ಇವರಿಗೆ ಸೇರಿದ 4.20 ಎಕರೆಯಲ್ಲಿ ಬೆಳೆದ ಹತ್ತಿ ಬೆಳೆ ಸಂಪೂರ್ಣ ಹಾಳಾಗಿರುವುದನ್ನು ಸಹ ಸಂಸದರು ವೀಕ್ಷಣೆ ಮಾಡಿದರು.

ಕೆ.ಕೆ.ಆರ್.ಡಿ.ಬಿಗೆ ಕೇಂದ್ರ ವಿಶೇಷ ಅನುದಾನ ಕೊಡಲಿ: ಡಾ.ಮಲ್ಲಿಕಾರ್ಜುನ ಖರ್ಗೆ ಅವರ ವಿಶೇಷ ಪ್ರಯತ್ನದಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂವಿಧಾನಕ್ಕೆ ತಿದ್ದುಪಡಿ ತಂದು 371ಜೆ ವಿಶೇಷ ಸ್ಥಾನಮಾನ ಕಲ್ಪಿಸಲಾಗಿದೆ. ಕಾಯ್ದೆ ಜಾರಿಯಿಂದ ಇಲ್ಲಿಯವರೆಗೂ ಕೇಂದ್ರ ಯಾವುದೇ ಅನುದಾನ ನೀಡಿಲ್ಲ. ರಾಜ್ಯ ಸರ್ಕಾರವೇ ಪ್ರತಿ ವರ್ಷ 5,000 ಕೋಟಿ ರೂ. ಹಣ ನೀಡುತ್ತಿದೆ. ಇಡೀ ದೇಶದಲ್ಲಿಯೇ ಹಿಂದುಳಿವಿಕೆ ಕಾರಣದಿಂದಲೆ ಈ ಪ್ರದೇಶ ವಿಶೇಷ ಸ್ಥಾನಮಾನ ಪಡೆದಿರುವಾಗ ಕೇಂದ್ರ ಸರ್ಕಾರ ಕೇವಲ ಕಾಯ್ದೆ ತಿದ್ದುಪಡಿ ಮಾಡಿ ಬಿಟ್ಟರೆ ಸಾಲದು, ರಾಜ್ಯ ಸರ್ಕಾರದಂತೆ ಅದು ಸಹ ವಿಶೇಷ ಅನುದಾನ ನೀಡಿ ಈ ಭಾಗದ ಅಭಿವೃದ್ಧಿಯಲ್ಲಿ ಪಾಲುದಾರಿಕೆ ವಹಿಸಬೇಕು. ಒಕ್ಕೂಟದ ವ್ಯಸವ್ಥೆಯಲ್ಲಿ ರಾಜ್ಯಗಳಿಗೆ ಸರಿಯಾದ ರೀತಿಯಲ್ಲಿ ಅನುದಾನ ಹಂಚಿಕೆಯಾಗಬೇಕು ಎಂದು ಜಿ.ಕುಮಾರ ನಾಯಕ್ ಅಭಿಪ್ರಾಯ ವ್ಯಕ್ತಪಡಿಸಿದರು. ಇನ್ನು ನೀತಿ ಆಯೋಗ ಆಯೋಗ ಗುರುತಿಸಿದ ಮಹತ್ವಕಾಂಕ್ಷೆ ಜಿಲ್ಲೆಯಲ್ಲಿ ಯಾದಗಿರಿ, ರಾಯಚೂರು ಸ್ಥಾನ ಪಡೆದರು ಕೇಂದ್ರ ನೀಡುವ 2–5 ಕೋಟಿ ರೂ. ಅನುದಾನ ಯಾವುದಕ್ಕೂ ಸಾಲದು.

# ಔಷಧ ವಿಜ್ಞಾನ ಕ್ಷೇತ್ರಕ್ಕೆ ಭಾರತದ ಕೊಡುಗೆ ಅಪಾರ: ಡಾ.ಸಕ್ಸೆನಾ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.6–ಔಷಧ ವಿಜ್ಞಾನ ಕ್ಷೇತ್ರಕ್ಕೆ ಭಾರತದ ಕೊಡುಗೆ ಅಪಾರವಾಗಿದ್ದು ಔಷಧಶಾಸ್ತ್ರದ ಪದವೀಧರರಿಗೆ ವಿಫುಲ ಅವಕಾಶಗಳಿವೆ ಎಂದು ಜಮ್ಮುವಿನ ಸಿಎಸ್ಐಆರ್ ಇಂಡಿಯನ್ ಇನ್ಸಿಟ್ಯೂಟ್ ಆಫ್ ಇಂಟಿಗ್ರೇಟಿವ್ ಮೆಡಿಸಿನ್, ಕ್ಯಾನ್ಸರ ಔಷಧಶಾಸ್ತ್ರ ವಿಭಾಗದ ಮಾಜಿ ಮುಖ್ಯಸ್ಥರಾದ ಡಾ.ಅಜೀತಕುಮಾರ ಸಕ್ಸೆನಾ ಹೇಳಿದರು.

ನಗರದ ಬ.ವಿ.ವ.ಸಂಘದ ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದಿಂದ ಶನಿವಾರ ಬ.ವಿ.ವಿ.ಸಂಘದ ನೂತನ ಸಭಾಭವನದಲ್ಲಿ ನಡೆದ ಬಿ.ಫಾರ್ಮಾ, ಎಮ್.ಫಾರ್ಮ ಹಾಗೂ ಫಾರ್ಮ ಡಿ ಕೋರ್ಸಿನ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪದವಿ ಪ್ರದಾನ ಮಾಡಿ ಅವರು ಮಾತನಾಡಿದರು.

ಅನೇಕ ದೇಶಗಳಿಗೆ ಭಾರತ ಔಷಧಗಳನ್ನು ರಫ್ತು ಮಾಡುವ ಮೂಲಕ ಔಷಧ ವಿಜ್ಞಾನ ಕ್ಷೇತ್ರ–ಕ್ಕೆ ಮಹತ್ತರ ಕೊಡುಗೆ ನೀಡಿದೆ. ಪದವೀಧರರು ತಮ್ಮ ಜ್ಞಾನವನ್ನು ನಿರಂತರವಾಗಿ ನವೀಕರಿಸಿಕೊಂಡು ಔಷಧ ಗುಣಮಟ್ಟ ಮತ್ತು ಮಾನದಂಡಗಳನ್ನು ಕಾಯ್ದುಕೊಳ್ಳುವ ಮತ್ತು ಗುಣಮಟ್ಟವನ್ನು ಪಾಲಿಸುವಲ್ಲಿ ಔಷಧಾಲಯ ಪದವೀಧರರು ವಹಿಸುವ ಪಾತ್ರ ಮಹತ್ವದ್ದಾಗಿದೆ, ಔಷಧಶಾಸ್ತ್ರದವರಿಗೆ ಬೇರೆ ಬೇರೆ ಕ್ಷೇತ್ರದಲ್ಲೂ ಉದ್ಯೋಗ ಅವಕಾಶಗಳಿವೆ ಎಂದು ಡಾ.ಸಕ್ಸೇನಾ ಹೇಳಿದರು.

ಮುಖ್ಯ ಅತಿಥಿಯಾಗಿದ್ದ ಬೆಂಗಳೂರಿನ ಇನ್ನುವೆಲ್ ಬಯೋಸೈನ್ಸ್‌ನ ಡಾ.ಕೋಟೆಪ್ಪಾ ಪರಿ ಮಾತನಾಡಿ, ಎಲ್ಲ ಪದವಿ ವಿದ್ಯಾರ್ಥಿಗಳಿಗೆ ವಿಫುಲ ಉದ್ಯೋಗ ಅವಕಾಶಗಳಿವೆ. ಸಿಕ್ಕ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಬ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ನಮ್ಮ ಔಷಧ ಮಹಾವಿದ್ಯಾಲಯ ಅತ್ಯಾಧುನಿಕ ಸೌಲಭ್ಯಗಳನ್ನೊಳಗೊಂಡು ಗುಣಮಟ್ಟದ ಶಿಕ್ಷಣ ನೀಡುತ್ತಿರುವುದರಿಂದ ಬೇಡಿಕೆ ಹೆಚ್ಚಾಗಿದೆ. ಈ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ ಎಂದರು.

105 ಬಿ,ಫಾರ್ಮ ಹಾಗೂ 38 ಎಮ್.ಫಾರ್ಮ, 18 ಫಾರ್ಮ ಡಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಡಾ.ವೈ.ಶ್ರೀನಿವಾಸ ಇದ್ದರು.

# ಸಾರ್ವಜನಿಕರು ವೈದ್ಯರ ನಿರ್ದಿಷ್ಟ ಸಲಹೆ ಮೇರೆಗೆ ಮಾತ್ರ ಕೆಮ್ಮಿನ ಔಷಧಿಗಳನ್ನು ಬಳಸಿ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಅ.06:ಎರಡು ವರ್ಷದೊಳಗಿನ ಮಕ್ಕಳಿಗೆ ಯಾವುದೇ ಕೆಮ್ಮಿನ ಸೀರಪ್ ನೀಡಬಾರದು ಹಾಗೂ 2 ರಿಂದ 5 ವರ್ಷದೊಳಗಿನ ಮಕ್ಕಳಿಗೆ ತಜ್ಞ ವೈದ್ಯರ ನಿರ್ದಿಷ್ಟ ಸಲಹೆ ಮೇರೆಗೆ ಮಾತ್ರ ಕೆಮ್ಮಿನ ಔಷಧಿಗಳನ್ನು ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ವೈದ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಎರಡು ವರ್ಷದೊಳಗಿನ ಮಕ್ಕಳಿಗೆ ಕೆಮ್ಮು ನಿವಾರಣೆಗಾಗಿ ನೀಡಿದ ಕೋಲ್ಡ್ರೀಫ್ ಸೀರಫ್ ಸೇವನೆಯಿಂದ ರಾಜಸ್ಥಾನ, ಮಧ್ಯಪ್ರದೇಶ ಸೇರಿದಂತೆ ಇನ್ನಿತರ ರಾಜ್ಯಗಳಲ್ಲಿ ಮಕ್ಕಳು ಮೃತಪಟ್ಟ ಪ್ರಕರಣಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ನಿರ್ದೇಶನದಂತೆ ಬಳ್ಳಾರಿ ಜಿಲ್ಲೆಯಲ್ಲೂ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.

ಯಾವುದೇ ಖಾಸಗಿ ಆಸ್ಪತ್ರೆಗಳಲ್ಲಿ ಈ ಔಷಧಿ ಕುರಿತು ನಿಗಾವಹಿಸುವಂತೆ ಮತ್ತು ಔಷಧಿ ಅಂಗಡಿಗಳ ಮಾರಾಟಗಾರರು ತಮ್ಮ ಬಳಿ ಇದ್ದಲ್ಲಿ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಮುಂಜಾಗ್ರತೆ ವಹಿಸಬೇಕು ಎಂದು ಔಷಧ ಆಡಳಿತ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಜಿಪಂ ಸಿಇಒ ಅವರು ಸೂಚಿಸಿದ್ದಾರೆ.ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರು ಈ ದಿಶೆಯಲ್ಲಿ ತೀವ್ರ ನಿಗಾವಹಿಸಲು ನೀಡಿರುವ ನಿರ್ದೇಶನ ಮತ್ತು ಸರ್ಕಾರದ ಆದೇಶದಂತೆ ಸೆಕ್ಷನ್ 26(ಎ) ನ ಡ್ರಗ್ ಮತ್ತು ಕಾಸ್ಮೆಟಿಕ್ಸ್ ಆಕ್ಟ್ 1940 ( 23 ಆಫ್ 1940 ) ರ ಅನ್ವಯ 04 ವರ್ಷದೊಳಗಿನ ಮಕ್ಕಳಿಗೆ ಕ್ಲೋರೊಫೆನಿರಮೈನ್ ಮಲೇಟ್ ಹಾಗೂ ಫಿನೈಲ್ ಫ್ರೀನ್ ಹೈಡ್ರೋಕ್ಲೋರೈಡ್ ಸಂಯೊಜಿತ ಸೀರಫ್‌ನ್ನು ನೀಡದಂತೆ ಹಾಗೂ ವಿತರಿಸದಂತೆ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಕೈಗೊಳ್ಳಬೇಕು ಎಂದು ಹೇಳಿದ್ದಾರೆ. ಹಾಗಾಗಿ ಸಾರ್ವಜನಿಕರು ವೈದ್ಯರ ನಿರ್ದಿಷ್ಟ ಸಲಹೆ ಮೇರೆಗೆ ಮಾತ್ರ ಕೆಮ್ಮಿನ ಔಷಧಿಗಳನ್ನು ಬಳಸಬೇಕು ಎಂದು ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಕೋಲ್ಡ್ರೀಫ್ ಸೀರಫ್ ಔಷಧಿ ಸರಬರಾಜು ಆಗಿರುವುದಿಲ್ಲ. ಸರ್ಕಾರದ ಮಾರ್ಗಸೂಚಿಯಂತೆ ಕೆಮ್ಮಿನ ಸೀರಫ್ ಕುರಿತು ಇಲಾಖೆಯ ಸಿಬ್ಬಂದಿಯವರಿಂದ ಸಾರ್ವಜನಿಕರಿಗೆ ಜಿಲ್ಲೆಯಾದ್ಯಂತ ಜಾಗೃತಿ ನೀಡಲಾಗುತ್ತಿದ್ದು, ಆಸ್ಪತ್ರೆಗೆ ಬರುವ ಸಾರ್ವಜನಿಕರು ವೈದ್ಯರು ತಿಳಿಸುವ ಸಲಹೆಗಳಂತೆ ಔಷಧಿಗಳನ್ನು ಬಳಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು ಅವರು ವಿನಂತಿಸಿದ್ದಾರೆ.

# ಜೂಜಾಟ ಆಡುತ್ತಿದ್ದವರ ಮೇಲೆ ಪೊಲೀಸರ ದಾಳಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಅ.6: ಪೊಲೀಸ್ ಠಾಣೆ ವ್ಯಾಪ್ತಿಯ ಹಣಕುಣಿ ಗ್ರಾಮದಲ್ಲಿ ಸಾರ್ವಜನಿಕ ಸ್ಥಳದಲ್ಲಿ ಜೂಜಾಟ ಆಡುತ್ತಿದವರ ಮೇಲೆ ರವಿವಾರ ಪೊಲೀಸರು ದಾಳಿ ನಡೆಸಿದ್ದಾರೆ. ಇಸ್ಪೀಟ್ ಜೂಜಾಟ ಆಡುತ್ತಿರುವ. ಖಚಿತ ಮಾಹಿತಿಯ ಮೇರೆಗೆ ಪಿಎಸ್ಐ ಬಸಲಿಂಗಪ್ಪ ಎಂ. ಗೋಧಿಹಾಳ ಅವರು ಸಿಬ್ಬಂದಿಗಳೊಂದಿಗೆ ದಾಳಿ ನಡೆಸಿ ಜೂಜಾಡುತ್ತಿದ್ದವರನ್ನು ಬಂಧಿಸಿ, ಜೂಜಾಟಕ್ಕೆ ಇಟ್ಟಿದ್ದ 5200 ರೂ. ಹಣವನ್ನು ವಶಪಡಿಸಿಕೊಂಡು ಆರೋಪಿತರ ವಿರುದ್ಧ ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವೀರಶೈವ–ಲಿಂಗಾಯತರು ಹಾಳಾದ್ರೆ ಇಡೀ ರಾಜ್ಯವೇ ಹಾಳಾಗುತ್ತೆ: ಖಂಡ್ರೆ



ಬೆಂಗಳೂರು:ಅ.6: ಯಾವುದೇ ಶಕ್ತಿ ವೀರಶೈವ–ಲಿಂಗಾಯತರನ್ನ ಬೇರ್ಪಡಿಸಲು ಸಾಧ್ಯವಿಲ್ಲ. ?ವೀರಶೈವ ಲಿಂಗಾಯತರು ಹಾಳಾದ್ರೆ ಇಡೀ ರಾಜ್ಯವೇ ಹಾಳಾಗುತ್ತೆ, ಅವರು ಸುಧಾರಿಸಿದ್ರೆ, ಕರ್ನಾಟಕ ಉದ್ಧಾರ ಆಗುತ್ತೆ' ಅಂತ ಸಾಹಿತಿಯೊಬ್ಬರು ಹೇಳ್ತಾರೆ. ಹಾಗಾಗಿ ಎಲ್ಲರ ಉದ್ಧಾರ ಆಗಬೇಕಾದ್ರೆ, ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕಿರುವುದು ಅತ್ಯವಶ್ಯಕವಾಗಿದೆ. ಯಾರಾದ್ರೂ ಈ ಧರ್ಮವನ್ನ ಹಾಳು ಮಾಡಲು ಪ್ರಯತ್ನಿಸಿದ್ರೆ, ಇಡೀ ಕರ್ನಾಟಕವೇ ಹಾಳಾಗುತ್ತೆ ಎಂದು ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ.

ಪ್ರತ್ಯೇಕ ಲಿಂಗಾಯತ ಧರ್ಮ ಆಗಬೇಕು ಎಂಬ ಸಚಿವ ಎಂ.ಬಿ ಪಾಟೀಲ್ ಹೇಳಿಕೆಗೆ ಪ್ರತಿಕ್ರಿಯಿಸಿದ್ದಾರೆ. ಎಂ.ಬಿ.ಪಾಟೀಲ್ ನನಗೆ ಸ್ನೇಹಿತರು ಅವರ ಬಗ್ಗೆ ಮಾತನಾಡಲ್ಲ. ಯಾರಿಂದಲೂ ವೀರಶೈವ ಲಿಂಗಾಯತ ಬೇರೆ ಮಾಡಲು ಸಾಧ್ಯವಿಲ್ಲ. ಎಲ್ಲರೂ ಒಗ್ಗಟ್ಟಿನಿಂದಲೇ ಇದೀವಿ. ಅಲ್ಲದೇ ಪ್ರತ್ಯೇಕ ಧರ್ಮದ ವಿಚಾರದಲ್ಲಿ ಸಿದ್ದರಾಮಯ್ಯ ಹೆಸರನ್ನ ತಳಕು ಹಾಕಬಾರದು. ಈ ಹಿಂದೆಯೂ ಅವರಿಗೆ ಸಂಬಂಧ ಇರಲಿಲ್ಲ, ಈಗಲೂ ಇಲ್ಲ, ನಮ್ಮ ಸರ್ಕಾರಕ್ಕೂ ಇಲ್ಲ. ವೀರಶೈವ ಲಿಂಗಾಯತ ಮಹಾಸಭಾ ನಿರ್ಣಯವೇ ಅಂತಿಮ ಎಂದು ಹೇಳಿದ್ದಾರೆ.

ನಮ್ಮ ನಿಲುವು ಸ್ಪಷ್ಟವಾಗಿ ಹೇಳಿದ್ದೇನೆ. ಲಿಂಗಾಯತ–ವೀರಶೈವ ಎರಡೂ ಒಂದೇ. ಶಿವಕುಮಾರ ಸ್ವಾಮಿಗಳು, ಅಖಿಲ ಭಾರತ ವೀರಶೈವ ಲಿಂಗಾಯತ ಸಭೆಯ ಎಲ್ಲಾ ಅಧ್ಯಕ್ಷರು ಇವತ್ತು ವೀರಶೈವ–ಲಿಂಗಾಯತ ಎರಡು ಸಮಾನಾರ್ಥಕ ಪದಗಳು ಇವೆ ಅಂತ ಹೇಳಿದ್ದಾರೆ. ವೀರಶೈವ–ಲಿಂಗಾಯತ ಭಿನ್ನ ಇಲ್ಲ ಎಂದಿದ್ದಾರೆ.

ಇಷ್ಟಲಿಂಗ ಪೂಜೆ ಮಾಡುವವರು, ಅಷ್ಟಾಚರಣ ವ್ಯವಸ್ಥೆ ಪಾಲನೆ ಮಾಡುವರು, ಗುರುಗಳು ಇದ್ದಾರೆ, ವಿರಕ್ತರು ಇದ್ದಾರೆ. ಹೀಗಾಗಿ ಎಲ್ಲರು ಒಗ್ಗಟ್ಟಾಗಿ, ಸಂಘಟಿ–ತರಾಗಿ ಇರಬೇಕು. ಸಂಘಟನೆಯಲ್ಲಿ ಶಕ್ತಿ ಇದೆ. ವಿಘಟನೆಯಲ್ಲಿ ಯಾವುದೇ ಉಪಯೋಗ ಆಗೊಲ್ಲ ಎಂಬುದು ನಮ್ಮ ನಿಲುವು. ಆ ನಿಲುವಿಗೆ ನಾವು ಬದ್ಧರಾಗಿದ್ದೇವೆ ಎಂದು ತಿಳಿಸಿದ್ದಾರೆ.

ಪ್ರತ್ಯೇಕ ಲಿಂಗಾಯತ ಧರ್ಮದಲ್ಲಿ ಮಹಾಸಭಾದ ನಿಲುವೇನು ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಮಹಾಸಭಾ ಇವತ್ತು ಅಲ್ಲ ಸ್ವಾತಂ?????? ಪೂರ್ವದಿಂದ ಹಿಡಿದು 2,000 ಇಸವಿಯಿಂದ ನಡೆದ ಜನಗಣತಿ ಸಮಯದಲ್ಲಿ ಎಲ್ಲರ ಅಭಿಪ್ರಾಯ ತೆಗೆದುಕೊಳ್ಳಾಗಿದೆ. ಭೌಗೋಳಿಕವಾಗಿ ನಾವೆಲ್ಲರೂ ಹಿಂದೂಗಳೇ ಆದರೂ ನಮ್ಮ ಆಚಾರ–ವಿಚಾರದಲ್ಲಿ ಸಿಖ್, ಜೈನರು, ಬೌದ್ಧ, ಪಾರ್ಸಿ ಗಳಿಗೆ ಪ್ರತ್ಯೇಕ ಧರ್ಮ ಅಂತ ಕೊಡಲಾಗಿದೆ. ಅದೇ ಆಧಾರದಲ್ಲಿ ವೀರಶೈವ ಲಿಂಗಾಯತರಿಗೆ ಪ್ರತ್ಯೇಕ ಧರ್ಮ ನೀಡಬೇಕು ಅಂತ ಪದೇ ಪದೇ ಕೇಂದ್ರಕ್ಕೆ ಮನವಿ ಮಾಡಲಾಗಿದೆ. ಜನಗಣತಿಯಲ್ಲೂ ಪ್ರತ್ಯೇಕ ಕಾಲಂ ಕೊಡಬೇಕು ಅಂತ ವಿನಂತಿ ಮಾಡಿದ್ದೇವೆ. ಇಲ್ಲಿವರೆಗೂ ಸರ್ಕಾರ ಅದನ್ನ ಗುರುತಿಸಿಲ್ಲ. ನಮ್ಮ ಮಹಾಸಭೆಯ ವತಿಯಿಂದ ಇನ್ನು ಮುಂದೆಯೂ ಪ್ರತ್ಯೇಕ ಧರ್ಮ ಮಾನ್ಯತೆ ಸಿಗಲು ಪ್ರಯತ್ನ ಮಾಡ್ತೀವಿ ಅಂತ ಸ್ಪಷ್ಟಪಡಿಸಿದ್ದಾರೆ.

ಪ್ರತ್ಯೇಕ ಧರ್ಮದ ವಿಚಾರ ಮತ್ತು ಸರ್ಕಾರಕ್ಕೆ ಯಾವುದೇ ಸಂಬಂಧವಿಲ್ಲ. ಸಿದ್ದರಾಮಯ್ಯ ಜನಸಮುದಾಯದ ನಾಯಕರು ಇದ್ದಾರೆ. ನಾವು ಯಾರಾದ್ರು ಪ್ರತ್ಯೇಕ ಧರ್ಮದ ಬಗ್ಗೆ ಅವರ ಬಳಿ ಮಾತಾಡಿದ್ರೆ ಸಿಎಂ ನಿರ್ಧಾರ ತೆಗೆದುಕೊಳ್ತಾರೆ. ಮೊದಲು ಕೂಡಾ ನೀವೆಲ್ಲರು ಬಂದು ಏನ್ ಹೇಳ್ತಿರೋ ಅದನ್ನ ಪರಿಶೀಲನೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇನೆ ಅಂತ ಹೇಳಿದ್ರು.

### ಜಿಲ್ಲಾ ಸಚಿವರು, ಶಾಸಕರ, ಸಂಸದರ, ವಿರುದ್ಧ ಆಡಿಯೋದಲ್ಲಿ

# ಬಹಿರಂಗವಾಗಿ ಬೇಸರ ವ್ಯಕ್ತಪಡಿಸಿದ ಅನ್ಸಾರಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಅ.6:ಹಿಟ್ನಾಳ್ ಕುಟುಂಬದ ಸಂಸದರು, ಶಾಸಕರು, ಕನಕಗಿರಿ ಕ್ಷೇತ್ರದಿಂದ ಗೆದ್ದು ಸಚಿವರಾಗಿರುವ ತಂಗಡಗಿ, ಮತ್ತು ಸಿಎಂ ಆರ್ಥಿಕ ಸಲಹೆಗಾರ ರಾಯರೆಡ್ಡಿ ಅವರು ಮುಖ್ಯಮಂತ್ರಿಗಳು ಮತ್ತು ಕಾಂಗ್ರೆಸ್ ಹೈಕಮಾಂಡ್‌ಗೆ ಜಿಲ್ಲೆಯಲ್ಲಿ ನಡೆಯುವ ಸತ್ಯ ಸಂಗತಿಗಳನ್ನು ಮರೆ ಮಾಚಿ ಸುಳ್ಳಿನ ರೀಲ್ ಬಿಡುತ್ತಿದ್ದಾರೆ.ಎಂದು ಅನ್ಸಾರಿಯವರು ಆಡಿಯೋ ಮೂಲಕ ಹಾಕಿರುವುದು ಕಾಂಗ್ರೆಸ್ ವಲಯದಲ್ಲಿ ಭಾರಿ ಸಂಚಲನ ಮೂಡಿದೆ. ತಮ್ಮ ಬೆಂಬಲಿಗ ಕಾಂಗ್ರೆಸ್ ಕಾರ್ಯಕರ್ತರಿಗೆ ಮತ್ತು ಕೊಪ್ಪಳ ಜಿಲ್ಲೆಯ ಜನತೆಯನ್ನು ಉದ್ದೇಶಿಸಿ ಇಕ್ಬಾಲ್ ಅನ್ಸಾರಿ ಅ.5 ರಂದು ಆಡಿಯೋ ಸಂದೇಶ ರವಾನಿಸಿದ್ದು, ಅ.6 ರಂದು ಕೊಪ್ಪಳ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬರುತ್ತಿರುವ ಮುಖ್ಯಮಂತ್ರಿಗಳ ಸಾಧನ ಸಮಾವೇಶಕ್ಕೆ ಪ್ರತಿಯೊಂದು ಗ್ರಾಮದ ಫಲಾನುಭವಿಗಳನ್ನು ನಮ್ಮ ಬೆಂಬಲಿಗ ಕಾರ್ಯಕರ್ತರು ಕರೆದುಕೊಂಡು ಹೋಗಬೇಕು. ಮುಖ್ಯಮಂತ್ರಿಗಳು ರಾಜ್ಯದ ಜನತೆಗೆ ಐದು ಗ್ಯಾರಂಟಿಗಳನ್ನು ನೀಡುವ ಮೂಲಕ ಅತ್ಯುತ್ತಮ ಯೋಜನೆಗಳನ್ನು ಜಾರಿ ಮಾಡಿದ್ದಾರೆ. ಮುಖ್ಯಮಂತ್ರಿಗಳ ಐದು ಗ್ಯಾರಂಟಿ ಗಿನ್ನಿಸ್ ದಾಖಲೆಯಾಗಿದೆ ಇದನ್ನು ನಾವೆಲ್ಲರು ತುಂಬು ಹೃದಯದಿಂದ ಸ್ವಾಗತಿಸಿ ಮುಖ್ಯಮಂತ್ರಿಗಳ ಕಾರ್ಯಕ್ರಮವನ್ನು ಸ್ವಾಗತಿಸುತ್ತೇನೆ. ಆದರೆ ಕೊಪ್ಪಳ ಜಿಲ್ಲೆಯ ಸಚಿವ, ಸಂಸದ, ಶಾಸಕ ಮತ್ತು ಆರ್ಥಿಕ ಸಲಹೆಗಾರ ಮಾಡಿರುವ ಮೋಸವನ್ನು ಸಹಿಸುವುದಿಲ್ಲ. ಅವರು ನನ್ನ ಬಗ್ಗೆ ಮುಖ್ಯಮಂತ್ರಿ ಬಳಿ ಸುಳ್ಳಿನ ಕಂತೆ ಹೆಣೆಯುತ್ತಿದ್ದಾರೆ. ಸಂಸದ ರಾಜಶೇಖರ ಹಿಟ್ನಾಳ್ ಪರ ಚುನಾವಣೆಯಲ್ಲಿ ಕೆಲಸ ಮಾಡುವ ಮನಸ್ಸು ನನಗೆ ಇದ್ದಿಲ್ಲ. ಆದರೆ ಮುಖ್ಯಮಂತ್ರಿಯವರ ಮಾತಿಗೆ ನಾನು ಬೆಲೆ ಕೊಟ್ಟು ಗಂಗಾವತಿಯಲ್ಲಿ 16 ಸಾವಿರ ಮತಗಳ ಲೀಡ್ ಆಗುವಂತೆ ಕೆಲಸ ಮಾಡಿದ್ದಾರೆ. ಆದರೆ ಗೆದ್ದ ನಂತರ ಹಿಟ್ನಾಳ್ ಸಹೋದರರು, ಇವರೊಂದಿಗೆ ಸಚಿವ ಹಾಗೂ ರಾಯರೆಡ್ಡಿ ಸಿಎಂ ಮುಂದೆ ನನ್ನ ವಿರುದ್ಧ ಕ್ಯಾಸೆಟ್ ಹಾಕುತ್ತಾರೆ. ಗಂಗಾವತಿ ಕ್ಷೇತ್ರದ ವಿಧಾನಸಭೆ ಚುನಾವಣೆಯಲ್ಲಿ ರೆಡ್ಡಿಗೆ ಬೆಂಬಲಿಸಿ ನನ್ನ ವಿರುದ್ಧ ಮಸಲತ್ತು ಮಾಡಿದ್ದಾರೆ.

ಮುಂದಿನ ದಿನಗಳಲ್ಲಿ ಇವರ ಕುತುಂತ್ರದ ಬಣ್ಣ ಬಯಲು ಮಾಡಲು ನಾನು ಸಿದ್ಧನಿದ್ದೇನೆ.

### ಸಿಎಂ ಕಾರ್ಯಕ್ರಮಕ್ಕೆ ಹೋಗಿ ಬನ್ನಿ



ಆದರೆ ಕಾಂಗ್ರೆಸ್ ಮುಖಂಡರನ್ನು ನಂಬಬೇಡಿ ಇಂದು ಕೊಪ್ಪಳದಲ್ಲಿ ನಡೆಯುತ್ತಿರುವ ಸಾಧನಾ ಸಮಾವೇಶದ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಪ್ರತಿಯೊಬ್ಬ ನನ್ನ ಬೆಂಬಲಿಗ ಕಾರ್ಯಕರ್ತರು ಹೋಗಿ ಬನ್ನಿ. ಆದರೆ ಕೊಪ್ಪಳ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಸಂಸದ, ಶಾಸಕ, ಸಚಿವ ಹಾಗೂ ಸಿಎಂ ಆರ್ಥಿಕ ಸಲಹೆಗಾರನನ್ನು ನಂಬಬೇಡಿ. ಅವರೆಲ್ಲರೂ ಮೋಸಗಾರರು. ನನಗೆ ನೇರವಾಗಿ ಇವರೆಲ್ಲರೂ ಸೇರಿ ಮೋಸ ಮಾಡಿದ್ದಾರೆ. ಮತ್ತು ಇಂದಿನ ಕಾರ್ಯಕ್ರಮಕ್ಕೆ ನನಗೆ ಮಾಹಿತಿ ನೀಡಿಲ್ಲ.

ಇಕ್ಬಾಲ್ ಅನ್ಸಾರಿ,
ಮಾಜಿ ಸಚಿವ, ಗಂಗಾವತಿ.

ಮುಂದಿನ ದಿನಗಳಲ್ಲಿ ಕೇಲವ ಕೊಪ್ಪಳ ಜಿಲ್ಲೆಯಲ್ಲಿ ಮಾತ್ರ ಅಲ್ಲ ರಾಜ್ಯಾದ್ಯಂತ ನಮ್ಮ ಬೆಂಬಲಿಗರು ಮತ್ತು ಮುಸ್ಲಿಂ ಸಮಾಜಕ್ಕೆ ಹಿಟ್ನಾಳ್ ಕುಟುಂಬ, ತಂಗಡಗಿ ಮತ್ತು ರಾಯರೆಡ್ಡಿ ಮಾಡಿರುವ ಮೋಸವನ್ನು ಎಳೆ ಎಳೆಯಾಗಿ ಬಿಚ್ಚಿಡುತ್ತೇನೆ. ಇಂದು ನಡೆಯುವ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಜನತೆ ಮತ್ತು ಫಲಾನುಭವಿಗಳು ಹೋಗಿಬನ್ನಿ. ಆದರೆ ಜಿಲ್ಲೆಯ ಕಾಂಗ್ರೆಸ್ ಮುಖಂಡರನ್ನು ನಂಬಬೇಡಿ. ಜಿಲ್ಲೆಯ ಕಾಂಗ್ರೆಸ್ ಜನಪ್ರತಿನಿಧಿಗಳನ್ನು ಯಾವತ್ತು ನಂಬಬೇಡಿ ಎಂದು ಸಚಿವ ತಂಗಡಗಿ, ಸಂಸದ, ಶಾಸಕ ಹಿಟ್ನಾಳ್ ಸಹೋದರರು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ತಂಗಡಗಿ ವಿರುದ್ಧ ಏಕ ವಚನದಲ್ಲಿ ಅನ್ಸಾರಿ ಆಕ್ರೋಶ ಹೊರ ಹಾಕಿರುವುದು ಇಂದು ಕೊಪ್ಪಳದಲ್ಲಿ ನಡೆಯುತ್ತಿರುವ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಕಪ್ಪು ಚುಕ್ಕೆಯಾಗಿದೆ.

### ಶೀಘ್ರವಾಗಿ ಅರ್ಜಿ ವಿಲೇವಾರಿಗೊಳಿಸಿದ ಸಾಧನೆ

# ರಾಜ್ಯಕ್ಕೆ ರಾಯಚೂರು ಪ್ರಥಮ

ರಾಯಚೂರು ಅ.06 : ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ರಾಜ್ಯದ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡಲು ರಾಯಚೂರು ಜಿಲ್ಲೆಯ ನಾಡ ಕಚೇರಿಗಳಲ್ಲಿ ಅರ್ಜಿಗಳ ವಿಲೇವಾರಿಯನ್ನು ವೇಗಗೊಳಿಸಿ ಸಾಧನೆ ಮಾಡಿರುವುದಕ್ಕೆ ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ. ಅವರಿಗೆ ಕಂದಾಯ ಇಲಾಖೆಯ ಆಯುಕ್ತರಾದ ಮುಲ್ಶೈ ಮುಹಿಲನ್ ಅವರು ಅಭಿನಂದನೆ ತಿಳಿಸಿದ್ದಾರೆ. ರಾಯಚೂರ ಜಿಲ್ಲೆಯ ನಾಡ ಕಚೇರಿಗಳಲ್ಲಿ ಆಗಸ್ಟ್–2025ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ 33,870 ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇ.99.90 ರಷ್ಟು ವಿಲೇವಾರಿ ಮಾಡಿ 6.18 ಸಿಗ್ಮಾ ಮೌಲ್ಯ ಪಡೆದಿರುತ್ತೀರಿ. 10.04 ವಿಲೇವಾರಿ ಸೂಚ್ಯಂಕದ ಪ್ರಕಾರ ತಮ್ಮ ಜಿಲ್ಲೆಯಲ್ಲಿ 11.04 ಪಟ್ಟು ನಿಗಧಿತ ಅವಧಿಗಿಂತ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ, ಆಗಸ್ಟ್–2025ರ ಮಾಹೆಯಲ್ಲಿ ರಾಯಚೂರಜ ಜಿಲ್ಲೆಯು ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿರುವುದು ಶ್ಲಾಘನೀಯವಾಗಿದೆ.

ನಿಮ್ಮ ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಿಮ್ಮ ಹಾಗೂ ನಿಮ್ಮ ನಾಡ ಕಚೇರಿ /ಅಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಯ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಆದ್ದರಿಂದ, ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ಪರವಾಗಿ ನಿಮ್ಮ ತಂಡಕ್ಕೆ ನನ್ನ ಅಭಿನಂದನೆಯನ್ನು ವ್ಯಕ್ತಪಡಿಸಲು ಇಚ್ಛಿಸುತ್ತೇನೆ. ಇನ್ನು ಮುಂದಿನ ದಿನಗಳಲ್ಲಿಯೂ ಸಹ ನಿಮ್ಮಿಂದ ಇದೇ ರೀತಿಯ ಸಹಕಾರ ಹಾಗೂ ಕಾರ್ಯಕ್ಷಮತೆಯನ್ನು ನಿರೀಕ್ಷಿಸುತ್ತೇನೆ ಎಂದು ಕಂದಾಯ ಇಲಾಖೆಯ ಆಯುಕ್ತರಾದ ಮುಲ್ಶೈಮುಹಿಲನ್ ಅವರುರಾಯಚೂರು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ಅಭಿನಂದನಾ ಪತ್ರನೀಡಿದ್ದಾರೆ.



Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.